ಸಂಪುಟ: 14 Volume | ಸಂಚಿಕೆ: 85 Issue | ಪುಟಗಳು 08 Pages | ಮಂಗಳವಾರ 07 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಭಕ್ತಿ ಒಳ್ಳೆಯ ಮಾತುಗಳನ್ನಾಡಿಸಿದರೆ ಸಾಲದು. ಅದು ಒಳ್ಳೆಯ ಕೆಲಸಗಳನ್ನು ಮಾಡಿಸಬೇಕು.

–ಡಿ.ವಿ.ಜಿ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



ಬೀದರ ಮತ್ತು ಬಸವಕಲ್ಯಾಣ ಪ್ರವಾಸದ ಅಂಗವಾಗಿ ಇಂದು ವಿಶೇಷ ವಿಮಾನದಲ್ಲಿ ಬೀದರ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಮುಖ್ಯಮಂತ್ರಿ ಡಿಕೆ. ಶಿವಕುಮಾರ್ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ, ಮಾಜಿ ಸಚಿವ ರಹೀಂಖಾನ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಜಾಬಶೇಟ್ಟಿ ಆತ್ಮೀಯವಾಗಿ ಸ್ವಾಗತಿಸಿದರು.



ಹುಮನಾಬಾದ್: ಬಸವಕಲ್ಯಾಣದ ನೂತನ ಅನುಭವ ಮಂಟಪದ ಕಾಮಗಾರಿಯ ಪ್ರಗತಿ ಪರಿಶೀಲನೆ ಹಿನ್ನಲೆ ಬೆಂಗಳೂರು ನಗರದ ವಿಮಾನ ನಿಲ್ದಾಣದಿಂದ ಸಿಎಂ ಡಿ. ಕೆ. ಶಿವಕುಮಾರ ಅವರೊಂದಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಬೀದರ್ ಜಿಲ್ಲೆಗೆ ಆಗಮಿಸುತ್ತಿರುವುದು.



ತೆಲಂಗಾಣ ರಾಜ್ಯದ ಕೈಗಾರಿಕಾ ಮತ್ತು ಐಟಿ ಸಚಿವ ಡಿ.ಶ್ರೀಧರ ಬಾಬು ಅವರು ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರನ್ನು ಅವರ ಬೆಂಗಳೂರಿನ ನಿವಾಸದಲ್ಲಿ ಗುರುವಾರ ಭೇಟಿಯಾಗಿ, ವಿಚಾರ ವಿನಿಮಯ ನಡೆಸಿದರು.



ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರು ಇಂದು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

## ಕಾಮಗಾರಿ ಪೂರ್ಣಗೊಳಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಚಿತ್ರದುರ್ಗ

ಜಿಲ್ಲೆಯ ಶಾಖಾ ಕಾಲುವೆಯ ಗೋನೂರು ಅಕ್ವಾಡಕ್ಟ್ ಕಾಮಗಾರಿ, ಕಡೂರಿನ ಭದ್ರಾ ಮೇಲ್ದಂಡೆ ಯೋಜನೆ ಇನ್ ಟೇಕ್ ಕಾಮಗಾರಿ, ಕೆರೆ ತುಂಬಿಸುವ ಯೋಜನೆಯ ಪಂಪ್ ಹೌಸ್ – 2 ಕಾಮಗಾರಿ ಹಾಗೂ ಅಜ್ಜಂಪುರ ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆಯ ವೈ ಜಂಕ್ಷನ್ ಕಾಮಗಾರಿಗಳ ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿ, ಪ್ರಗತಿ ಪರಿಶೀಲನೆ ನಡೆಸಲಾಯಿತು.

ಕಾಮಗಾರಿಯನ್ನು ನಿಗದಿತ ಸಮಯದೊಳಗೆ ಅತ್ಯಂತ ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ.

ಚಿತ್ರದುರ್ಗ ನಗರದ ಭದ್ರಾ ಮೇಲ್ದಂಡೆ ಯೋಜನಾ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಭಾಗವಹಿಸಿ, ಯೋಜನೆಯ ಇಂದಿನ ಸ್ಥಿತಿಗತಿ, ನೀರಾವರಿ ಸೌಲಭ್ಯ ಒದಗಿಸುವಿಕೆ ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು.



ಈ ಸಂದರ್ಭದಲ್ಲಿ ಶಾಸಕರಾದ ಶ್ರೀ ವೀರೇಂದ್ರ ಪಪ್ಪಿ, ಶ್ರೀ ಟಿ. ರಘುಮೂರ್ತಿ, ಶ್ರೀ ಗೋವಿಂದಪ್ಪ, ಶ್ರೀ ಶ್ರೀನಿವಾಸ ಗೌಡ ಹನುಮಯ್ಯ, ಶ್ರೀ ಆನಂದ್ ಎಸ್ ಕಡೂರು, ಮಾಜಿ ಸಂಸದರಾದ ಶ್ರೀ ಬಿ.ಎನ್. ಚಂದ್ರಪ್ಪ, ಶ್ರೀ ಆಂಜಿನಯ್ಯ, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಜಿ.ಎಸ್. ಮಂಜುನಾಥ್ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ರಂಗಮಂದಿರ: ಮೀಸಲು ಇಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಬಯಲು ರಂಗಮಂದಿರವನ್ನು ಸಾರ್ವಜನಿಕರ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಗಾಗಿ ಮಾತ್ರ ಮೀಸಲು ಇಡಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಹಂಪೇಶ್ ಜಿ. ಹರಗೋಳ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಯಲು ರಂಗಮಂದಿರವು ಸಾರ್ವಜನಿಕರ ಆಸ್ತಿಯಾಗಿದ್ದು, ಸಾಹಿತ್ಯ, ಕಲೆ, ಸಂಗೀತ ಹಾಗೂ ಸಾಮಾಜಿಕ ಕಾರ್ಯಕ್ರಮಗಳಿಗೆ ಆದ್ಯತೆ ನೀಡಬೇಕು. ಈ ಸ್ಥಳವನ್ನು ಇತರೆ ಉದ್ದೇಶಗಳಿಗೆ ಬಳಸುವುದರಿಂದ ಸಾರ್ವಜನಿಕರಿಗೆ ಹಾಗೂ ಕಲಾವಿದರಿಗೆ ತೊಂದರೆ–ಯಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಯಮನೂರಪ್ಪ ನಾಯಕ್, ಹುಲಿ ಹೈದರ್, ಪಂಪಾಪತಿ ಪಂಚಮಸಾಲಿ, ಆರ್.ಕೆ. ರಮೇಶ್ ಪೂಜಾರಿ, ಹುಲುಗಪ್ಪ ಡಮ್ರು, ಆರ್ಯಾಳ ಸಣ್ಣಪ್ಪ ದೇವರಮನಿ, ಸೋಮನಾಥ್



ನಾಯಕ್, ಕಟ್ಟಡ ಕಾರ್ಮಿಕರ ತಾಲೂಕು ಅಧ್ಯಕ್ಷ ಚಾಂದ್ ಪಾಷಾ ಹಾಗೂ ಕರ್ನಾಟಕ ವಿದ್ಯಾರ್ಥಿ ಸಂಘಟನೆಯ ದುರ್ಗೇಶ್ ಬರಗೂರು ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಬಯಲು ರಂಗಮಂದಿರವನ್ನು ಅದರ ಮೂಲ ಉದ್ದೇಶವಾದ ಸಾಂಸ್ಕೃತಿಕ ಚಟುವಟಿಕೆಗಳಿಗೆ ಮಾತ್ರ ಮೀಸಲಿಟ್ಟು, ಸಾರ್ವಜನಿಕರ ಹಿತಾಸಕ್ತಿಯನ್ನು ಕಾಪಾಡುವಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು ಒತ್ತಾಯಿಸಿದರು.

# ಕೈ–ಮೈತ್ರಿ ಜಟಾಪಟಿ SIR

### ಎಸ್‌ಐಆರ್ ಪ್ರಕ್ರಿಯೆ ಕಲಹ | ಕಾಂಗ್ರೆಸ್–ಬಿಜೆಪಿ, ಜೆಡಿಎಸ್ ಮೈತ್ರಿ ಪಡೆ ನಡುವೆ ಚಕಮಕಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧ ಕಾಂಗ್ರೆಸ್ ಹಾಗೂ ಬಿಜೆಪಿ, ಜೆಡಿಎಸ್ ಮೈತ್ರಿ ಪಡೆ ನಡುವೆ ಮಾತಿನ ಸಮರ ಶುರುವಾಗಿದೆ. ನ್ಯಾಯಸಮ್ಮತವಾಗಿ ನಡೆಯಬೇಕಾದ ಎಸ್‌ಐಆರ್ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಬುಡಮೇಲು ಮಾಡುವ ಬಹುದೊಡ್ಡ ಷಡ್ಯಂತ್ರವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ ಇದಕ್ಕೆ ಪ್ರತಿಯಾಗಿ ಮುಖ್ಯಮಂತ್ರಿ ಡಿ.ಕೆ.ಶುವಕುಮಾರ್ ಅವರು, ನಮ್ಮ ವಿರೋಧವಿದ್ದರೂ ಜನರ ಮತದಾನದ ಹಕ್ಕು ರಕ್ಷಣೆಗಾಗಿ ನಮ್ಮ ಸರ್ಕಾರ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಇದು ಚುನಾವಣಾ ಆಯೋಗದ ಪ್ರಕ್ರಿಯೆಯಾಗಿದ್ದು, ಇದರಲ್ಲಿ ಸರ್ಕಾರದ ಹಸ್ತಕ್ಷೇಪವಿಲ್ಲಎಂದು ಸಿಎಂ ಡಿ ಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ.

**ಜೋಶಿಗೆ ಸಿಎಂ ಉತ್ತರ:** ಎಸ್ ಐಆರ್ ವಿಚಾರವಾಗಿ ಕುಮಾರಸ್ವಾಮಿ ಹಾಗೂ ಪ್ರಹ್ಲಾದ್ ಜೋಷಿ ಅವರು ಮುಖ್ಯ ಚುನಾವಣಾ ಆಯುಕ್ತರಿಗೆ ದೂರು ನೀಡಿರುವ ಬಗ್ಗೆ ಕೇಳಿದಾಗ, ಎಸ್‌ಐಆರ್ ವಿಚಾರದಲ್ಲಿ ನಮ್ಮದೇ ಆದ ಭಿನ್ನಾಭಿಪ್ರಾಯವಿದೆ. ನ್ಯಾಯಾಲಯ ಈ ವಿಚಾರವಾಗಿ ತೀರ್ಪು ನೀಡಿದ್ದಾರೆ. ಈ ಪ್ರಕ್ರಿಯೆ ವೇಳಾಪಟ್ಟಿ ಬಗ್ಗೆ ನಮಗೆ ಅಸಮಾಧಾನವಿದ್ದು, ಅದರ ವಿರುದ್ಧವೂ ಕೋರ್ಟ್ ಮೊರೆ ಹೋಗುತ್ತೇವೆ ಎಂದಿದ್ದಾರೆ.

**ಮತದಾನವು ಎಲ್ಲರ ಹಕ್ಕು:** ನಾವು ಎಲ್ಲರಿಗೂ ಮತದಾನದ ಹಕ್ಕು ರಕ್ಷಣೆ ಮಾಡಬೇಕು ಎಂದು ನಮ್ಮ ಸರ್ಕಾರ ಚುನಾವಣಾ ಆಯೋಗದ ಜೊತೆ ಕೈ ಜೋಡಿಸಿದೆ. ನಮ್ಮಂತೆ ಬೇರೆ ಯಾವುದೇ ರಾಜ್ಯದಲ್ಲಿ ಈ ರೀತಿ ಸಹಕಾರ ನೀಡಿಲ್ಲ. ನಿಮ್ಮ ಮತದಾನದ ಹಕ್ಕು, ಬದುಕಿನ ಹಕ್ಕು ಎಂದು ಹೇಳುವ ಮೂಲಕ ಜನರಿಗೆ ಮತದಾನದ ಹಕ್ಕು ಉಳಿಸಿಕೊಳ್ಳಲು ಸರ್ಕಾರ ಜಾಗೃತಿ ಮೂಡಿಸುತ್ತಿದ್ದೇವೆ ಎಂದು ವಿವರಿಸಿದ್ದಾರೆ.

### ಅಕ್ರಮ ವಲಸಿಗರನ್ನು ಓಡಿಸಲಿಲ್ಲವೇಕೆ..?

ರಾಜ್ಯದಲ್ಲಿ ಸುಮಾರು 4.50 ಕೋಟಿ ಜನ ಜಾತಿ ಪ್ರಮಾಣಪತ್ರ ತೆಗೆದುಕೊಂಡಿ–ದ್ದಾರೆ. ಸರ್ಕಾರ ಕರ್ನಾಟಕ ಜನರ ಮತದಾನದ ಹಕ್ಕು ಉಳಿಸಿಕೊಳ್ಳಲು ಕರೆ ನೀಡುತ್ತಿದೆ. ವಿರೋಧ ಪಕ್ಷಗಳು ಸುಮ್ಮನೆ ಅಕ್ರಮ ಬಾಂಗ್ಲಾ ವಲಸಿಗರು ಎಂದು ಹೇಳುತ್ತಿದ್ದಾರೆ. ನಿಮ್ಮ ಕೈಯಲ್ಲಿ ಅಧಿಕಾರ ಇದ್ದಾಗ ಯಾಕೆ ಅವರನ್ನು ಓಡಿಸಲಿಲ್ಲ? ಆಗ ಯಾರು ತಡೆದಿದ್ದರು? ಎಂದು ಸಿಎಂ ಪ್ರಶ್ನಿಸಿದ್ದಾರೆ.



### ಅಕ್ರಮ ವಾಟ್ಸ್ ಆ್ಯಪ್ ಗ್ರೂಪ್?

ಎಸ್‌ಐಆರ್ ಸಂಬಂಧ ಅಕ್ರಮವಾಗಿ ವಾಟ್ಸ್ ಅಪ್ ಗ್ರೂಪ್ ಮಾಡಿ ಮಾಹಿತಿ ರವಾನೆ ಮಾಡಲಾಗುತ್ತಿದೆ. ತಮಗೆ ಬೇಕಾದ ಪ್ರದೇಶ, ಮದರಸಾ, ಮಸೀದಿಗಳಲ್ಲಿ ಎಸ್‌ಐಆರ್ ನಡೆಸಲಾಗುತ್ತಿದೆ. ಒಂದೇ ಒಂದು ಸಮುದಾಯ ವಿಶೇಷವಾಗಿ ಮುಸ್ಲಿಂ ಮುಖಂಡರ ಕೈಲಿ ಓಣಿಯಲ್ಲಿ, ಬೂತ ನಲ್ಲಿ ಅವರೇ ಎಸ್‌ಐಆರ್ ಮಾಡಿಕೊಂಡು ಬರುವ ಹಾಗೆ ಮಾಡಲಾಗುತ್ತಿದೆ ಎಂದು ಜೋಶಿ ದೂರಿದ್ದಾರೆ.

### ಬಿಜೆಪಿ ಆರೋಪಗಳೇನು..?

- ಅಕ್ರಮವಾಗಿ ವಾಟ್ಸ್ ಗ್ರೂಪ್ ರಚಿಸಿ ಬೇಕಾದ ಮಾಹಿತಿ ರವಾನೆ
- ಅಕ್ರಮ ನಡೆದ ಕಡೆ ಮತ್ತೆ ಎಸ್‌ಐಆರ್ ಮಾಡಲು ಆಗ್ರಹ
- ಬಾಂಗ್ಲಾದೇಶವರನ್ನು ಮತಪಟ್ಟಿಗೆ ಸೇರಿಸಲು ಸಂಚು
- ದೆಹಲಿಯಲ್ಲಿ ಮುಖ್ಯ ಚುನಾವಣಾ ಆಯುಕ್ತರಿಗೆ ದೂರು ನೀಡಲು ಕ್ರಮ

### ಬಾಂಗ್ಲಾ ಜನರ ಸೇರಿಸುವ ಸಂಚು

ಎಸ್‌ಐಆರ್ ಉದ್ದೇಶವನ್ನು ಬದಿಗಿಟ್ಟು ಬಾಂಗ್ಲಾದೇಶದ ಅಕ್ರಮ ನುಸುಳುಕೋರರನ್ನು ಮತಪಟ್ಟಿಗೆ ಸೇರಿಸುವ ಹುನ್ನಾರವನ್ನು ಸರ್ಕಾರ ನಡೆಸಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ನಂತರ ಬಾಂಗ್ಲಾದೇಶದವರನ್ನು ಇಲ್ಲಿ ಸೇರಿಸುವ ಸಂಚು ಮಾಡಲಾಗುತ್ತಿದೆ. ಮ್ಯಾಪಿಂಗ್ ಮಾಡುವಾಗ ತಂದೆ ತಾಯಿ ಹೀಗೆ ಕೆಲವರ ಸಂಬಂಧ ಮಾತ್ರ ಇರಬೇಕು ಎಂದು ಪ್ರತಿಪಕ್ಷ ವಾದಿಸುತ್ತಿದೆ.

## ಹೆಚ್‌ಎಂಟಿ: ಅರಣ್ಯ ಇಲಾಖೆಯನ್ನು ಛೂ ಬಿಟ್ಟ ಸರ್ಕಾರ: ಎಚ್‌ಡಿಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಷ್ಟ್ರದಲ್ಲಿಯೇ ಪ್ರತಿಷ್ಠಿತ ಕಾರ್ಖಾನೆಯಾಗಿದ್ದ ಹೆಚ್‌ಎಂಟಿ ಪುನಶ್ಚೇತನಕ್ಕೆ ಕೇಂದ್ರ ಸರ್ಕಾರ ಗಂಭೀರ ಪ್ರಯತ್ನ ನಡೆಸುತ್ತಿರುವ ಬೆನ್ನಲ್ಲಿಯೇ ರಾಜ್ಯ ಕಾಂಗ್ರೆಸ್ ಸರಕಾರವು ಅರಣ್ಯ ಇಲಾಖೆಯನ್ನು ಛೂ ಬಿಟ್ಟು ಅಡ್ಡಿಪಡಿಸಲು ಪ್ರಯತ್ನ ಮಾಡುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಅತ್ಯಂತ ಗಂಭೀರ ಆರೋಪ ಮಾಡಿದರು.

ಕೆಲ ಮಾಧ್ಯಮಗಳಲ್ಲಿ ಹೆಚ್‌ಎಂಟಿಗೆ ರಾಜ್ಯ ಅರಣ್ಯ ಇಲಾಖೆ ನೋಟಿಸ್ ನೀಡಿ ಭೂಮಿ ತೆರವು ಮಾಡಲು ಗಡುವು ವಿಧಿಸಿದೆ ಎಂಬ ವರದಿಗಳು ಬಂದ ಹಿನ್ನೆಲೆಯಲ್ಲಿ ತುರ್ತು ಮಾಧ್ಯಮಗೋಷ್ಠಿ ನಡೆಸಿದ ಕೇಂದ್ರ ಸಚಿವರು; ಈಗಾಗಲೇ ಇದಕ್ಕೆ ಸಂಬಂಧಿಸಿದ ವ್ಯಾಜ್ಯ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದೆ. ಇಂತಹ ಸೂಕ್ಷ್ಮ ಸಂದರ್ಭದಲ್ಲಿ ರಾಜ್ಯ ಸರಕಾರವು ಅರಣ್ಯ ಇಲಾಖೆಯ ಮೂಲಕ ಗಡುವು ವಿಧಿಸಿ ನೋಟಿಸ್ ನೀಡಿರುವುದು ನ್ಯಾಯಾಂಗ ನಿಂದನೆ ಹಾಗೂ ಕಾನೂನುಬಾಹಿರ ಕೂಡ ಆಗುತ್ತದೆ ಎಂದು ಸ್ಪಷ್ಟಪಡಿಸಿದರು.

ಹೆಚ್‌ಎಂಟಿ ವಶದಲ್ಲಿರುವ 430 ಎಕರೆ ಜಮೀನು ಅರಣ್ಯ ಪ್ರದೇಶ ಆಗಿರುವುದರಿಂದ ಕೂಡಲೇ ಅಷ್ಟು ಜಾಗವನ್ನು ಅರಣ್ಯ ಇಲಾಖೆಗೆ ಬಿಟ್ಟುಕೊಡಬೇಕು ಎಂದು ಬೆಂಗಳೂರು ನಗರ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ಎನ್.ರವೀಂದ್ರ ಕುಮಾರ್ ಆದೇಶ ನೀಡಿರುವುದು ನ್ಯಾಯಾಂಗ ಕಲಾಪಗಳಿಗೆ ಅಡ್ಡಿಪಡಿಸಿದಂತೆ ಆಗುತ್ತದೆ. ಅಲ್ಲದೆ ಈ ಅಧಿಕಾರಿಗೆ ಅಂತಹ ಆದೇಶ ನೀಡುವ ಅಧಿಕಾರ ವ್ಯಾಪ್ತಿಯು ಇರುವುದಿಲ್ಲ. ಈ ಬಗ್ಗೆ ಹೆಚ್‌ಎಂಟಿ ನ್ಯಾಯಾಲಯದಲ್ಲಿಯೇ ಪ್ರಶ್ನೆ ಮಾಡುತ್ತದೆ ಎಂದು ಸಚಿವರು ಹೇಳಿದರು.

ಅನೇಕ ವರ್ಷಗಳಿಂದ ನಷ್ಟದ ಸುಳಿಗೆ ಸಿಲುಕಿ ನೆನೆಗುದಿಗೆ ಬಿದ್ದಿದ್ದ ಹೆಚ್‌ಎಂಟಿ ಕಾರ್ಖಾನೆಗೆ ಮರುಜೀವ ನೀಡುವ ಉದ್ದೇಶದಿಂದ ನಾನು ಪ್ರಧಾನ ಮಂತ್ರಿಗಳು ಮತ್ತು ಕೇಂದ್ರದ ಹಣಕಾಸು ಸಚಿವರನ್ನು ಒಪ್ಪಿಸಿ ವಿಶೇಷ ಪ್ಯಾಕೇಜ್ ತರುವ ಬಗ್ಗೆ ಪ್ರಯತ್ನ ಮಾಡುತ್ತಿದ್ದೆ. ಈ ಕಾರ್ಖಾನೆಯು ನಾನು ಸಚಿವನಾಗಿರುವ ಬೃಹತ್ ಕೈಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಪ್ಯಾಕೇಜ್ ಘೋಷಣೆ ಹತ್ತಿರದಲ್ಲಿ ಇರುವಾಗಲೇ ರಾಜ್ಯ ಸರಕಾರ ದುರುದ್ದೇಶದಿಂದ ಇಂತಹ ನೋಟಿಸ್ ಕೊಡಿಸಿದೆ ಎಂದು ಸಚಿವ ಕುಮಾರಸ್ವಾಮಿ ಆರೋಪ ಮಾಡಿದರು.

## ಹೆಚ್ಚುವರಿ ಬಸ್ ಸೇವೆಗೆ ಸೇನೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕ ಕೇಂದ್ರವಾಗಿ ಸುಮಾರು ವರ್ಷ ಕಳೆದರೂ ಕೂಡ ಇನ್ನು ಚಿಟಗುಪ್ಪ ತಾಲೂಕಿಗೆ ಬಸ್ಸಿನ ವ್ಯವಸ್ಥೆ ಇಲ್ಲ, ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಓಡಿಸುವಂತೆ ಆಗ್ರಹಿಸಿ ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಇವರ ನೇತೃತ್ವದಲ್ಲಿ ಸೋಮವಾರ ಪಟ್ಟಣದ ಗಾಂಧಿ ವೃತ್ತದಿಂದ ಬಸವರಾಜ ವೃತ್ತದ ವರೆಗೆ ಪ್ರತಿಭಟನೆ ಮೆರವಣಿಗೆ ನಡೆಸಿ ಬಸವರಾಜ ವೃತ್ತದಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಸ್ಥಳಕ್ಕೆ ಸಾರಿಗೆ ಇಲಾಖೆಯ ಡಿ.ಸಿ. ಅವರು ಬರುವವರೆಗೂ ಪ್ರತಿಭಟನೆ ಹಿಂದೆ ಪಡೆಯುವುದಿಲ್ಲ ಎಂದು ಪಟ್ಟು ಹಿಡಿದರು. ಹುಮಾನಬಾದದಿಂದ ಹೈದ್ರಾಬಾದಕ್ಕೆ ಹೋಗುವ ಬಸ್ಸನ್ನು ಚಿಟಗುಪ್ಪ ಮಾರ್ಗವಾಗಿ 2ಬಸ್ ಸಂಚರಿಸಬೇಕು, ಗ್ರಾಮೀಣ ಪ್ರದೇಶಗಳಾದ ನಿರ್ಣಾ, ಮುಸ್ತರಿ, ಇಟಗಾ, ಕೋಡಂಬಲ್,

### ವಾರದಲ್ಲಿ ಬೇಡಿಕೆ ಈಡೇರಿಸಲು ಡಿಸಿ ಭರವಸೆ

ಬಸ್ ಸಾರಿಗೆ ಇಲಾಖೆ ಡಿಸಿ ಅವರು ಕರೆ ಮುಖಾಂತರ ಮಾತನಾಡಿ, ಒಂದು ವಾರದಲ್ಲಿ ನಿಮ್ಮ ಬೇಡಿಕೆಗಳು ಈಡೇರಿಸುವುದಾಗಿ ಭರವಸೆ ನೀಡುತ್ತಿದಂತೆ ಪ್ರತಿಭಟನಾಕಾರರು ಇಲ್ಲ, ನಿತ್ಯ 2 ಹೆಚ್ಚುವರಿ ಬಸ್ ಓಡಾಡಿಸಬೇಕು ಎಂದಾಗ ಒಂದು ವಾರದ ಒಳಗಾಗಿ 1ಬಸ್ ಓಡಿಸುವುದಾಗಿ ತಿಳಿಸಿದರು. ನಂತರ ಪ್ರತಿಭಟನೆ ಕೈ ಬಿಡಲಾಯಿತು.



ಚಿಂಚೋಳಿ ಸೇರಿದಂತೆ ವಿವಿಧ ಗ್ರಾಮಗಳಿಂದ ಪಟ್ಟಣಕ್ಕೆ ಶಾಲಾ ಕಾಲೇಜುಗಳಿಗೆ ನೂರಾರು ವಿದ್ಯಾರ್ಥಿಗಳು ಹೆಚ್ಚಿನ ವಿದ್ಯಾಭ್ಯಾಸಕ್ಕೆ ಹಾಗೂ ಇತರೆ ಕೆಲಸಗಳಿಗೆ ಸಾರ್ವಜನಿಕರು ಪಟ್ಟಣಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ತೆರಳುತ್ತಾರೆ. ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಬಸ್ ಓಡಿಸಬೇಕು ಎಂದು ಆಗ್ರಹಿಸಿದರು.

ಬಸ್ ನಿಲ್ದಾಣದ ನಿಲ್ದಾಣಾಧಿಕಾರಿ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಹೆಚ್ಚುವರಿ ಬಸ್ ಓಡಿಸುವ ಬಗ್ಗೆ ಮೇಲಧಿಕಾರಿ ಗಮನಕ್ಕೆ ತರಲಾಗುವುದೆಂದು ಭರವಸೆ ನೀಡಿದರು. ಆದರೆ ಡಿಸಿ ಬರುವವರೆಗೆ ಪ್ರತಿಭಟನೆ ನಿಲ್ಲಿಸುವುದಿಲ್ಲ ಎಂದ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಜಿಲ್ಲಾಧ್ಯಕ್ಷ ಸುಭಾಷ ಕೆನೆಡೆ, ತಾಲೂಕಾಧ್ಯಕ್ಷ ಪವನ ಪೂಜಾರಿ, ರಮೇಶ್ ಧೂಳ, ಹಮ್ಮಿದ್ ನಿರ್ಣಾ, ಶಿವರಾಜ ಸ್ವಾಮಿ ಫಾತ್ಮಪುರ್, ತಿಪ್ಪಣ್ಣ ರೆಡ್ಡಿ, ನಿಜಾಮ್ ಹಕ್ಕಿಮ್ ಸೇರಿದಂತೆ ಅಪಾರ ಕನ್ನಡ ಸೇನೆ ಕಾರ್ಯಕರ್ತರು ಪ್ರತಿಭಟನೆ ಪಾಲ್ಗೊಂಡಿದ್ದರು.

## ಹೆಣ್ಣು ಎಂದರೆ ಭೂಮಿ, ಧೈರ್ಯ ಶಕ್ತಿ: ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ನಮ್ಮ ಸರ್ಕಾರ ಮಹಿಳೆಯರ ಸಬಲೀಕರಣಕ್ಕೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ರಾಜ್ಯದ ಮಹಿಳೆಯರು ನಮಗೆ ಬೆಂಬಲ ನೀಡಿದ್ದು, ಅವರಿಗೆ ಶಕ್ತಿ ತುಂಬಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.

ಬಸವಕಲ್ಯಾಣದ ಬಸವ ಮಹಾಮನೆಯಲ್ಲಿ ಸೋಮವಾರ ನಡೆದ ಅಕ್ಕಪಡೆ–ಮಹಿಳೆಯರ ಶಕ್ತಿ ಪ್ರದರ್ಶನ ಮತ್ತು ಆತ್ಮರಕ್ಷಣಾ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಭಾಗವಹಿಸಿ ಮಾತನಾಡಿ, ಹೆಣ್ಣು ಕುಟುಂಬದ ಕಣ್ಣು. ಹೆಣ್ಣು ಎಂದರೆ ಭೂಮಿ, ಧೈರ್ಯ, ಭರವಸೆ, ಒಗ್ಗಟ್ಟು, ಶಕ್ತಿ, ಬೆಳಕು. ನಿಮ್ಮ ಮಾರ್ಗದರ್ಶನದಂತೆ ಪ್ರತಿಯೊಂದು ಕುಟುಂಬ ಬೆಳಗುತ್ತಿದೆ. ನಾರಿ ಶಕ್ತಿ ದೇಶದ ಶಕ್ತಿ. ನಾನು ಇಂದು ಬಸವಕಲ್ಯಾಣದಲ್ಲಿರುವ ಬಸವಣ್ಣನವರ ಅನುಭವ ಮಂಟಪದಿಂದ ಬರ ಪರಿಸ್ಥಿತಿ ಅಧ್ಯಯನ ಪ್ರವಾಸ ಆರಂಭಿಸಲು ಬಂದಿದ್ದೇನೆ. ಇಲ್ಲಿಂದ ಕಲಬುರ್ಗಿಗೆ ಹೋಗಿ, ಕಲ್ಯಾಣ ಕರ್ನಾಟಕದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಜೊತೆ ಚರ್ಚೆ ಮಾಡುತ್ತೇನೆ. ನಾವು ಯಾವುದೇ ಗ್ರಾಮಕ್ಕೆ ಹೋದರೂ ಅಲ್ಲಿ ಗ್ರಾಮದೇವತೆ ಬಗ್ಗೆ ಕೇಳುತ್ತೇವೆ. ನಮ್ಮ ಭೂಮಿಯನ್ನು ಮಾತೃಭೂಮಿ, ಭೂಮಿತಾಯಿ ಎಂದು ಪರಿಗಣಿಸುತ್ತೇವೆ ಎಂದು ಶ್ಲಾಘಿಸಿದ್ದಾರೆ.



### ಮಹಿಳೆಯರಲ್ಲೂ ಬೇಕು ನಾಯತಕತ್ವ

ನಾವು ಮಾತೃ ದೇವೋಭವ ಎಂದು ಪರಿಗಣಿಸಿದ್ದೇವೆ. ನೀವೆಲ್ಲರೂ ನಮ್ಮ ಜೊತೆ ಕೈಜೋಡಿಸಿ, ನಮಗೆ ಶಕ್ತಿ ತುಂಬಿದ್ದೀರಿ. ನಿಮಗೆ ಶಕ್ತಿ ನೀಡುವ ಜವಾಬ್ದಾರಿ ನಮ್ಮದು. ನಿಮ್ಮಲ್ಲಿ ನಾಯಕತ್ವ ಬೆಳೆಯಬೇಕು. ಪಂಚಾಯ್ತಿಯಿಂದ ಸಂಸತ್ತಿನವರೆಗೂ ನಾಯಕತ್ವ ಬೆಳೆಯಬೇಕು. ರಾಜಕೀಯವಾಗಿ ಮಾತ್ರವಲ್ಲ, ನಿಮ್ಮ ನಿಮ್ಮ ಕ್ಷೇತ್ರದಲ್ಲಿ ನಾಯಕರಾಗಿ ಬೆಳೆಯಬೇಕು. ನಿಮ್ಮ ಜೊತೆಯಲಿ ಈ ಸರ್ಕಾರ ಇರಲಿದೆ ಎಂದು ಭರವಸೆ ನೀಡಿದ್ದಾರೆ.

## ರಾಮ ಮಂದಿರದ ಹಣ ಲೂಟಿ ಮಾಡಿದ್ದು ಬಡವರು, ದಲಿತರು ಅಲ್ಲ; RSS-BJP ಬೆಂಬಲಿಗರು: ಮಲ್ಲಿಕಾರ್ಜುನ ಖರ್ಗೆ

# ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡಬೇಕು

ಭಾರತದ ಗ್ರಾಮೀಣ ಪ್ರದೇಶಗಳು ಪ್ರತಿಭೆಗಳ ಆಗರವಾಗಿವೆ. ಅನೇಕ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳು ಗ್ರಾಮೀಣ ಹಿನ್ನೆಲೆಯಿಂದಲೇ ಹೊರಹೊಮ್ಮಿದ್ದಾರೆ. ಆದರೆ ಸೂಕ್ತ ಸೌಲಭ್ಯಗಳು, ತರಬೇತಿ ಮತ್ತು ಪ್ರೋತ್ಸಾಹದ ಕೊರತೆಯಿಂದ ಅನೇಕ ಪ್ರತಿಭೆಗಳು ಬೆಳಕಿಗೆ ಬಾರದೆ ಉಳಿಯುತ್ತಿವೆ. ಆದ್ದರಿಂದ ಗ್ರಾಮೀಣ ಕ್ರೀಡೆಗಳಿಗೆ ಸರ್ಕಾರ ಮತ್ತು ಸಮಾಜ ಹೆಚ್ಚಿನ ಆದ್ಯತೆ ನೀಡುವುದು ಅತ್ಯಗತ್ಯ.

## ಸಂಪಾದಕೀಯ


**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**




ಗ್ರಾಮೀಣ ಕ್ರೀಡೆಗಳು ಕೇವಲ ಮನರಂಜನೆಯ ಸಾಧನವಲ್ಲ; ಅವು ದೈಹಿಕ ಸಾಮರ್ಥ್ಯ, ಶಿಸ್ತು, ಧೈರ್ಯ ಮತ್ತು ತಂಡದ ಮನೋಭಾವವನ್ನು ಬೆಳೆಸುವ ಮಹತ್ವದ ಮಾಧ್ಯಮಗಳಾಗಿವೆ. ಕಬಡ್ಡಿ, ಖೋ-ಖೋ, ಕುಸ್ತಿ, ವಾಲಿಬಾಲ್, ಅಥ್ಲೆಟಿಕ್ಸ್ ಸೇರಿದಂತೆ ಅನೇಕ ಕ್ರೀಡೆಗಳಲ್ಲಿ ಗ್ರಾಮೀಣ ಯುವಕರು ಉತ್ತಮ ಸಾಧನೆ ಮಾಡುವ ಸಾಮರ್ಥ್ಯ ಹೊಂದಿದ್ದಾರೆ.

ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಿ, ಕ್ರೀಡಾ ಸಾಮಗ್ರಿಗಳನ್ನು ಒದಗಿಸಿ, ಅರ್ಹ ತರಬೇತುದಾರರನ್ನು ನೇಮಿಸಬೇಕು. ಶಾಲಾ ಮತ್ತು ಕಾಲೇಜು ಮಟ್ಟದಲ್ಲಿ ಗ್ರಾಮೀಣ ಕ್ರೀಡಾಕೂಟಗಳನ್ನು ನಿಯಮಿತವಾಗಿ ಆಯೋಜಿಸುವ ಮೂಲಕ ಯುವ ಪ್ರತಿಭೆಗಳನ್ನು ಗುರುತಿಸಿ, ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯುವ ವ್ಯವಸ್ಥೆ ರೂಪಿಸಬೇಕು.

ಗ್ರಾಮೀಣ ಕ್ರೀಡೆಗಳಿಗೆ ಹೂಡಿಕೆ ಮಾಡುವುದು ದೇಶದ ಭವಿಷ್ಯಕ್ಕೆ ಹೂಡಿಕೆ ಮಾಡಿದಂತೆಯೇ. ಸರ್ಕಾರ, ಜನಪ್ರತಿನಿಧಿಗಳು, ಕ್ರೀಡಾ ಸಂಘಟನೆಗಳು ಮತ್ತು ಸಮಾಜ ಒಟ್ಟಾಗಿ ಗ್ರಾಮೀಣ ಕ್ರೀಡಾಪಟುಗಳಿಗೆ ಅಗತ್ಯವಾದ ಬೆಂಬಲ ನೀಡಿದರೆ, ನಮ್ಮ ದೇಶಕ್ಕೆ ಇನ್ನಷ್ಟು ಪ್ರತಿಭಾವಂತ ಕ್ರೀಡಾಪಟುಗಳು ದೊರೆಯಲಿದ್ದಾರೆ.

ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡುವುದು ಇಂದಿನ ಅಗತ್ಯವಾಗಿದೆ. ಪ್ರತಿಭೆಗೆ ಅವಕಾಶ ಸಿಕ್ಕಾಗ ಮಾತ್ರ ಸಾಧನೆ ಸಾಧ್ಯ. ಆದ್ದರಿಂದ ಗ್ರಾಮೀಣ ಕ್ರೀಡಾ ಅಭಿವೃದ್ಧಿಯನ್ನು ಸರ್ಕಾರ ತನ್ನ ಪ್ರಮುಖ ಆದ್ಯತೆಯಾಗಿ ಪರಿಗಣಿಸಿ, ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು.

# ಡಾ.ಸುನೀತಾ ಮಹೇಶ್ವರಿಗೆ ಅಂತರರಾಷ್ಟ್ರೀಯ ಐಕಾನ್ ಪ್ರಶಸ್ತಿ




**ಬೀದರ್:** ಬೀದರ್ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ವಿಭಾಗದಲ್ಲಿ ಅತಿಥಿ ಉಪನ್ಯಾಸಕಿಯಾಗಿ ಸೇವೆ ಸಲ್ಲಿಸುತ್ತಿರುವ ಡಾ. ಸುನೀತಾ ಮಹೇಶ್ವರಿ ಅವರಿಗೆ ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿನ ಸಾಧನೆಯನ್ನು



ಗುರುತಿಸಿ ಪ್ರತಿಷ್ಠಿತ ಅಂತರರಾಷ್ಟ್ರೀಯ ಐಕಾನ್ ಪ್ರಶಸ್ತಿ (International Icon Award) ನೀಡಿ ಗೌರವಿಸಲಾಗುತ್ತಿದೆ.

ಬೆಳಕು ಸಾಹಿತ್ಯಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್, ಬಳ್ಳಾರಿ ವತಿಯಿಂದ ಆಯೋಜಿಸಿರುವ 125ನೇ ಬೆಳಕು ಸಮ್ಮೇಳನದ ಅಂಗವಾಗಿ ಜುಲೈ 12ರಂದು ಹುಬ್ಬಳ್ಳಿಯ ಗವಾಯಿ ಗಂಧರ್ವ ಕಲಾ ಮಂದಿರದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಟ್ರಸ್ಟ್ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಕಲಚೇತನರಾಗಿದ್ದರೂ ಬಡತನವನ್ನು ಮೆಟ್ಟಿ ನಿಂತು ಶಿಕ್ಷಣದ ಮೂಲಕ ಸಾಧನೆ ಮಾಡಿದ ಡಾ. ಸುನೀತಾ ಮಹೇಶ್ವರಿ ಅವರು, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ "ಶಿಕ್ಷಣವೇ ಪ್ರಗತಿಗೆ ಮೂಲ" ಎಂಬ ಆದರ್ಶವನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ. ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಪದವಿ, ಬಿ.ಎಡ್., ಎಂ.ಎ. ಹಾಗೂ ಪಿಎಚ್‌ಡಿ ಪದವಿವರೆಗೆ ಉನ್ನತ ಶಿಕ್ಷಣ ಪಡೆದು, ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ "ಹೈದರಾಬಾದ್ ಕರ್ನಾಟಕದ ಲಂಬಾಣಿ ಸಂಸ್ಕೃತಿ ಹಾಗೂ ಗುರು ಪರಂಪರೆ" ವಿಷಯದ ಕುರಿತು ಸಂಶೋಧನೆ ನಡೆಸಿ ಡಾಕ್ಟರೇಟ್ ಪದವಿ ಪಡೆದಿದ್ದಾರೆ. ಪ್ರಸ್ತುತ ಬೀದರ್ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ವಿಭಾಗದಲ್ಲಿ ಅತಿಥಿ ಉಪನ್ಯಾಸಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಅವರು ವಿದ್ಯಾರ್ಥಿಗಳ ಮೆಚ್ಚಿನ ಉಪನ್ಯಾಸಕಿಯಾಗಿದ್ದಾರೆ. ಲಂಬಾಣಿ ಗುರುಪರಂಪರೆ, ಲಂಬಾಣಿ ಸಾಹಿತ್ಯ ಸೇರಿದಂತೆ ಹಲವು ಕೃತಿಗಳನ್ನು ರಚಿಸಿದ್ದು, ವಿವಿಧ ಪತ್ರಿಕೆಗಳಲ್ಲಿ ಲೇಖನಗಳನ್ನು ಪ್ರಕಟಿಸಿದ್ದಾರೆ. ಶೈಕ್ಷಣಿಕ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿನ ಅವರ ಸೇವೆಯನ್ನು ಪರಿಗಣಿಸಿ ಈ ಹಿಂದೆ ಸಿದ್ಧಗಂಗಾಶ್ರೀ ಪ್ರಶಸ್ತಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಚಾಲುಕ್ಯ ರತ್ನ, ಕರ್ನಾಟಕ ರಾಜ್ಯೋತ್ಸವ ರತ್ನ ಹಾಗೂ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ ಸೇರಿದಂತೆ ಅನೇಕ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ಗೌರವಗಳು ಲಭಿಸಿವೆ. ಇದೀಗ ಅವರ ಶೈಕ್ಷಣಿಕ ಮತ್ತು ಸಾಹಿತ್ಯ ಕ್ಷೇತ್ರದ ನಿರಂತರ ಸೇವೆಯನ್ನು ಪರಿಗಣಿಸಿ ಬೆಳಕು ಸಾಹಿತ್ಯಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಅಂತರರಾಷ್ಟ್ರೀಯ ಐಕಾನ್ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಬೀದರ್ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ.

# ಕಾನೂನು ಶಿಕ್ಷಣ ನ್ಯಾಯಾಲಯದ ಕಾರ್ಯವಿಧಾನಗಳಿಗೆ ಸೀಮಿತವಾಗಿಲ್ಲ,ಮಾನವೀಯ ಆಯಾಮ ಹೊಂದಿದೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಾನೂನು ಶಿಕ್ಷಣವು ಕೇವಲ ಪಠ್ಯಪುಸ್ತಕಗಳು, ಪರೀಕ್ಷೆಗಳು ಅಥವಾ ನ್ಯಾಯಾಲಯದ ಕಾರ್ಯವಿಧಾನಗಳಿಗೆ ಸೀಮಿತವಾಗಿಲ್ಲ, ಅದು ಮಾನವೀಯ ಆಯಾಮವನ್ನು ಸಹ ಹೊಂದಿದೆ. ಪರಾನುಭೂತಿ, ತಾಳ್ಮೆ, ನೀತಿಶಾಸ್ತ್ರ ಮತ್ತು ಜವಾಬ್ದಾರಿಯನ್ನು ಕಾನೂನು ಬಯಸುತ್ತದೆ. ಇದನ್ನು ಕಾನೂನು ವಿದ್ಯಾರ್ಥಿಗಳು ಅರಿಯಬೇಕೆಂದು ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರು ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಪ್ರಧಾನ ಪೋಷಕರಾಗಿರುವ ನ್ಯಾ. ವಿಭು ಭಕ್ರು ತಿಳಿಸಿದರು.

ಸೋಮವಾರ ಇಲ್ಲಿನ ಪಿ.ಡಿ.ಎ. ಕಾಲೇಜಿನ ಆವರಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹಾಗೂ ಕಲಬುರಗಿ ವಲಯದ ಕಾನೂನು ಪದವಿ ಮಹಾವಿದ್ಯಾಲಯಗಳ ಸಂಯುಕ್ತಾಶ್ರಯದಲ್ಲಿ "ತರಗತಿ ಕೊಠಡಿಯಿಂದ ನ್ಯಾಯಾಲಯದ ಕೋಣೆಗೆ: ಸಾಮಾಜಿಕ ನ್ಯಾಯಕ್ಕೆ ವೇಗವರ್ಧಕರಾಗಿ ಕಾನೂನು ವಿದ್ಯಾರ್ಥಿಗಳು" ಘೋಷವಾಕ್ಯದ ಕಾನೂನು ವಿದ್ಯಾರ್ಥಿಗಳಿಗೆ ಆಯೋಜಿಸಿದ ಐದನೇ ವಲಯ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಕಾನೂನು ಕಾಲೇಜುಗಳಿಗೆ ಪ್ರವೇಶಿಸುವ ಅನೇಕ ವಿದ್ಯಾರ್ಥಿಗಳು ವಕೀಲರು, ನ್ಯಾಯಾಧೀಶರು, ಶಿಕ್ಷಣ ತಜ್ಞರು ಅಥವಾ ನಾಗರಿಕ ಸೇವಕರಾಗಲು ಬಯಸುತ್ತಾರೆ. ಇವು ನಿಜಕ್ಕೂ ಉದಾತ್ತ ಆಕಾಂಕ್ಷೆಗಳು. ಅದೇ ಸಮಯದಲ್ಲಿ, ಕಾನೂನು ಶಿಕ್ಷಣವು ಸಮಾಜದ ಬಗ್ಗೆ ದೊಡ್ಡ ಜವಾಬ್ದಾರಿಯನ್ನು ಸಹ ಹೊಂದಿದೆ. ಕಾನೂನು ವೃತ್ತಿಯು ಯಾವಾಗಲೂ ಗೌರವಾನ್ವಿತ ಸ್ಥಾನವನ್ನು ಹೊಂದಿದೆ. ಏಕೆಂದರೆ ಅದು ಸಾಂವಿಧಾನಿಕ ಮೌಲ್ಯಗಳ ರಕ್ಷಣೆ ಮತ್ತು ನ್ಯಾಯದ ಪ್ರವೇಶದೊಂದಿಗೆ ನಿಕಟ ಸಂಪರ್ಕ ಹೊಂದಿದೆ ಎಂದರು.

ಭಾರತದ ಸಂವಿಧಾನವು ದೇಶದ ಪ್ರತಯೊಬ್ಬ ನಾಗರಿಕನಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಒದಗಿಸಿದೆ. ಆದಾಗ್ಯೂ, ನ್ಯಾಯವು ಹಿಂದುಳಿದ ಮತ್ತು ಅಂಚಿನಲ್ಲಿರುವ ವರ್ಗಗಳನ್ನು ಒಳಗೊಂಡಂತೆ ನಮ್ಮ ಸಮಾಜದ ಪ್ರತಿಯೊಂದು ವರ್ಗವನ್ನು ತಲುಪಿದಾಗ ಮಾತ್ರ ಅದು ಪ್ರಜಾ ಪ್ರಭುತ್ವ ವ್ಯವಸ್ಥೆಯ ಮೂಲ ಉದ್ದೇಶ ಈಡೇರಿದಂತಾಗುತ್ತದೆ ಎಂದರು.

ಕಾನೂನು ವಿದ್ಯಾರ್ಥಿಗಳು ಮೊದಲು ಸಾಂವಿಧಾನಿಕ ತತ್ವಗಳು, ನ್ಯಾಯ, ಸಮಾನತೆ, ಹಕ್ಕುಗಳು, ಕರ್ತವ್ಯಗಳು ಮತ್ತು ಕಾನೂನಿನ ನಿಯಮಗಳ ಬಗ್ಗೆ ಕಲಿಯುವುದು ತರಗತಿ ಕೋಣೆಗಳ ಒಳಗೆ. ಆದಾಗ್ಯೂ, ಕಾನೂನು ಶಿಕ್ಷಣದ ನಿಜವಾದ ಉದ್ದೇಶವು ಕೇವಲ ಸೈದ್ಧಾಂತಿಕ ಜ್ಞಾನವನ್ನು ಪಡೆಯುವುದು ಮಾತ್ರವಲ್ಲ, ಸಾಮಾಜಿಕ ಪರಿವರ್ತನೆಯಲ್ಲಿ ಕಾನೂನನ್ನು ಹೇಗೆ ಪ್ರಬಲ ಸಾಧನವಾಗಿ ಬಳಸಬಹುದು ಎಂಬುದರ ಮೇಲೆ ಅವಲಂಬಿಸಿದೆ ಎಂದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯದಲ್ಲಿ ನಿರಂತರ ಕಾನೂನು ಜಾಗೃತಿ ಕಾರ್ಯಕ್ರಮಗಳು, ಮಧ್ಯಸ್ಥಿಕೆ ಉಪಕ್ರಮಗಳು ಮತ್ತು ವಿದ್ಯಾರ್ಥಿ-ಆಧಾರಿತ ಕಾನೂನು ನೆರವು ಕಾರ್ಯಕ್ರಮಗಳ ಮೂಲಕ ಶ್ಲಾಘನೀಯ ಪ್ರಯತ್ನಗಳನ್ನು ಹಮ್ಮಿಕೊಳ್ಳುತ್ತಿದೆ. ಇಂತಹ ಉಪಕ್ರಮಗಳು ನ್ಯಾಯ ವಿತರಣಾ ವ್ಯವಸ್ಥೆಯಲ್ಲಿ ಸಾರ್ವಜನಿಕ ವಿಶ್ವಾಸವನ್ನು ಬಲಪಡಿಸುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

**ಸಣ್ಣ ಪ್ರಯತ್ನ ಸಾಮಾಜಿಕ ಬದಲಾವಣೆಗೆ ಕಾರಣವಾಗಬಹುದು:** ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾಗಿರುವ ನ್ಯಾ. ಅನು ಸಿವರಾಮನ್ ಮಾತನಾಡಿ, ಕಾನೂನು ಶಿಕ್ಷಣದ ನಿಜವಾದ ಉದ್ದೇಶ ಕೇವಲ ಯಶಸ್ವಿ ವೃತ್ತಿಪರರನ್ನು ಉತ್ಪಾದಿಸುವುದಲ್ಲ, ಬದಲಾಗಿ ಸಮಾಜದ ಸುಧಾರಣೆಗಾಗಿ ತಮ್ಮ ಜ್ಞಾನವನ್ನು ಬಳಸುವ ವ್ಯಕ್ತಿಗಳನ್ನು ಸೃಷ್ಟಿಸುವುದು. ಸಮಾಜದ ದುರ್ಬಲ ವರ್ಗಗಳಿಗೆ ಸಹಾಯ ಮಾಡಲು ವಿದ್ಯಾರ್ಥಿಗಳು ಮಾಡುವ ಸಣ್ಣ ಪ್ರಯತ್ನಗಳು ಸಹ ಅರ್ಥಪೂರ್ಣ ಮತ್ತು ಶಾಶ್ವತ ಸಾಮಾಜಿಕ ಬದಲಾವಣೆಯನ್ನು ಉಂಟುಮಾಡಬಹುದು ಎಂದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯಾದ್ಯಂತ ಕಾನೂನು ಜಾಗೃತಿಯನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ. ಆರ್ಥಿಕವಾಗಿ ದುರ್ಬಲ ಮತ್ತು ಮುಖ್ಯವಾಹಿನಿಯಿಂದ ವಂಚಿತ ವರ್ಗಗಳಿಗೆ ಸಮಾನ ನ್ಯಾಯ ಮತ್ತು ಉಚಿತ ಕಾನೂನು ನೆರವನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ನಿರಂತರ ಕೆಲಸ ಮಾಡುತ್ತದೆ. ಭಾರತ ನ್ಯಾಯ ವರದಿಯ ಪ್ರಕಾರ 2022 ಮತ್ತು 2025ರಲ್ಲಿ ದುರ್ಬಲ ವರ್ಗಗಳ ಬಾಗಿಲಿಗೆ ಕಾನೂನು ಸೇವೆಗಳನ್ನು ಒದಗಿಸುವಲ್ಲಿ ದೇಶದಲ್ಲಿಯೇ ನಂಬರ್ 1 ಸ್ಥಾನ ಪಡೆದಿರುವುಇದು ನಮ್ಮೆಲ್ಲರಿಗೆ ಸಂತೋಷದ ವಿಚಾರವಾಗಿದೆ ಎಂದರು.

# ನಿವೃತ್ತ ಜೀವನ ಸಮಾಜ ಸೇವೆಗೆ ಮೀಸಲಿಡಿ: ಡಾ.ಬಸವಲಿಂಗ ಪಟ್ಟದ್ದೇವರು

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿ ಅವರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿ ನಿವೃತ್ತಿಯಾಗುವ ಶಿಕ್ಷಕರು ತಮ್ಮ ನಿವೃತ್ತಿ ಜೀವನವನ್ನು ಸಮಾಜ ಸೇವೆಗೆ ಮೀಸಲಿಟ್ಟು ಬದುಕು ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ನಗರದ ಪುರಭವನದಲ್ಲಿ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ಲಖಣಗಾಂವ ವತಿಯಿಂದ ಶನಿವಾರ ಆಯೋಜಿಸಿದ್ದ ನಿವೃತ್ತ ಶಿಕ್ಷಕ ಬಸವರಾಜ ಮಡಿವಾಳ ಅವರ ಸನ್ಮಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕನ ಪಾತ್ರ ಅತ್ಯಂತ ಮಹತ್ವವಾದುದು. ಒಬ್ಬ ಶಿಕ್ಷಕ ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಿ ಮಕ್ಕಳಿಗೆ ಭವಿಷ್ಯ ರೂಪಿಸಿದರೆ ಉತ್ತಮ ಸಮಾಜ ನಿರ್ಮಾಣವಾಗುತ್ತದೆ. ಅದೆ ಒಬ್ಬ ಶಿಕ್ಷಕ ತಮ್ಮ ಜವಾಬ್ದಾರಿಯನ್ನು ಮರೆತು ತಪ್ಪು ಮಾಡಿದರೆ ಮಕ್ಕಳು ತಪ್ಪುದಾರಿ ತುಳಿಯುತ್ತಾರೆ ಎಂಬುದಕ್ಕೆ ಅನೇಕ ಉದಾಹರಣೆಗಳಿವೆ,

ತಾಲೂಕಿನ ಲಖಣಗಾಂವ ಗ್ರಾಮದ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಬಸವರಾಜ ಮಡಿವಾಳ ಅವರು ಅತ್ಯಂತ ಶಿಸ್ತಿನ ಶಿಕ್ಷಕರಾಗಿದ್ದರು ಎಂದು ಸ್ಮರಿಸಿದರು.

ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಮಾತನಾಡಿ ಶಿಕ್ಷಕ ಬಸವರಾಜ ಮಡಿವಾಳ ಎಂದರೆ ಮಕ್ಕಳಿಗೆ ಅಚ್ಚುಮೆಚ್ಚು, ಅಲ್ಲದೆ ಸುತ್ತಮುತ್ತಲ ಗ್ರಾಮಗಳಲ್ಲು ಅತ್ಯಂತ ಪ್ರೀತಿಪಾತ್ರ ಶಿಕ್ಷಕರಾಗಿದ್ದರು ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕ ಬಸವರಾಜ ಮಡಿವಾಳ ಮಕ್ಕಳೊಂದಿಗೆ ಕಳೆದ ದಿನಗಳು, ಅವರನ್ನು ಶೈಕ್ಷಣಿಕವಾಗಿ ಸಾಮಾಜಿಕವಾಗಿ ತಿದ್ದಿ ಬೆಳೆಸಿದ ಸಾರ್ಥಕ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ ಎಂದು ತಮ್ಮ ಸೇವೆಯ ದಿನಗಳನ್ನು ಸ್ಮರಿಸಿಕೊಂಡರು. ಹಿರಿಯ ಸಾಹಿತಿ ಗಣಪತಿ ಭೂರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಮಹಾದೇವ ಮಡಿವಾಳ ಪರಿಚಯ ನುಡಿ ನುಡಿದರು.

ಈ ಸಂದರ್ಭದಲ್ಲಿ ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ, ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಹೇಶ ರಾಚೋಟೆ, ಪ್ರಧಾನ ಕಾರ್ಯದರ್ಶಿ ವಾಗೇಶ ಪಾಟೀಲ್, ತಾಲೂಕು ಸರಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಹಲ್ಮಂಡಗೆ, ಕಾರ್ಯದರ್ಶಿ ರಾಜಪ್ಪ ಪಾಟೀಲ್, ಬಾಬುರಾವ ಭೂರೆ, ಜಗನ್ನಾಥ ಸಿದ್ದೇಶ್ವರೆ, ಸೂರ್ಯಕಾಂತ ಸುಂಟೆ, ಮೀನಾಕುಮಾರಿ ಬಸವರಾಜ ಮಡಿವಾಳ ಸೇರಿದಂತೆ ಹಲವರು ಇದ್ದರು. ಶ್ರೀನಿವಾಸ ಭೂರೆ ಸ್ವಾಗತಿಸಿದರು. ಸಂತೋಷ ವಾಡೆ ನಿರೂಪಿಸಿದರು. ಹಣಮಶೆಟ್ಟಿ ಸಿದ್ದೇಶ್ವರೆ ವಂದಿಸಿದರು.

# ಯಶಸ್ಸಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ: ಪ್ರಿಯಾಂಕ್ ಖರ್ಗೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಮೊದಲ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾದ ಡಿ.ಕೆ. ಶಿವಕುಮಾರ ಅವರು ಕಲಬುರಗಿ ಆಗಮಿಸುತ್ತಿದ್ದು, ಅವರ ಚೊಚ್ಚಲ ಪ್ರಾದೇಶಿಕ ಮಟ್ಟದ ಸಭೆ ಇದಾಗಿರುವುದರಿಂದ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಸಭೆ ಯಶಸ್ಸಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದು ರಾಜ್ಯದ ಗೃಹ, ಐ.ಟಿ-ಬಿ.ಟಿ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಮುಖ್ಯಮಂತ್ರಿಗಳ ಪ್ರವಾಸ ಹಿನ್ನೆಲೆಯಲ್ಲಿ ಶನಿವಾರ ತಡರಾತ್ರಿ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮುಖ್ಯಮಂತ್ರಿಗಳ ಜೊತೆಗೆ ಉಪ ಮುಖ್ಯಮಂತ್ರಿ ಹಾಗೂ ಈ ಭಾಗದ ಸಚಿವರು, ಶಾಸಕರು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಇತರೆ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸುವುದರಿಂದ ಗಣ್ಯರ ಭದ್ರತೆ, ವಸತಿ, ಊಟೋಪಚಾರ, ಶಿಷ್ಟಚಾರದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಜಾಗ್ರತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಸೂಪರ್ ಎಲ್ನಿನೋ ಪರಿಣಾಮ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿನ ಪರಿಸ್ಥಿತಿ ಖುದ್ದು ಅರಿಯಲು ಸಿ.ಎಂ. ಅವರು ಪ್ರಾದೇಶಿಕ ಮಟ್ಟದ ಸಭೆ ಕರೆದಿದ್ದಾರೆ. ಇದಾದ ನಂತರ ಇತರೆ ವಿಭಗಾದ ಸಭೆ ನಡೆಸಲಾಗುತ್ತಿದೆ. ಹೀಗಾಗಿ ಈ ಸಭೆ ಇತರೆ ಸಭೆಗಳಿಗೆ ಮಾದರಿಯಾಗುವಂತೆ ಸರ್ವ ಸಿದ್ಧತೆ ಕೈಗೊಳ್ಳಬೇಕು. ತೀವ್ರ ಸವಾಲಿನ ಬರ ಪರಿಸ್ಥಿರಿ ಸಮರ್ಥ ನಿರ್ವಹಣೆ ಮತ್ತು ತೆಗೆದುಕೊಳ್ಳಬೇಕಾದ ಮುನ್ನಚ್ಚರಿಕೆ ಕ್ರಮಗಳೆ ಸಭೆಯ ಪ್ರಮುಖ ವಿಷಯವಾಗಿದೆ. ಹೀಗಾಗಿ ಸಭೆಯಲ್ಲಿ ಭಾಗವಹಿಸುವ ವಿಭಾಗ ಮಟ್ಟದ ಅಧಿಕಾರಿಗಳು ಏಳು ಜಿಲ್ಲೆಗಳ ಸಂಪೂರ್ಣ ಮಾಹಿತಿಯೊಂದಿಗೆ ಆಗಮಿಸಬೇಕು. ಸಿ.ಎಂ. ಡಿ.ಸಿ.ಎಂ ಸೇರಿದಂತೆ ಸಚಿವರು, ಶಾಸಕರು ಏಜೆಂಡಾ ಹೊರತಾಗಿಯೂ ಯಾವುದೇ ವಿಷಯ ಸಭೆಯಲ್ಲಿ ಪ್ರಸ್ತಾಪಿಸಿದಲ್ಲಿ ಕ್ಷಣಾರ್ಧದಲ್ಲಿ ಮಾಹಿತಿ ನೀಡಲು ಪೂರ್ವಸಿದ್ಧತೆಯೊಂದಿಗೆ ಬರಬೇಕೆಂದು ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಿ.ಎಂ. ಪ್ರವಾಸ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ವಿವಿಧ ಸಮಿತಿ ರಚಿಸಲಾಗುತ್ತಿದ್ದು, ಅಧಿಕಾರಿಗಳಿಗೆ ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬೇಕು. ಎಲ್ಲಾ ಪೂರ್ವಸಿದ್ಧತಾ ಕಸರ್ಯ ಸೋಮವಸರ ಸಂಜೆಯೊಳಗೆ ಪೂರ್ಣಗೊಳಿಸಬೇಕು ಎಂದರು.

ಸಭೆಯಲ್ಲಿ ಈಶಾನ್ಯ ವಲಯದ ಡಿ.ಐ.ಜಿ.ಪಿ ಶಾಂತನು ಸಿನ್ಹಾ, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ ಅಡ್ಡೂರು ಶ್ರೀನಿವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಷ್ ರೆಡ್ಡಿ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಅನೇಕ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

# ಗಡಿಭಾಗದಲ್ಲಿ ಕನ್ನಡ ವಾತಾವರಣ ನಿರ್ಮಾಣವೇ ಮೂಲ ಗುರಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಗಡಿಭಾಗದಲ್ಲಿ ಕನ್ನಡ ಭಾಷೆ, ಸಾಹಿತ್ಯ ಹಾಗೂ ಸಂಸ್ಕೃತಿಯ ಉಳಿವು-ಬೆಳವಣಿಗೆಗೆ ಮತ್ತಷ್ಟು ಚೈತನ್ಯ ತುಂಬುವ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ (ಕಸಾಪ) ಭಾಲ್ಕಿ ತಾಲ್ಲೂಕು ಘಟಕದ ಕಾರ್ಯಕಾರಿಣಿ ಸಭೆ ಮಹತ್ವದ ನಿರ್ಣಯಗಳಿಗೆ ಸಾಕ್ಷಿಯಾಯಿತು. ಗಡಿಭಾಗದ ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ತುರ್ತಾಗಿ ಭರ್ತಿ ಮಾಡಬೇಕೆಂದು ಸರ್ಕಾರವನ್ನು ಒತ್ತಾಯಿಸುವ ಜೊತೆಗೆ, ಗಡಿಭಾಗದಲ್ಲಿ ಕನ್ನಡದ ವಾತಾವರಣ ಬಲಪಡಿಸಲು ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಂಕಲ್ಪ ಸಭೆಯಲ್ಲಿ ವ್ಯಕ್ತವಾಯಿತು.

ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ್ ಚನ್ನಶೆಟ್ಟಿ ಮಾತನಾಡಿ, "ಗಡಿಭಾಗದಲ್ಲಿ ಕನ್ನಡ ಉಳಿಯಬೇಕಾದರೆ ಮೊದಲು ಕನ್ನಡದ ವಾತಾವರಣ ನಿರ್ಮಾಣವಾಗಬೇಕು. ಕನ್ನಡ ಶಾಲೆಗಳಿಗೆ ಅಗತ್ಯ ಶಿಕ್ಷಕರನ್ನು ನೇಮಿಸುವುದು ಸರ್ಕಾರದ ಆದ್ಯ ಕರ್ತವ್ಯ. ಗಡಿಭಾಗದ ವಿದ್ಯಾರ್ಥಿಗಳು ಯಾವುದೇ ರೀತಿಯ ಅನ್ಯಾಯಕ್ಕೆ ಒಳಗಾಗಬಾರದು" ಎಂದು ಹೇಳಿದರು.

ಬೀದರ್ ಜಿಲ್ಲೆಯಲ್ಲಿ ಕನ್ನಡ ಭಾಷೆಯ ಬೆಳವಣಿಗೆಗಾಗಿ ಹಲವು ಸಾಹಿತ್ಯ, ಸಾಂಸ್ಕೃತಿಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಪರಿಣಾಮಕಾರಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು. ಗಡಿಭಾಗದ ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆಯ ಕುರಿತು ಶಿಕ್ಷಣ ಇಲಾಖೆಯ ಗಮನ ಸೆಳೆಯಲು ಕಸಾಪ ಸಂಘಟಿತ ಹೋರಾಟ ನಡೆಸಲಿದೆ ಎಂದು ಸ್ಪಷ್ಟಪಡಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಭಾಲ್ಕಿ ತಾಲ್ಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ ಮಾತನಾಡಿ, ತಾಲ್ಲೂಕು ಘಟಕದಿಂದ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಕನ್ನಡಾಭಿವೃದ್ಧಿ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯುತ್ತಿವೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಮಹಿಳಾ ಸಾಹಿತ್ಯ ಸಮ್ಮೇಳನವನ್ನು ಭಾಲ್ಕಿಯಲ್ಲೇ ಆಯೋಜಿಸುವಂತೆ ಸಭೆಯಲ್ಲಿ ಒಮ್ಮತದ ನಿರ್ಧಾರ ಕೈಗೊಳ್ಳಲಾಯಿತು. ಎಲ್ಲಾ ತಾಲ್ಲೂಕುಗಳಿಗೆ ಸಂಪರ್ಕ ಕೇಂದ್ರವಾಗಿರುವ ಭಾಲ್ಕಿ ಈ ಸಮ್ಮೇಳನಕ್ಕೆ ಸೂಕ್ತ ಸ್ಥಳ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಸಭೆಯಲ್ಲಿ ನಿವೃತ್ತ ಪ್ರಾಂಶುಪಾಲರಾದ ರೇಖಾ ಮಹಾಜನ, ಹಿರಿಯ ಸಾಹಿತಿ ಮಾಯಾದೇವಿ ಗೋಖಲೆ, ಕ.ರಾ.ಸ.ನೌ.ಸಂಘದ ತಾಲುಕು ಪ್ರಧಾನ ಕಾರ್ಯದರ್ಶಿ ರಾಜಪ್ಪ ಪಾಟೀಲ, ಬಾಲಾಜಿ ಕಾಂಬಳೆ, ಮಲ್ಲಿಕಾರ್ಜುನ ಪಾಟೀಲ, ರಮೇಶ್ ಮಾಲಪಾಣಿ, ಮಹಾದೇವ ಬೇಲೂರೆ, ನೀಲಕಂಠ ಕುರ್ಣೆ, ಶೇಖ್ ಸಾಬೇರಮಿಯ್ಯಾ, ಚಂದ್ರಕಾಂತ ತಳವಾಡೆ ಸೇರಿದಂತೆ ಹಲವರು ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ಹಂಚಿಕೊಂಡರು.

ಗಡಿಭಾಗದಲ್ಲಿ ಕನ್ನಡದ ಅಸ್ತಿತ್ವವನ್ನು ಮತ್ತಷ್ಟು ಬಲಪಡಿಸುವ ಸಂಕಲ್ಪದೊಂದಿಗೆ ನಡೆದ ಈ ಸಭೆ, ಕನ್ನಡಾಭಿಮಾನಿಗಳಿಗೆ ಹೊಸ ಉತ್ಸಾಹ ತುಂಬಿದ ಮಹತ್ವದ ವೇದಿಕೆಯಾಗಿತು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ದಾನಾ, ವಕೀಲರ ಸಂಘದ ಅಧ್ಯಕ್ಷ ಮಹೇಶ್ ರಾಚೋಟೆ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರೇಯ ಕಾಟ್ಕರ್, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಸೂರ್ಯಕಾಂತ ಸುಂಟೆ, ಜಿಲ್ಲಾ ಕಸಾಪ ಖಜಾಂಚಿ ಶಿವಶಂಕರ ಟೋಕರೆ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಸಾಪ ಕಾರ್ಯದರ್ಶಿ ಹಣಮಂತ ಕಾರಾಮುಂಗೆ ಸ್ವಾಗತಿಸಿ, ನಗರ ಘಟಕದ ಕಸಾಪ ಅಧ್ಯಕ್ಷ ಸಂತೋಷ ಬಿ.ಜಿ. ಪಾಟೀಲ ವಂದಿಸಿದರು.

# ಮಳೆಗಾಗಿ ಗುರ್ಜಿ ಹೊತ್ತುಕೊಂಡ ಪುರುಷರು

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ತಾಲೂಕಿನ ಭಟಪನಹಳ್ಳಿ ಗ್ರಾಮದಲ್ಲಿ ಮಹಿಳೆಯರೆ ಗುರ್ಜಿ ಹೊತ್ತು ಕೊಂಡು ಮನೆ ಮನೆಗೆ ಹೊಗುತ್ತಿದ್ದರು ಆದರೆ ಈಗ ಅವರ ಪರವಾಗಿ ಪುರುಷರೆ ತಲೆಯೆ ಮೇಲೆ ರೊಟ್ಟಿ ಮಾಡುವ ಹಂಚಿನ ಮೇಲೆ ,ಸಗಣಿಯಿಂದ ಗುರ್ಜಿ ಮಾಡಿ , ಹೊತ್ತು ಕೊಂಡು ಮನೆ ಮನೆಗೆ ಹೊದಾಗ ಮನೆಯವರು ಗುರ್ಜಿಗೆ ನೀರು ಹಾಕುತ್ತಾರೆ ಆಗ ಗುರ್ಜಿ ಹೊತ್ತು ಕೊಂಡವರು ಸುತ್ತಾಡುತ್ತಾರೆ,ಆಗ

ಗುರ್ಜಿ ಗುರ್ಜಿ ಎಲ್ಯಾಡಿ ಬಂದೆ ಹಳ್ಳಕೊಳ್ಳ ತೀರಿಗ್ಯಾಡಿ ಬಂದೆ, ಕಾರ ಮೇಳೆಯೋ ಕಪ್ಪತ್ತು ಮಳೆಯೋ, ಸುರಿಸುರಿ ಸುರಿಯೋ ಮಳೆಯೋ ಎಂದು ಗ್ರಾಮೀಣ ಪ್ರದೇಶದಲ್ಲಿ ಮಳೆಗಾಗಿ ರೈತರು ಪ್ರಾರ್ಥಿಸೆಸಲ್ಲಿಸಿ ,ಜನರು ಕೊಟ್ಟರು ದವಸ ಧ್ಯಾನಗಳನ್ನು ಸಂಗ್ರಹಿಸಿ ಸಂಗಟಿ ಪ್ರಸಾದ ಮಾಡಿ ಮಳೆಗಾಗಿ ಸಂಪ್ರದಾಯ ಆಚರಿಸುತ್ತಾರೆ ಇದರಿಂದ ಮಳೆ ಬರುತ್ತದೆ ಎಂದು ಮಳೆದೇವರಲ್ಲಿ ಅಪಾರವಾದ ಭಕ್ತಿ ಇವರಲ್ಲಿದೆ.ಪ್ರಾರಂಭದಲ್ಲಿ ಸುರಿದ ಆಶಾದಾಯಕ ಮಳೆಯಿಂದಾಗಿ ರೈತರು ಸಂತಸಗೊಂಡು ಮುಂಗಾರಿನ ಬಿತ್ತನೆಯಲ್ಲಿ ಹೆಸರು,ಗೋವಿನ ಜೋಳ,ಶೇಂಗಾ, ತೋಗರಿ, ಎಳ್ಳು, ಈರುಳ್ಳಿ,ಮೆಣಸಿನಕಾಯಿ, ಸೇರಿದಂತೆ ವಿವಿಧ ಬೆಳೆಗಳನ್ನು ಭೂಮಿ ಒಡಲಲ್ಲಿ ರೈತರು ಬಿತ್ತನೆ ಮಾಡಿದ್ದಾರೆ ಆದರೆ ತೇವಾಂಶ ಕೊರತೆಯಿಂದಾಗಿ ಬೀಜ ಮೊಳಕೆ ಒಡೆದು ಬಾಡುತ್ತಿದೆ. ಸಾಲ ಶೂಲ ಮಾಡಿ ದುಬಾರಿ ಬೀಜ, ಗೊಬ್ಬರ ಬಿತ್ತಿದ ಬಾಡಿಗೆ ಕೊಟ್ಟು ಬಿತ್ತನೆ ಮಾಡಿ ,ಮಳೆಗಾಗಿ ಆಕಾಶದಕಡೆ ಮುಖ ಮಾಡಿದ್ದಾನೆ, ಆದರೆ ದಿನಂ ಪ್ರತಿ ಮೋಡ ಕವಿದ ವಾತವರಣದ ಉಂಟಾಗಿ ಮಳೆ ಬಾರದೆ ಬರಿ ಭಯಂಕರವಾಗಿ ಗಾಳಿ ಬಿಸಿ ಇದರಿಂದ ಬತ್ತಿ ಬಾಡಿದ ಒಣಗಿದ ಬೇಳೆಗಳು ಗಾಳಿಗೆ ಹಾರಿ ಹೋಗಿವೆ,ಬಾರದ ಮಳೆ ಒಂದುಕಡೆಯಾದರೆ ,ಬಾಡುತ್ತಿರುವ ಬೆಳೆಗಳನ್ನು ಕೆಲವು ರೈತರು ಹೆಸರು, ಕೊತಂಬರಿ ಇತರ ಬೆಳೆಗಳನ್ನು ಹರಗಿದ್ದಾರೆ ಇದರಿಂದ ಕೊಪ್ಪಳ ಜಿಲ್ಲೆಯಲ್ಲಿ ಬರದ ಛಾಯೇ ಅವರಿಸಿದ ಆದರಿಂದ ಕೊಪ್ಪಳ ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೇಂದು ಘೋಷಣೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನಾ ಯಲಬುರ್ಗಾ ತಾಲೂಕು ಅಧ್ಯಕ್ಷ ಶರಣಬಸಪ್ಪ ದಾನಕೈ ಒತ್ತಾಯಿಸಿದ್ದಾರೆ . ಸದ್ಯದಲ್ಲಿ ಮಳೆ ಬರಬೇಕು ಮಳೆ ದೇವ ಕರುಣಿಸಭೆಕು ಎಂಬುವದು ರೈತರ ಆಶಯವಾಗಿದೆ.

# ಖಾತಾ ಮಾಡಲು ನೀಡಿದ ಅರ್ಜಿ ನಾಪತ್ತೆ:ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ಖಾತಾ ಮಾಡಿಕೊಡಲು ಕೋರಿ ನೀಡಿದ ಅರ್ಜಿ ನಾಪತ್ತೆ ಮಾಡಿ ಬೇಜವಾಬ್ದಾರಿ ವಹಿಸಿರುವ ಪುರಸಭೆ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ದೂರು ನೀಡಿರುವ ಘಟನೆ ನಡೆದಿದೆ. ಪುರಸಭೆಯ ಮುಖ್ಯ ಅಧಿಕಾರಿಗಳಿಗೆ ಕಳೆದ 2025 ನೇ ಸಾಲಿನಲ್ಲಿ ಇಲ್ಲಿನ ಸ ನಂ179/10 ಗೆ ಸೇರಿದ 02.08 ಗಂಟೆ ಜಾಗದ ಜು 29ರಂದು ದಲಿತ ಕೆ ಜೆ ಪ್ರಸನ್ನ ಕುಮಾರ್ ಎಂಬುವರು ನಿಯಮದ ಪ್ರಕಾರ ಸಂಬಂಧಿಸಿದ ಎಲ್ಲಾ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲಾಗಿತ್ತು ಎಂದು ಅವರು ತಿಳಿಸಿದ್ದಾರೆ. ಆದರೆ ಸುಮಾರು 10 ತಿಂಗಳುಗಳ ಕಾಲ ಯಾವುದೇ ಕ್ರಮ ವಹಿಸದೆ ಇದ್ದ ಪರಿಣಾಮ ಅರ್ಜಿದಾರ ಕೆಜೆ ಪ್ರಸನ್ನ ಕುಮಾರ್ ತಮ್ಮ ಅರ್ಜಿಯನ್ನು ಕಡೆಗಣಿಸಿ ವಿಳಂಬ ಹಾಗೂ ನಿರ್ಲಕ್ಷ್ಯ ವಹಿಸಿರುವ ಹಾಗೂ ಉತ್ತರಿಸದೆ ಇದ್ದ ಬಗ್ಗೆ ಅನುಮಾನಗೊಂಡು ಲಿಖಿತ ಉತ್ತರ ಕೋರಿದ್ದರಿಂದ ಮುಖ್ಯ ಅಧಿಕಾರಿ ಎಚ್ ಪಿ ಮಧು ಈ ಸಾಲಿನ ಫೆ.8ರಂದು ಇ ಆಸ್ತಿ ತಂತ್ರಾಂಶದಲ್ಲಿ ಆಸ್ತಿತ್ವದಲ್ಲಿರುವ ಸ್ವತ್ತನ್ನುಸೃಜಿಸಲು ಪ್ರಾಯೋಗಿಕವಾಗಿ ದೃಢಪಡಿಸಿಕೊಳ್ಳಲು ನೀಡಿದ್ದಾರೆ ಆದೇಶ ಇದ್ದರೂ ಸಹ ಈ ಚಟುವಟಿಕೆ ಹೇಗೆ ನಡೆಸಲಾಯಿತು ಎಂದು ಪ್ರಶ್ನಿಸಿದ್ದಾರೆ. ಪ್ರಸನ್ನ ಕುಮಾರ್ ಸರಿ ಇರುವ ಬಗ್ಗೆ ದೃಢಪಡಿಸಿ ಮುಖ್ಯ ಅಧಿಕಾರಿ ಎ???ಪಿ ಮಧು ರವರ ಡಾಂಗಲ್ ಮೂಲಕ ಓಕೆ ಮಾಡುವಷ್ಟರಲ್ಲಿ ಸರ್ಕಾರದ ಆದೇಶ ಸಂಖ್ಯೆ ನಅಇ178 ಜಿಇಎಲ್2025(ಇ)2026ನೇ ಸಾಲಿನ ಜ 17 ರ ಅನ್ವಯ ಬಿ. ಖಾತಾ ಮಾಡಲು ಅವಕಾಶ ಅಂತ್ಯ ಗೊಳಿಸಲಾಗಿತ್ತು. ಆದ್ದರಿಂದ ಇ ಸ್ವತ್ತನ್ನು ಪೂರ್ಣ ಮಾಡಲು ಆಗಿಲ್ಲ ಮತ್ತು ಜೊತೆಗೆ ನಿಯಮದಡಿಯಲ್ಲಿ ದಾಖಲೆಗಳೊಂದಿಗೆ ಸಲ್ಲಿಸಲಾದ ಅರ್ಜಿ ಇಲ್ಲದೆ ನಾಪತ್ತೆಆದ ಪರಿಣಾಮ ನನಗೆ ಬಿ.ಖಾತಾ ಮಾಡಿಕೊಡದಂತೆ ಅನ್ಯಾಯ ಮಾಡಲಾಗಿದೆ ಎಂದು ಪ್ರಸನ್ನ ಕುಮಾರ್ ದೂರಿದ್ದಾರೆ. ಅರ್ಜಿ ಸಲ್ಲಿದ ಸುಮಾರು 10 ತಿಂಗಳ ಕಾಲ ಬಿ ಖಾತಾ ಮಾಡಿಕೊಡುವ ಬಗ್ಗೆ ಪುರಸಭೆ ನಿಯಮದ ಪ್ರಕಾರ ತಮ್ಮ ಜವಾಬ್ದಾರಿಯನ್ನು ಮರೆತು ಯಾವುದೇ ಕ್ರಮ ವಹಿಸದೆ ಇದ್ದು ಅನ್ಯಾಯ ಮಾಡಲಾಗಿದೆ. ಕಂದಾಯ ಅಧಿಕಾರಿ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಯಾಗಿರುವ ಗಿರೀಶ್ ಎಂಬುವರು ಪುರಸಭೆಯಲ್ಲಿ ಕಾರ್ಯನಿರ್ವಸಲಾಗುತ್ತಿದ್ದು ಇವರು ನೀಡಿರುವ ಮಾಹಿತಿಯಲ್ಲಿ ಅರ್ಜಿಯ ಬಗ್ಗೆ ಪರಿಶೀಲಿಸಿದಾಗ 2025 ನೇ ಸಾಲಿನ ಅ.8ರಂದು ಇಲ್ಲಿನ ಕರವಸೂಲಿಗಾರ (ಕ್ಷೇಮಭಿವೃದ್ಧಿ) ಕುಮಾರ್ ಎಂಬುವರು ಸ್ವಿಕೃತಿ ವಿಭಾಗದಿಂದ ಅರ್ಜಿ ಪಡೆದುಕೊಂಡಿದ್ದು ಸಕಲದಲ್ಲಿ ಬಿ ಖಾತಾ ನೀಡಲು ಕ್ರಮ ವಹಿಸದೆ ಇರುವುದು ಕಂಡು ಬಂದಿರುತ್ತದೆ. ಕಡತವನ್ನು ಹಾಜರಪಡಿಸಲು ಇದೇ ಸಾಲಿನ ಜೂ 5 ರಂದು ನೋಟಿಸ್ ನೀಡಲಾಗಿದ್ದರು ಇಲ್ಲಿವರೆಗೂ ಹಾಜರುಪಡಿಸಿಲ್ಲ ಎಂದು ನವಕೆ ನೀಡಿರುವ ಹಿಂಬರಾದಲ್ಲಿ ತಿಳಿಸಿದ್ದಾರೆ.ಪುರಸಭೆಯ ನೌಕರರು ಮಾಡಿದ ಅವ್ಯವಸ್ಥೆಯ ಬಗ್ಗೆ ಮಾಹಿತಿ ಕೋರಿದ ದಿನದ ನಂತರ ಕುಮಾರ್ ಗೆ ನೋಟಿಸ್ ನೀಡಿದ್ದು ನಿಜವಾಗಿಯೂ ಪ್ರಾಮಾಣಿಕವಾಗಿ ಮುಖ್ಯ ಅಧಿಕಾರಿಗಳಾದ ಎಚ್‌ಪಿ ಮಧು ಕಾರ್ಯ ನಿರ್ವಸಿದ್ದರೆ ಇಲ್ಲಿವರೆಗೂ ಏಕೆ ಯಾವುದೇ ಕ್ರಮವಹಿಸಿರಲಿಲ್ಲ ಎಂಬುದು ಪ್ರಶ್ನೆಯಾಗಿದ್ದು ಬಿ ಖಾತಾ ಮಾಡಲು ಆಯಾಯ ಹಂತದಲ್ಲಿ ಕಾರ್ಯನಿರ್ವಹಿಸಿರುವ ಒಬ್ಬೊಬ್ಬ ಅಧಿಕಾರಿಗಳು ಸಹ ಜಾರಿಕೊಳ್ಳುವ ಜಾಣತನವನ್ನು ಮಾಡುತ್ತಿರುವ ತಂತ್ರಗಾರಿಕೆ ಇದಾಗಿದೆ ಆದ್ದರಿಂದ ಸಮಗ್ರ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಪಿ ಎನ್ ರವೀಂದ್ರ ರವರಿಗೆ ಪ್ರಸನ್ನ ಕುಮಾರ್ ನೀಡಿರುವ ದೂರಿನಲ್ಲಿ ವಿವರಗಳೊಂದಿಗೆ ಮನವಿ ಮಾಡಿಕೊಂಡಿದ್ದಾರೆ.ನೂತನ ಅರ್ಜಿ ಕೋರಿಕೆ : ಪ್ರಸ್ತುತವಾಗಿ ಸರ್ಕಾರವು ಎ ಖಾತಾ ಮಾಡಿಕೊಡುವ ಅವಕಾಶವನ್ನು ನೀಡಿದ್ದು ನೂತನವಾಗಿ ಆನ್ಲೈನ್ ಮೂಲಕ ನೂತನವಾಗಿ ಅರ್ಜಿ ಸಲ್ಲಿಸಲು ಕೆಜೆ ಪ್ರಸನ್ನಕುಮಾರ್ ಅವರಿಗೆ ಮುಖ್ಯ ಅಧಿಕಾರಿ ಎಚ್ ಪಿ ಮಧು ತಿಳಿಸಿದ್ದು ಹಿಂದಿನ ಅರ್ಜಿಯ ವಿಷಯಕ್ಕೆ ಯಾವುದೇ ಪ್ರತಿಕ್ರಿಯೆಗೆ ಮುಂದಾಗುತ್ತಿಲ್ಲ. ವರದಿ ನೀಡಲಾಗುವುದು: ಬಿ ಖಾತಾಗಾಗಿ ಕೆಜೆ ಪ್ರಸನ್ನ ಕುಮಾರ್ ಸಲ್ಲಿಸಿರುವ ಅರ್ಜಿಯ ಬಗ್ಗೆ ಸಮಗ್ರ ತನಿಖೆ ನಡೆಸಿ ಸಂಪೂರ್ಣ ವರದಿಯನ್ನು ಮೇಲಾಧಿಕಾರಿಗಳಿಗೆ ನೀಡಲಾಗುವುದು ಎಂದು ಹುಣಸೂರು ಉಪ ವಿಭಾಗದ ಉಪ ವಿಭಾಗಾಧಿಕಾರಿ ಹಾಗೂ ಪುರಸಭೆ ಆಡಳಿತ ಅಧಿಕಾರಿಯೂ ಆಗಿರುವ ಕೆ ವಿ ಕಾವ್ಯರಾಣಿ ಸ್ಪಷ್ಟಪಡಿಸಿದ್ದಾರೆ.

# ಖೇಡ ಗ್ರಾಮದಲ್ಲಿ ರೇವಪ್ಪಯ್ಯಾ ಸ್ವಾಮಿ ಜಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಖೇಡ್ ಗ್ರಾಮದಲ್ಲಿ ಜರುಗಿದ ಪೂಜ್ಯ ಶ್ರೀ ರೇವಪ್ಪಯ್ಯಾ ಸ್ವಾಮಿಯವರ ಜಾತ್ರಾ ಮಹೋತ್ಸವದಲ್ಲಿ ಮಾಜಿ ಸಚಿವರು ಹಾಗೂ ಔರಾದ್ (ಬಿ) ಕ್ಷೇತ್ರದ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ರವಿವಾರ ಭಾಗವಹಿಸಿ, ವಿಶೇಷ ಪೂಜೆ ಸಲ್ಲಿಸಿದರು.ಕ್ಷೇತ್ರದ ಜನರ ಸುಖ, ಶಾಂತಿ, ಸಮೃದ್ಧಿ ಹಾಗೂ ಉತ್ತಮ ಮಳೆ–ಬೆಳೆಗಾಗಿ ಪ್ರಾರ್ಥಿಸಿದ ಶಾಸಕರು, ಬಳಿಕ ಅನ್ನಸಂತರ್ಪಣೆ ಕಾರ್ಯಕ್ರಮದಲ್ಲಿ ಭಕ್ತಾದಿಗಳಿಗೆ ಸ್ವತಃ ಹೋಳಿಗೆ ಮತ್ತು ತುಪ್ಪ ಬಡಿಸುವ ಮೂಲಕ ತಮ್ಮ ಸೇವಾಭಾವವನ್ನು ಮೆರೆದರು.ಬಳಿಕ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಶಾಸಕರು, "ಪೂಜ್ಯ ಶ್ರೀ ರೇವಪ್ಪಯ್ಯಾ ಸ್ವಾಮಿಯವರ ಮಹಿಮೆ ಅಪಾರವಾಗಿದ್ದು, ಕರ್ನಾಟಕ ಮಾತ್ರವಲ್ಲದೆ ಮಹಾರಾಷ್ಟ್ರ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಿಂದಲೂ ಸಹಸ್ರಾರು ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಒಂದೇ ದಿನ 30 ಸಾವಿರಕ್ಕೂ ಹೆಚ್ಚು ಭಕ್ತರು ಭಾಗವಹಿಸಿರುವುದು ಪೂಜ್ಯರ ದಿವ್ಯ ಶಕ್ತಿಗೆ ಸಾಕ್ಷಿಯಾಗಿದೆ" ಎಂದರು.ಮುಂದುವರಿದು ಮಾತನಾಡಿದ ಅವರು, "ಸ್ವಾಮಿಯ ಪರಮ ಭಕ್ತನಾಗಿ ನಾನು ಪ್ರತಿ ವರ್ಷ ಈ ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದೇನೆ. ಮಂದಿರಕ್ಕೆ ಬರುವ ಭಕ್ತರ ಅನುಕೂಲಕ್ಕಾಗಿ ಈಗಾಗಲೇ ಉತ್ತಮ ಕಲ್ಯಾಣ ಮಂಟಪ, ಸಿಸಿ ಬೆಡ್ ಹಾಗೂ ಕುಡಿಯುವ ನೀರಿನ ಬೋರವೆಲ್ ವ್ಯವಸ್ಥೆ ಕಲ್ಪಿಸಲಾಗಿದೆ. ಹುಲಸೂರ ರಸ್ತೆ ನಿರ್ಮಾಣಕ್ಕೆ ಅನುದಾನ ಮಂಜೂರಾಗಿದ್ದು, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬಾಕಿ ಇರುವ ಫೈಲ್ ಅನ್ನು ಶೀಘ್ರವಾಗಿ ವಿಲೇವಾರಿ ಮಾಡಿಸಲಾಗುವುದು. ಮುಖ್ಯ ರಸ್ತೆಯಿಂದ ಮಂದಿರದವರೆಗೆ ಸಿಸಿ ರಸ್ತೆ ನಿರ್ಮಿಸಿಕೊಡುವ ಭರವಸೆ ನೀಡಿದ ಅವರು, ಖೇಡ್ ಗ್ರಾಮ ಹಾಗೂ ಮಂದಿರದ ಸಮಗ್ರ ಅಭಿವೃದ್ಧಿಗೆ ಹಂತ–ಹಂತವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು" ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ತಡೋಳಾ ಮಹೆಕರ್ ಮಠದ ಪೂಜ್ಯ ರಾಜೇಶ್ವರ ಶಿವಾಚಾರ್ಯರ ಧಾರ್ಮಿಕ ಮತ್ತು ಸಮಾಜಮುಖಿ ಸೇವಾ ಕಾರ್ಯಗಳನ್ನು ಶಾಸಕರು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಭಕ್ತಾದಿಗಳು, ಗ್ರಾಮಸ್ಥರು, ವಿವಿಧ ಜನಪ್ರತಿನಿಧಿಗಳು ಹಾಗೂ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಇಂದು ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾಮಟ್ಟದ ಪಂಚಸೇನಾ ಕಾರ್ಯಕಾರಿ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಿದ ಜಿಲ್ಲಾ ಪಂಚಸೇನಾ ಅಧ್ಯಕ್ಷ ವಿಶ್ವನಾಥ ಮರಿಬಸಪ್ಪನವರ ಮಾತನಾಡಿ 2025 –26ನೇ ಶೈಕ್ಷಣಿಕ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಪ್ರತಿಶತ 90% ಕ್ಕಿಂತ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಅಭಿನಂದನಾ ಕಾರ್ಯಕ್ರಮವನ್ನು ಆಗಸ್ಟ್ ತಿಂಗಳಲ್ಲಿ ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು ಎಂದು ಹೇಳಿದರು. ಪರಮಪೂಜ್ಯ ಶ್ರೀ ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಮುಂದಿನ ವಾರದೊಳಗೆ ಜಿಲ್ಲಾ ಮತ್ತು ತಾಲೂಕು ಘಟಕಗಳ ಪದಾಧಿಕಾರಿಗಳನ್ನು ನೇಮಕ ಮಾಡಲಾಗುವುದು ಎಂದರು. ಈ ಕಾರ್ಯಕ್ರಮದ ಯಶಸ್ವಿಗೆ ಎಲ್ಲಾ ಪಂಚಮಸಾಲಿ ಸಮಾಜ ಬಾಂಧವರು ಸಹಕಾರ ನೀಡಬೇಕಾಗಿ ಈ ಸಂದರ್ಭದಲ್ಲಿ ತಿಳಿಸಿದರು. ರುದ್ರಗೌಡ್ರ ಸೊಲಬಗೌಡ್ರ ಪಂಚ ಸೇನಾ ರಾಜ್ಯಾಧ್ಯಕ್ಷರು ಮಾತನಾಡಿ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಸಮಾಜದ ಎಲ್ಲಾ ಜನರು ಸೇರಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವಿಸಿ ಸನ್ಮಾನಿಸುವುದು ಶ್ಲಾಘನೀಯ ಎಂದು ಹೇಳಿದರು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದವರನ್ನು ಸತ್ಕರಿಸಲಾಗುವುದು ಎಂದು ಹೇಳಿದರು. ಮಂಜುನಾಥ ಸೊರಟೂರು ಜಿಲ್ಲಾ ಪಂಚಸೇನಾ ಗೌರವಾಧ್ಯಕ್ಷರು ಮಾತನಾಡಿ ಸಮಾಜದ ನೌಕರರು 2026ರಲ್ಲಿ ನಿವೃತ್ತಿ ಹೊಂದಿದವರನ್ನು ಕರೆಸಿ ಸನ್ಮಾನ ಮಾಡುವುದರ ಜೊತೆಗೆ ಉನ್ನತ ಮಟ್ಟದ ಅಧಿಕಾರಿಗಳನ್ನು ಕರೆಸಿ ಮಕ್ಕಳಿಗೆ ಪ್ರೋತ್ಸಾಹ ನೀಡುವಂತೆ ಆಹ್ವಾನಿಸಬೇಕು ಎಂದರು ಈ ಜವಾಬ್ದಾರಿಯನ್ನು ಶಿಕ್ಷಕರಿಗೆ ವಹಿಸಿದರೆ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳ ಮಾಹಿತಿ ದೊರೆಯುತ್ತದೆ ಎಂದರು. ಡಾ. ಮಹಾಂತೇಶ ನೆಲಾಗಣಿ ಜಿಲ್ಲಾ ಪಂಚಸೇನಾ ಪ್ರಧಾನ ಕಾರ್ಯದರ್ಶಿ ಮಾತನಾಡಿ ವ್ಯಕ್ತಿಗಿಂತ ಸಮಯ ದೊಡ್ಡದು ಪಕ್ಷಾತೀತವಾಗಿ ಸಮಾಜವನ್ನು ಕಟ್ಟಿ ಬೆಳೆಸಬೇಕು ಮತ್ತು ನಮ್ಮ ಸಮಾಜಕ್ಕೆ 2ಎ ಮೀಸಲಾತಿಗಾಗಿ ನಡೆಸುವ ಚಳುವಳಿಯನ್ನು ಮುಂದುವರಿಸಬೇಕು ಎಂದರು. ಬಸವರಾಜ ಬಿಜಕಲ್ ಯಲಬುರ್ಗಾ ತಾಲೂಕ ಪಂಚಸೇನಾ ಅಧ್ಯಕ್ಷ ಮಾತನಾಡಿ ತನು ಮನ ಧನದಿಂದ ಕಾರ್ಯಕ್ರಮಕ್ಕೆ ಸಹಕರಿಸುವುದಾಗಿ ಹೇಳಿದರು. ಶರಣಪ್ಪ ಶೀಲವಂತರ ಕೊಪ್ಪಳ ತಾಲೂಕ ಪಂಚ ಸೇನಾ ಅಧ್ಯಕ್ಷ ಮಾತನಾಡಿ ಸಮಾಜದ ಪ್ರತಿಯೊಬ್ಬ ಸದಸ್ಯರಲ್ಲಿ ಸ್ವಾಭಿಮಾನ ಇರಬೇಕು ಎಂದರು ಕಾರ್ಯಕ್ರಮದ ಯಶಸ್ಸಿಗೆ ಎಲ್ಲರೂ ತನು ಮನ ದನದಿಂದ ಸಹಕರಿಸಬೇಕಾಗಿ ಹೇಳಿದರು. ಈ ಸಂದರ್ಭದಲ್ಲಿ ಮಂಜುನಾಥ ಹಕಾರಿ ಕೊಪ್ಪಳ ತಾಲೂಕ ಪಂಚಸೇನಾ ಕಾರ್ಯದರ್ಶಿ, ಬಸವರಾಜ ಹಲಗೇರಿ,ಸಂಜಯ್ ಕೆ., ನಿಂಗಪ್ಪ ಹೈದ್ರಿ ಶಿಕ್ಷಕರು, ಮಲ್ಲಿಕಾರ್ಜುನ ಆರೇರ ಕುಕನೂರು ತಾಲೂಕ ಪಂಚಮಸಾಲಿ ನೌಕರರ ಸಂಘದ ಅಧ್ಯಕ್ಷರು ಹಾಜರಿದ್ದರು. ರವೀಂದ್ರನಾಥ ಕೊಟ್ರಪ್ಪ ತೋಟದ ಪಂಚಸೇನಾ ಕಲ್ಯಾಣ ಕರ್ನಾಟಕ ಮಾಧ್ಯಮ ವಕ್ತಾರರು ಸ್ವಾಗತಿಸಿ, ವಂದಿಸಿದರು.

# ಬಾಬು ಜಗಜೀವನ್ ರಾಮ್ ಪುಣ್ಯಸ್ಮರಣೆ

• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪುರಸಭೆ ಕಾರ್ಯಾಲಯದಲ್ಲಿ ಬಾಬು ಜಗಜೀವನ್ ರಾಮ್ ಪುಣ್ಯಸ್ಮರಣೆ ಸೋಮವಾರ ಆಚರಣೆ ಮಾಡಲಾಯಿತು.ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುರಸಭೆ ವ್ಯವಸ್ಥಾಪಕ ಜಗದೀಶ್ ಎ. ಬಿರದಾರ್ ಸಹಾಯಾರ್ಥದಲ್ಲಿ ಪ್ರಥಮ ದರ್ಜೆ ಸಹಾಯಕಿ ಹುಲಿಗೆಮ್ಮ ಪೂಜಿಸಲ್ಲಿಸಿ ಪುಷ್ಪಾರ್ಚನೆ ಮಾಡಿದರು.

ಮುಖಂಡರಾದ ರಾಘವೇಂದ್ರ ಕುದುರೆ ಶರಣಪ್ಪ ಕಟ್ಟಿಮನಿ, ಬಸವರಾಜ, ರೆಹಮಾನ್ ಸಾಬ್ ಅರಗಂಜಿ, ಮರಿಯಪ್ಪ, ಪುರಸಭೆ ಸಿಬ್ಬಂದಿಗಳು ಅಂತೋನಿರಾಜ್, ಪವನ್ ಕುಮಾರ, ಚೆನ್ನಮ್ಮ ದಳವಾಯಿ ಮಠ, ವೆಂಕಟೇಶ, ರಂಗನಾಥ, ಸಂಜೀವಪ್ಪ, ರಮೇಶ ಸೇರಿದಂತೆ ಇತರರಿದ್ದರು.




## ಬಿಜೆಪಿ ಮಂಡಲ ಕಚೇರಿಯಲ್ಲಿ ಡಾ. ಬಾಬು ಜಗಜೀವನ ರಾಮ್ ಪುಣ್ಯಸ್ಮರಣೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜು 06; ಭಾರತೀಯ ಜನತಾ ಪಾರ್ಟಿ ಗುರುಮಠಕಲ್ ಮಂಡಲಕಾರ್ಯಾಲಯದಲ್ಲಿ ಭಾರತದ ಮಾಜಿ ಉಪಪ್ರಧಾನಮಂತ್ರಿ ಹಾಗೂಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ ಪುಣ್ಯಸ್ಮರಣೆಯನ್ನು ಭಕ್ತಿಪೂರ್ವಕವಾಗಿ ಆಚರಿಸಲಾಯಿತು. ಈಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಭಾಜಪ ಜಿಲ್ಲಾ ಕಾರ್ಯದರ್ಶಿ ಚಂದುಲಾಲ ಚೌಧರಿ ದೇಶದ ಅಭಿವೃದ್ಧಿ, ರೈತರ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರು ನೀಡಿದ ಕೊಡುಗೆ ಅಪಾರ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯ ಮುಖಂಡ ಕೆ. ದೇವದಾಸ್ , ಜಗದೀಶ್ ಚಂದ್ರ ಮೆಂಗ್ಜಿ ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಚಿಟಗುಪ್ಪ: ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಇತ್ತಿಚೆಗೆ ಅಧಿಕಾರ ಸ್ವೀಕರಿಸಿದ ಲಿಂಗರಾಜ ಪಾಟೀಲ್ ಅವರಿಗೆ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಹಾಗೂ ಪರಿಸರವಾದಿ ಶೈಲೇಂದ್ರ ಕಾವಡಿ ಶಾಲು ಹೊದಿಸಿ ಸಸಿ ನೀಡಿ ಶುಭ ಕೋರಿದರು. ಈ ಸಂದರ್ಭದಲ್ಲಿ ರಾಜಕುಮಾರ್ ಆರ್. ಹಡಪದ, ಮಂಜುನಾಥ್ ಚಿಂತಕೋಟಿ ಇದ್ದರು.

## ಮನೆ ಮನೆಗೆ ತೆರಳಿ ಎಸ್ಐಆರ್ ಗಣತಿ ನಮೂನೆ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕಿನ ನಿರ್ಣಾ ಗ್ರಾಮದ ವಾರ್ಡ್ ಸಂಖ್ಯೆ 19ರಲ್ಲಿ ಮನೆ–ಮನೆಗೆ ಭೇಟಿ ನೀಡಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐಆರ್) ಗಣತಿ ನಮೂನೆಗಳನ್ನು ಉಪ ತಹಶೀಲ್ದಾರ್ ಅಮ್ಜದ್ ಗ್ರಾಮಡಳಿತ ಅಧಿಕಾರಿ ಹಣಮಂತರಾಯ, ಬಿಎಲ್ಒ ವಿಜಯಕುಮಾರ್ ಪಾಟೀಲ್, ಕಲಿಮ್ ಕಮಲಾಪುರ್ ಅವರು ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಸಂಜೀವಕುಮಾರ್ ಕಿರಣ ರವರಿಗೆ ಎಸ್.ಐ.ಆರ್. ಗಣತಿ ನಮೂನೆಗಳನ್ನು ವಿತರಿಸಿದರು.

## ರಾಜ್ಯ ರೈತ ಸಂಘದ ವಿಭಾಗ ಮಟ್ಟದ ಸಭೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕರ್ನಾಟಕ ರಾಜ್ಯ ರೈತ ಸಂಘ ಜುಲೈ 21ರಂದು ಕೊಪ್ಪಳದಲ್ಲಿ ಮೊಟ್ಟ ಮೊದಲಿಗೆ ರೈತ ಹುತಾತ್ಮ ದಿನಾಚರಣೆಆಚರಿಸಲಿದ್ದು ಅದರ ಅಂಗವಾಗಿ ಕಲ್ಬುರ್ಗಿ ವಿಭಾಗದ ಅಧ್ಯಕ್ಷರಪದಾಧಿಕಾರಿಗಳಸಭೆಂ ಯನ್ನು ಕರೆಯಲಾಗಿತ್ತು.ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಅಧ್ಯಕ್ಷತೆವಹಿಸಿದ್ದರು. ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲಇದ್ದರು.ಸಭೆ ಸರ್ವಾನುಮತದಿಂದಸಿದ್ಧಾತಾ ಸಮಿತಿಗೆ ಅಧ್ಯಕ್ಷ ಎಂದು ಅಲ್ಲಮಪ್ರಭು ಬೆಟ್ಟದೂರು ಅವರನ್ನು ಆರಿಸಲಾಯ್ತು. ಕರ್ನಾಟಕ ರಾಜ್ಯ ರೈತಸಂಘ ರೈತ ಹುತಾತ್ಮದಿನಾಚರಣೆ ಇಲ್ಲಿ ಆಚರಿಸುತ್ತಿರುವುದುಸ್ವಾಗತಾರ್ಹ. ಮುಖ್ಯಮಂತ್ರಿಗಳು ಸರ್ವಪಕ್ಷದ, ಸರ್ವ ಸಂಸ್ಥೆಗಳ ಪ್ರತಿನಿಧಿಗಳ ನಿಯೋಗ ಮುಖ್ಯಮಂತ್ರಿಗಳನ್ನುಭೆಟ್ಟಿ ಮಾಡಲು ಸಮಯ ಗೊತ್ತು ಪಡಿಸಿಕೊಡಲು ರೈತ ಸಂಘದ ಅಧ್ಯಕ್ಷರಲ್ಲಿಮನವಿ ಮಾಡಿದರು.ಡಿವಿಜನ್ನಿನ ಎಲ್ಲ ರೈತ ಸಂಘದ ಅಧ್ಯಕ್ಷರು ಮಾತಾಡಿ ಸಭೆ ಯಶಸ್ಸುಗೊಳಿಸಲು ರೈತರನ್ನು ಕರೆ ತಂದು ಬೆಂಬಲಿಸುವದಾಗಿ ತಿಳಿಸಿದರು.ಸಭೆಯಲ್ಲಿ ಸರೋಜಾ ಬಾಕಳೆ, ಮುಕ್ಕಣ್ಣ ಮೇಸ್ತ್ರಿ,ಸುಬಾನ್ ಯಮನೂರಪ್ಪ, ಸತ್ಯಂಪೇಟೆ, ನಾಯ್ಡುಮಹಿಳಾ ಪ್ರತಿನಿಧಿಗಳು ಭಾಗವಹಿಸಿದ್ದರು.ಸಭೆಯನ್ನು ಕೊಪ್ಪಳ ರೈತ ಸಂಘದ ಅಧ್ಯಕ್ಷಭೀಮಸೇನ್ ಹಾಗೂಪಧಿಕಾರಿಗಳು ಯೋಜಿಸಿದ್ದರು.

# ರೈತರು ರೈತ ಯೋಜನೆ ಜೊತೆಗೆ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ ಬೆಳೆ ವಿಮೆ ಕೂಡಲೇ ಮಾಡಿಸಿ ಪರಿಹಾರ ಪಡೆಯಿರಿ : ಮಾಗನೂರ ಸಲಹೆ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಪ್ರಸಕ್ತ ವರ್ಷ ಜಿಲ್ಲೆಯಲ್ಲಿ ಮಳೆಯ ಅಭಾವ ಕೊರತೆ ತೀವ್ರವಾಗಿದ್ದು, ಬರಗಾಲದ ಪರಿಸ್ಥಿತಿ ಎದುರಾಗಿದೆ.

ಇಂತಹ ಸಂದರ್ಭದಲ್ಲಿ ರೈತರು ರಾಜ್ಯ ಸರ್ಕಾರದ ಯೋಜನೆಯ ಜೊತೆಗೆ ಕಡ್ಡಾಯವಾಗಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ ವಿಮೆಯನ್ನು ಮಾಡಿಸುವ ಮೂಲಕ ಬೆಳೆ ನಷ್ಟ ಲಾಭ ಪಡೆದುಕೊಳ್ಳಬೇಕು ಎಂದು ಬಿಜೆಪಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರಗೌಡ ಮಾಗನೂರ ಅವರು ರೈತರಲ್ಲಿ ಸಲಹೆ ಮಾಡಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು,

ರೈತರು ಬೆಳೆ ನಷ್ಟದ ಕುರಿತು ಕೃಷಿ ಇಲಾಖೆಯಿಂದ ಸಂಪೂರ್ಣ ಮಾಹಿತಿ ಪಡೆದು ಗ್ರಾಮ ಮಟ್ಟ, ನಾಡ ಕಚೇರಿ, ಜಂಟಿ ಕೃಷಿ ನಿರ್ದೇಶಕರ ಕಚೇರಿ, ಸಹಾಯಕ ನಿರ್ದೇಶಕ ಕಚೇರಿ ಹಾಗೂ ಹೋಬಳಿ ವ್ಯಾಪ್ತಿಯ ಎಓ (AO) ಕಚೇರಿಗಳ ಗಮನಕ್ಕೆ ತಂದು, ಪ್ರತಿ ಹೆಕ್ಟೇರ್‌ಗೆ ನಿಗದಿತ ವಿಮೆ ಮಾಡಿಸಿ

ಸಕಾಲಕ್ಕೆ ಮುಂಗಾರು ಇಲ್ಲದಿರುವುದರಿಂದ ರೈತರು ತಮಗೆ ಸಾಧ್ಯವಾದಷ್ಟು ಎಕರೆಗೆ ರಾಜ್ಯ ಸರ್ಕಾರದ ಯೋಜನೆಯಿಂದ ಹಾಗೂ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಬೀಮಾ ವಿಮೆ ಮಾಡಿಸಿ ನಷ್ಟದಿಂದ ಪರಿಹಾರ ಪಡೆಯಬೇಕು ಎಂದು ಸಲಹೆ ನೀಡಿದರು.



ರೈತರು ಸದ್ಯ ಉಳುಮೆ ಮಾಡಬಾರದು ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದ ಮಾಗನೂರ,ರಾಜ್ಯದಲ್ಲಿ ಶೇ. 70 ಕ್ಕಿಂತ ಹೆಚ್ಚು ಜನ ರೈತಾಪಿ ವರ್ಗದವರಿದ್ದಾರೆ. ರೈತರು ಬಿತ್ತನೆ ಮಾಡದಿದ್ದರೆ ಬದುಕುವುದು ಹೇಗೆ? ಒಂದು ವೇಳೆ ಬಿತ್ತನೆ ಮಾಡಬೇಡಿ ಎನ್ನುವುದಾದರೆ ರೈತರ ಕಷ್ಟಕ್ಕೆ ಸರ್ಕಾರವೇ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂಪಾಯಿ ಪರಿಹಾರ ಘೋಷಿಸಲಿ ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಇಲ್ಲಿವರೆಗೂ ಕೃಷಿ ಸಚಿವರ ನೇಮಕವಾಗದಿರುವುದನ್ನು ಪ್ರಶ್ನಿಸಿದ ಅವರು, ಕಲ್ಯಾಣ ಕರ್ನಾಟಕ ಭಾಗದ ಬಗ್ಗೆ ಸರ್ಕಾರ–ಕ್ಕೆ ನಿಜವಾದ ಕಾಳಜಿ ಇದ್ದರೆ ತಕ್ಷಣವೇ ಕೃಷಿ ಸಚಿವರನ್ನು ನೇಮಿಸಬೇಕು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಹುಪಾಲು ಕಾಂಗ್ರೆಸ್ ಪಕ್ಷದ ಶಾಸಕರಿದ್ದಾರೆ. ಆದರೂ ಈ ಭಾಗದ ರೈತರ ಕಷ್ಟ ತಿಳಿಯಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ ಎಂದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನ್ನಭಾಗ್ಯ ಯೋಜನೆ ಅಡಿ ನೀಡಬೇಕಾದ 5 ಕೆಜಿ ಅಕ್ಕಿಯನ್ನೂ ಸರಿಯಾಗಿ ನೀಡುತ್ತಿಲ್ಲ, ಅದನ್ನು ಕೇಂದ್ರದ ನರೇಂದ್ರ ಮೋದಿ ಸರ್ಕಾರ ಪ್ರಸ್ತುತವಾಗಿ ನೀಡುತ್ತಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಮ್ಮ ಭಾಗದ ರೈತರ ಸಂಕಷ್ಟವನ್ನು ಕಾಣಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಸುರಪುರ ತಾಲೂಕು ನಾರಾಯಣಪುರ ಬಸವಸಾಗರ ಜಲಾಶಯದ ವ್ಯಾಪ್ತಿಯಲ್ಲಿ 4 ಲಕ್ಷ ಹೆಕ್ಟೇರ್ ನೀರಾವರಿ ಭೂಮಿ ಇದ್ದರೂ, ಪ್ರಸ್ತುತ ಜಲಾಶಯಕ್ಕೆ ನೀರಿನ ಒಳಹರಿವು ಶೂನ್ಯವಾಗಿದೆ. ಕೇವಲ ಕುಡಿಯುವ ನೀರಿಗಾಗಿ ಮಾತ್ರ ನೀರನ್ನು ಕಾಯ್ದಿರಿಸಲಾಗಿದೆ. ಈಗಾಗಲೇ ಶೇ. 95 ರಷ್ಟು ರೈತರು ಅಲ್ಪಸ್ವಲ್ಪ ಸುರಿದ ಮಳೆಯನ್ನು ನಂಬಿ ಬಿತ್ತನೆ ಮಾಡಿದ್ದಾರೆ.

ಮುಖ್ಯಮಂತ್ರಿಗಳು ಕಲ್ಯಾಣ ಕರ್ನಾಟಕ ಭಾಗಕ್ಕೆ ಆಗಮಿಸಿ ರೈತರ 'ಕ್ಯಾಬಿನೆಟ್' ಸಭೆ ನಡೆಸಿ ಅವರ ಅಹವಾಲು ಆಲಿಸಬೇಕು.

ಸರ್ಕಾರವೂ ತಕ್ಷಣವೇ ರೈತ ಬೆಳೆದ ವಿವಿಧ ಬೆಳೆಗೆ ಪ್ರತಿ ಎಕರೆಗೆ 50 ಸಾವಿರ ರೂಪಾಯಿ ಪರಿಹಾರ ಬಿಡುಗಡೆ ಮಾಡಬೇಕು ಎಂದು ಒತ್ತಾಯ ಮಾಡಿದರು.

# ಕಲ್ಯಾಣ ಜನರಿಗೆ ಸಾಂತ್ವನ ಬೇಡ ಪರಿಹಾರ ಕೊಡಿ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಮಾಡ ಆಗಕತ್ಯಾದ ಮಳಿ ಬರ್ತಿಲ್ಲ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಜನರು ಸಂಕಷ್ಟಕ್ಕೀಡಾದ ಸಂದರ್ಭದಲ್ಲಿ ಸರ್ಕಾರದ ಪ್ರತಿನಿಧಿಗಳು, ಮುಖ್ಯಮಂತ್ರಿಗಳಾದಿಯಾಗಿ ಇಲ್ಲಿಯವರೆಗೆ ಹಲವರು ಈ ಭಾಗದ ಜಿಲ್ಲೆಗಳಿಗೆ ಭೇಟಿ ನೀಡುವುದು, ಅಧಿಕಾರಿಗಳ ಸಭೆ ನಡೆಸಿ ಸಾಂತ್ವಾನ ಹೇಳುವ ಕೆಲಸ ಮಾಡುತ್ತಿವೆಯೇ ಹೊರತು ಪರಿಹಾರ ನೀಡುವ ಕೆಲಸ ಮಾಡುತ್ತಿಲ್ಲವೆಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅಸಮಾಧಾನವ್ಯಕ್ತಪಡಿಸಿದರು.

ಗುರುಮಠಕಲ್ ಮತಕ್ಷೇತ್ರದ ಯಂಪಾಡದಲ್ಲಿ 80 ಲಕ್ಷ, ಶಿವಪೂರದಲ್ಲಿ 1ಕೋಟಿ20ಲಕ್ಷ, ಎಲ್ಹೇರಿ ಗ್ರಾಮದಲ್ಲಿ 1 ಕೋಟಿ ರಸ್ತೆ ಅಭಿವೃದ್ಧಿ ಕಾಮಗಾರಿ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳು ಬಂದ ಪುಟ್ಟ ಹೋದ ಪುಟ್ಟ. ಆಗಬಾರದು ಮಾತೃಹೃದಯಿಯಾಗಲಿ, ಭೀಮಾ, ಕೃಷ್ಣಾಕ್ಕೆ ನೀರಿಲ್ಲ ಜನ ಜಾನುವಾರಿಗಳಿಗೆ ತೊಂದರೆಯಾಗುತ್ತಿದೆ. ನಮ್ಮ ಭಾಗದಲ್ಲಿನ ಕುಡಿವ ನೀರಿನ ಸಮಸ್ಯೆ ಬಗೆ ಹರಿಸಿ, ಮೊದಲ ಶಾಲೆ ಕಟ್ಟಿಕೊಂಡಿವಿ, ಆಸ್ಪತ್ರೆಗಳನ್ನು ಕಟ್ಟಿಕೊಂಡಿವಿ ಶಿಕ್ಷಕರು, ವೈದ್ಯರನ್ನು ಕೊಡಿ ನಮ್ಮ ಜನರ ಉದ್ಧಾರಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತನ್ನಿ ಎಂದರು.

ಒಣ ಬೇಸಾಯವುಳ್ಳ ರೈತರು ಬಾಳ್ ಹೈರಾಣ ಆಗ್ಯಾರ ಸರ್ಕಾರ ಅವರ ಕಷ್ಟಕ್ಕೆ ಬರಬೇಕಿದೆ

ಮುಖ್ಯಮಂತ್ರಿಗಳ ರಾಜಕೀಯ ಗುರು ಖರ್ಗೆಯವರು ಹೇಳಿದಂತೆ ಅಭಿವೃದ್ಧಿ ಹೊಳೆ ಹರಿಸುವುದು ಬೇಡ, ಮೈಸೂರು ಭಾಗದಂತೆ ಅಭಿವೃದ್ಧಿ ಮಾಡಿ ಎಂದರು.

ಈ ಹಿಂದ ಸಿದ್ದರಾಮಯ್ಯ ನವರು ಮುಖ್ಯಮಂತ್ರಿಯಾಗಿದ್ದಾಗ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಪ್ರತ್ಯೇಕ ಸಚಿವಾಲಯ ಘೋಷಣೆಮಾಡಿ 2.5 ವರ್ಷ ಕಳೆಯಿತು. ಇಲ್ಲಿಯವರೆಗೆ ಯಾವುದೇ ಕೆಲಸವಾಗಿಲ್ಲ, ಮಾತುಕೊಟ್ಟು ಅವರಂತೆ ಸಿದ್ದರಾಮಯ್ಯನಂತೆ ಮರಿಬ್ಯಾಡ್ರಿ, ಬರಿ ಘೋಷಣೆಗಳ ಸರ್ಕಾರ ಆಗಬಾರದು, ರೈತರಿಗೆ ಜೀವನ ನಡೆಸಲಿಕ್ಕಾದರೂ ಸಹಾಯ ಮಾಡಿ ಎಂದು ಮುಖ್ಯಮಂತ್ರಿ ಡಿ.ಕೆ.ಶಿಯವರಿಗೆ ಮನವಿ ಮಾಡಿದರು.

ಗ್ರಾಪಂನಲ್ಲಿ ಪಿಡಿಒಗಳು ಹಳ್ಳಿಗಳಲ್ಲಿ ಇರುವ ಸಣ್ಣಪುಟ್ಟ ಸಮಸ್ಯೆಗಳು ಬಗೆಹರಿಸಲು ಪ್ರಯತ್ನಿಸಬೇಕು. ಗ್ರಾಮದಲ್ಲಿ ಬೋರವೆಲ್ ಬೇಡಿಕೆ ಇದೆ. ಆದರೆ, ಇಲ್ಲಿಂದಲೇ ಬೆಳೆದು ಹೋದವರು ನಮಗೆ ಅನುದಾನವನ್ನೇ ಕೊಡಲಿಲ್ಲ ಎಂದರು. ಕೆಕೆಆರ್ಡಿಬಿಯಿಂದ ಅನುದಾನ ಬಿಡುಗಡೆಯಾಗಲಿದ್ದು ಗ್ರಾಮಸ್ಥರನ್ನು ಕರೆದು ನಿಮಗೆ ಅವಶ್ಯಕತೆ ಇರುವ ಕೆಲಸ ಮಾಡಿಕೊಡುವೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪಿಆರ್ಇ ಎಇಇ ಶರಣಬಸಪ್ಪ, ಲೋಕಪಯೋಗಿ ಇಲಾಖೆ ವಿಶೇಷ ಉಪ ವಿಭಾಗ ಕೈಲಾಸ ಅನ್ವಾರ, ಉಪ ತಹಸೀಲ್ದಾರ ಅಶೋಕ ರಾಜಗಿರೆ, ಭೂ ಸೇನಾ ನಿಗಮದ ಬನ್ನಪ್ಪ ಕೋಮಾರ, ಜಿಲ್ಲಾ ನಿರ್ಮಿತಿ ಕೇಂದ್ರದ ಅಧಿಕಾರಿ ಕಿರಣಕುಮಾರ ಹೂಗಾರ, ಪಿಡಿಒ ಮಲ್ಲಿಕಾರ್ಜುನ ಸಜ್ಜನ್, ವಿಶ್ವನಾಥ, ನಾಗರತ್ನ ಎಲ್ಹೇರಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಅಜಯರಡ್ಡಿ ಎಲ್ಹೇರಿ, ಈಶ್ವರ ನಾಯಕ, ಮಲ್ಲಿಕಾರ್ಜುನ ಅರುಣಿ, ಎಲ್ಹೇರಿ ಗ್ರಾಮದ ಶರಣಗೌಡ ಮಾಲೀ ಪಾಟೀಲ, ಸಿದ್ದಣಗೌಡ ದಳಪತಿ ಎಲ್ಹೇರಿ, ಬಸವರಾಜ ಕಣೇಕಲ್, ಸಿದ್ದರಾಮರಡ್ಡಿ ಎಲ್ಹೇರಿ, ಮುನ್ನಾ ಜಿಬಿ ತಾಂಡಾ, ನಾಗರಡ್ಡಿ ವೆಂಕಟರಾಯ, ಚಂದ್ರು ಮಾಲೀ ಪಾಟೀಲ, ಸಂದೀಪ್ ಪಾಟೀಲ, ಹಣಮಂತ್ರಾಯ ವಂಕಮನಿ, ಬಸವರಾಜಪ್ಪ ಹಳ್ಳಿ, ಶಿವಪೂರ ಗ್ರಾಮದ ಶಂಭುಲಿಂಗಪ್ಪ ಸಾಹುಕಾರ, ಯಂಪಾಡ ಗ್ರಾಮದ ಶರಣಗೌಡ ಯಂಪಾಡ, ಭೀಮಣ್ಣ ಪೂಜಾರಿ, ಜಯೇಂದ್ರ ಎಂಪಾಡ ತಾಂಡಾ, ಶಾಂತು ಜಾಧವ್ ವಕೀಲರು, ಮಲ್ಲಿಕಾರ್ಜುನ ಸಾಹುಕಾರ ತಾತಳಗೇರಾ, ಹೊನ್ನಪ್ಪ ತಾತಾಳಗೇರಾ, ಅಧಿಕಾರಿಗಳು, ಜೆಸ್ಕಾಂ ಸಿಬ್ಬಂದಿಗಳು ಇತರರಿದ್ದರು.



## ಶಾಸಕ ಕಂದಕೂರ ಭರವಸೆ

•ಯಂಪಾಡ ಸರ್ಕಾರಿ ಶಾಲೆ ಮಕ್ಕಳಿಗೆ ಆಟದ ಮೈದಾನಕ್ಕೆ ಸಹಕಾರ ನೀಡುವುದರ ಜೊತೆಗೆ ವೈಯಕ್ತಿಕವಾಗಿ ಆಟದ ಪರಿಕರಗಳನ್ನು ನೀಡುವುದಾಗಿ ಶಾಲಾಮಕ್ಕಳಿಗೆ ಭರವಸೆ ನೀಡಿದರು.

• ಎಲ್ಹೇರಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಮಕ್ಕಳು ಶುದ್ಧ ಕುಡಿವ ನೀರಿನ ಘಟಕ ದುರಸ್ತಿ ಮತ್ತು ಶಿಕ್ಷಕರ ಲಭ್ಯತೆ ಕೇಳಿದಾಗ ಸ್ಥಳದಲ್ಲಿಂದರೆ ಮೇಲಾಧಿಕಾರಿಗಳಿಗೆ ಪೋನಾಯಿಸಿ ಶಿಘ್ರದಲ್ಲಿಯೇ ಸಮಸ್ಯೆ ನೀಗಿಸುವಂತೆ ಎಚ್ಚರಿಸಿ ಕೆಲಸ ಮುಗಿದ ಕೂಡಲೇ ಸ್ಥಳದ ಭಾವಚಿತ್ರ ಕಳಿಸುವಂತೆ ತಾಕೀತು ಮಾಡಿದರು.

• ಜಿ.ಬಿ.ತಾಂಡಾಕ್ಕೆ ವಿದ್ಯುತ್ ಸಮಸ್ಯೆ ಪರಿಹರಿಸುವದರ ಜೊತೆಗೆ ರಸ್ತೆ ನಿರ್ಮಾಣಕ್ಕೆ ಅನುದಾನ ನೀಡುವುದಾಗಿ ಭರವಸೆ ನೀಡಿದರು.

• ಎಲ್ಹೇರಿ ಸರ್ಕಾರಿ ವಸತಿ ನಿಲಯ ಸಮಸ್ಯೆಗಳಾದ ಬೆಡ್, ಬೆಡ್‌ಸಿಟ್, ಹೊರಾಂಗಣ ಸ್ವಚ್ಛತೆ, ಶುದ್ಧ ಕುಡಿವ ನೀರಿನ ಸಮಸ್ಯೆ ಪರಿಹಾರಕ್ಕೆ ಸ್ಥಳದಲ್ಲಿಯೇ ಸೂಚಿಸಿ, ಪೋಟೋ ಕಳಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

• ಎಲ್ಹೇರಿ ಗ್ರಾಮದಲ್ಲಿ ಅಂಗನವಾಡಿ ಕೇಂದ್ರ 5ರಲ್ಲಿ ಹೊಸ ಅಂಗನವಾಡಿ ಕೇಂದ್ರಕ್ಕೆ ಕೆಕೆಆರ್ಡಿಬಿ ಅನುದಾನದಲ್ಲಿ ಮಾಡಿಸಿಕೊಡುವ ಭರವಸೆ

• ಪರಮೇಶಪಲ್ಲಿಗೆ ಬಸ್ ನಿಲ್ದಾಣ ಕೊಡುವುದರ ಜೊತೆಗೆ ಮತಕ್ಷೇತ್ರದಲ್ಲಿ ಸರ್ವೆ ಮಾಡಿಸುತ್ತಿದ್ದೇನೆ ಎಲ್ಲಾ ಬಸ್ ನಿಲ್ದಾಣಗಳನ್ನು ಮಾಡಿಸೋಣ ಎಂದ ಜನರಿಗೆ ಭರವಸೆ ನೀಡಿದರು.

## ಕೆಕೆಆರ್‌ಡಿಬಿ ಆಯುಕ್ತರಿಗೆ ನಟ್ಟು ಬೋಲ್ಟ್ ಟೈಟ್ ಮಾಡಿ

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಯಾಗಲಿ ಎನ್ನುವ ಉದ್ದೇಶದಿಂದ ಸರ್ಕಾರ 5 ಸಾವಿರ ಕೋಟಿ ಅನುದಾನ ನೀಡುತ್ತಿದೆ. ಆದರೆ ಅಲ್ಲಿನ ಆಯುಕ್ತರಾದಿಯಾಗಿ ಹಲವು ಅಧಿಕಾರಿಗಳು ಬಹಳ ಬೇಜಾವಾಬ್ದಾರಿತನದಿಂದ ಕೂಡಿದ್ದು, ಅವರುಗಳಿಗೆ ನಟ್ಟು ಬೋಲ್ಟು ಟೈಟ್ ಮಾಡಬೇಕು, ಮುಖ್ಯಮಂತ್ರಿಗಳು ಕೆಲಸ ಮಾಡದ ಅಧಿಕಾರಿಗಳ ನಟ್ಟು ಬೋಲ್ಟ್ ಟೈಟ್ ಮಾಡಿದಾಗ ಮಾತ್ರ ಅಭಿವೃದ್ಧಿಯಾಗುತ್ತದೆ. ಸರ್ಕಾರಕ್ಕೂ ಮತ್ತು ಜನಪ್ರತಿನಿಧಿಗಳಿಗೂ ಕೆಟ್ಟ ಹೆಸರು ಬರುವುದು ತಪ್ಪುತ್ತದೆ. ಸರ್ಕಾರಿ ಅನುದಾನ ಖರ್ಚು ಮಾಡದೇ ಇರುವ ಅಧಿಕಾರಿಗಳಿಗೆ ಚಳಿ ಬಿಡಿಸಬೇಕು.

**– ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್ ಮತಕ್ಷೇತ್ರ**

# ಸರ್ವರಿಗೂ ಸಮಬಾಳು ಮತ್ತು ಸಮಪಾಲು ನೀಡಿದವರು ಡಾ.ಅಂಬೇಡ್ಕರ್



• **ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ**

ಸರ್ವರಿಗೂ ಸಮಬಾಳು ಮತ್ತು ಸಮಪಾಲು ಎಂಬ ಸಂದೇಶದ ಜೀವನ ಬದುಕು ನಡೆಸುವ ಸಂವಿಧಾನ ತಂದುಕೊಟ್ಟ ಡಾ. ಬಿಆರ್ ಅಂಬೇಡ್ಕರ್ ರವರು ನಮ್ಮೆಲ್ಲರ ಹೆಮ್ಮೆ ಎಂದು ಬ್ಲೂ ಇಂಡಿಯ ಕರ್ನಾಟಕ ಪಕ್ಷದ ರಾಜ್ಯ ಅಧ್ಯಕ್ಷ ರಾಜಶೇಖರ್ ದೊಡ್ಡಣ್ಣ ಮೌರ್ಯ ತಿಳಿಸಿದರು.

ತಾಲೂಕಿನ ಆಯಿತನಹಳ್ಳಿ ಗ್ರಾಮದಲ್ಲಿ ಭಾನುವಾರ 23ನೇ ಡಾ. ಬಿಆರ್ ಅಂಬೇಡ್ಕರ್ ಅವರ ಪ್ರತಿಮೆಯನ್ನು ಕೊಡುಗೆಯಾಗಿ ನೀಡುವ ಮೂಲಕ ಶಂಕು ಸ್ಥಾಪನೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಭಗವಾನ್ ಬುದ್ಧ ರವರು ಜಗತ್ತಿಗೆ ಕರುಣೆ ಪ್ರೀತಿ ಸಮಾನತೆ ಸಮಬಾಳ್ವೆ, ಸಂದೇಶವನ್ನು ಸಾರಿದ ಅವರ ಸಿದ್ಧಾಂತವನ್ನು ಮೈಗೂಡಿಸಿಕೊಂಡ ಅಂಬೇಡ್ಕರ್ ರವರ ಮೂರ್ತಿಯನ್ನು ಎಲ್ಲೆಡೆ ನೀಡುವ ಅವಕಾಶ ನನಗೆ ದೊರಕಿರುವುದು ಅಪಾರ ಸಂತಸ ತಂದಿದೆ ಎಂದರು.

ಅದೇ ರೀತಿ ಆಯಾಯ ಸಮುದಾಯದ ಮಹಾಪುರುಷರ ಮೂರ್ತಿಗಳನ್ನು ನೀಡಲು ನಾನು ಬದ್ಧನಾಗಿದ್ದು ಆ ಮಹಾನೀರ ತತ್ವ ಆದರ್ಶವನ್ನು ಪಾಲಿಸಿ ಎಲ್ಲರೂ ಮುಂದುವರೆಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಯ. ಜವರಯ್ಯ. ಶಿವರುದ್ರಪ್ಪ. ಹುಚ್ಚಯ್ಯ. ಅಂಬೇಡ್ಕರ್ ಯುವಕರ ಸಂಘದ ಉಪಾಧ್ಯಕ್ಷರಾದ ಶಿವಯ್ಯ ಕಾರ್ಯದರ್ಶಿ ಮಣಿಕಂಠ ಎ ಹೆಚ್ ನಿರ್ದೇಶಕರಾದ ಅನಿಲ್ ಕುಮಾರ್ ಅವಿನಾಶ್ ಸಂತೋಷ್ ಹಾಗೂ ಗ್ರಾಮಸ್ಥರಾದ ಮಹದೇವಮ್ಮ ಜಯಮ್ಮ ಗಣೇಶ ಎ ಜೆ ಮತ್ತಿತರರು ಹಾಜರಿದ್ದರು.

# ನಶಾ ಮುಕ್ತ ಭಾರತ ಅಭಿಯಾನ ಜಾಗೃತಿ ಶಿಬಿರ




• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಗ್ರಾಮೀಣಾಭಿವೃದ್ಧಿ ಸಚಿವಾಲಯದ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಎಸ್‌ಬಿಐ ಆರ್‌ಸೆಟಿ, ಕೊಪ್ಪಳದಲ್ಲಿ ಜಾಗೃತಿ ಶಿಬಿರವನ್ನು ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಎಸ್‌ಬಿಐ ಆರ್‌ಸೆಟಿ, ಕೊಪ್ಪಳದ ನಿರ್ದೇಶಕರಾದ ಶ್ರೀ ರಾಯೇಶ್ವರ ಪೈ ಅವರು, ಭಾರತವನ್ನು ನಶಾ ಮುಕ್ತ ರಾಷ್ಟವನ್ನಾಗಿ ಮಾಡುವಲ್ಲಿ ಯುವಶಕ್ತಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಯುವಜನರು ವ್ಯಸನಗಳಿಂದ ದೂರವಿದ್ದು ಆರೋಗ್ಯವಂತ ಹಾಗೂ ಜವಾಬ್ದಾರಿಯುತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಉಪನ್ಯಾಸಕಿ ಗೀತಾ ಅವರು ಶಿಬಿರಾರ್ಥಿಗಳಿಗೆ ನಶಾ ಮುಕ್ತ ಭಾರತದ ನಿರ್ಮಾಣಕ್ಕಾಗಿ ಪ್ರಮಾಣ ವಚನ ಬೋಧಿಸಿ, ಮಾದಕ ವ್ಯಸನಗಳಿಂದ ದೂರವಿರುವ ಸಂಕಲ್ಪ ಮಾಡಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಅವರು, ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿ, ವ್ಯಸನದಿಂದ ವ್ಯಕ್ತಿ, ಕುಟುಂಬ ಹಾಗೂ ಸಮಾಜದ ಮೇಲೆ ಉಂಟಾಗುವ ಪರಿಣಾಮಗಳನ್ನು ವಿವರಿಸಿದರು. ಯುವಕರು ಹಾಗೂ ಸಾರ್ವಜನಿಕರು ಯಾವುದೇ ರೀತಿಯ ಮಾದಕ ವ್ಯಸನಗಳಿಗೆ ಒಳಗಾಗದೆ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತರಬೇತುದಾರರಾದ ವಿ. ಪ್ರೀತಿ ಮತ್ತು ಲಕ್ಷ್ಮೀ ಹಾಗೂ ಮಹಿಳಾ ಹೊಲಿಗೆ ಮತ್ತು ಬ್ಯೂಟಿ ಪಾರ್ಲರ್ ತರಬೇತಿ ಶಿಬಿರಾರ್ಥಿಗಳು ಉಪಸ್ಥಿತರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಡಾ . ಶ್ಯಾಮ ಪ್ರಸಾದ್ ಮುಖರ್ಜಿ ಅವರ 125ನೇ ಜಯಂತಿ ಆಚರಣೆ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**



ಪಟ್ಟಣದ 14ನೇ ವಾರ್ಡ್‌ನ ವಿನೋಬಾ ನಗರದಲ್ಲಿರುವ ಬಿಜೆಪಿ ಹಿರಿಯ ಕಾರ್ಯಕರ್ತರಾದ ನಾಗರಾಜ್ ನಿಕ್ಕಂ ಅವರ ಗೃಹದಲ್ಲಿ ಭಾರತೀಯ ಜನಸಂಘದ ಸಂಸ್ಥಾಪಕರಾದ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ 125ನೇ ಜಯಂತಿಯನ್ನ ಅತ್ಯಂತ ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಮುಖರ್ಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾ ಪ್ರಕೋಷ್ಠಗಳ ಸಂಯೋಜಕರಾದ ಮಂಜುನಾಥ ನಾಡಗೌಡರ್ ಅವರು, ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ರಾಷ್ಟ ಸಮರ್ಪಿತ ಜೀವನ ಹಾಗೂ ದೇಶದ ಅಖಂಡತೆಗಾಗಿ ಅವರು ಮಾಡಿದ ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸಿದರು. ಕಾಶ್ಮೀರ ವಿಚಾರದಲ್ಲಿ ಮುಖರ್ಜಿಯವರು ತಳೆದಿದ್ದ ದಿಟ್ಟ ನಿಲುವುಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟ ಅವರು, "ಒಂದೇ ದೇಶದಲ್ಲಿ ಇಬ್ಬರು ಪ್ರಧಾನಿ, ಇಬ್ಬರು ಮುಖ್ಯಸ್ಥರು ಮತ್ತು ಎರಡು ಸಂವಿಧಾನ ಇರಲು ಸಾಧ್ಯವೇ ಇಲ್ಲ ಎಂದು ಹೋರಾಡಿದ ಮಹಾನ್ ದೇಶಭಕ್ತ ಮುಖರ್ಜಿಯವರು. ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ 370ನೇ ವಿಧಿಯನ್ನು ವಿರೋಧಿಸಿ ಅವರು ಅಂದು ಹೂಡಿದ ಹೋರಾಟವೇ ಇಂದಿನ ನವ ಭಾರತಕ್ಕೆ ಗಟ್ಟಿ ಬುನಾದಿಯಾಗಿದೆ,"ಎಂದು ನುಡಿದರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕಿ ಶ್ರೀಮತಿ ಹೇಮಲತಾ ನಾಯಕ್ ಅವರು ಆಗಮಿಸಿ ಕಾರ್ಯಕ್ರಮಕ್ಕೆ ಆಕರ್ಷಣೆ ತಂದರು. ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಬಸವರಾಜ್ ಗೌರ, ಮಂಡಲದ ಅಧ್ಯಕ್ಷರಾದ ಮಾರುತಿ ಹೊಸಮನಿ, ಪಕ್ಷದ ಪ್ರಮುಖ ಮುಖಂಡರುಗಳಾದ ಶಿವಕುಮಾರ್ ನಾಗಲಾಪುರಮಠ್ ಹಾಗೂ ಅನಿಲ್ ಆಚಾರ್ ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಕಾರಣರಾದರು.

ಸ್ಥಳೀಯ ಪಟ್ಟಣ ಪಂಚಾಯಿತಿಯ ಸದಸ್ಯರುಗಳಾದ ಬಾಲರಾಜ್ ಗಾಳಿ, ಸಿದ್ದಲಿಂಗಸ್ವಾಮಿ ಉಳಾಗಡ್ಡಿ, ಮಲ್ಲಿಕಾರ್ಜುನ ಚೌಧರಿ, ಸಾದಿಕ್ ಪಾಷಾ, ಮಾಂತೇಶ್ ಹೂಗಾರ್ ಹಾಗೂ ಕಳಕೇಶ್ ಹತ್ತಿಕಟಗಿ, ಗಂಗಾಧರ ನಾರಾಯಣಿ ಸೇರಿದಂತೆ ಸುತ್ತಮುತ್ತಲಿನ ವಾರ್ಡ್‌ಗಳ ಹಲವಾರು ಪ್ರಮುಖ ಕಾರ್ಯಕರ್ತರು ಪಾಲ್ಗೊಂಡು ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಗೊಳಿಸಿದರು.

# 28 ವರ್ಷಗಳ ದೇಶಸೇವೆಯ ಬಳಿಕ ಸ್ವಯಂ ನಿವೃತ್ತಿ; ರೇವಣಕಿ ಗ್ರಾಮದ ಈರಪ್ಪ ನೋಟಗಾರ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲೂಕಿನ ಕುದರಿಮೋತಿ ಸಮೀಪದ ರೇವಣಕಿ ಗ್ರಾಮದ ಹೆಮ್ಮೆಯ ಪುತ್ರರಾದ ಈರಪ್ಪ ನೋಟಗಾರ ಅವರು ಸುಮಾರು 28 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಕರ್ತವ್ಯನಿಷ್ಠೆಯಿಂದ ದೇಶಸೇವೆ ಸಲ್ಲಿಸಿ, ರಾಷ್ಟದ ಗಡಿಗಳನ್ನು ರಕ್ಷಿಸುವ ಪವಿತ್ರ ಜವಾಬ್ದಾರಿಯನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿ, ಸ್ವಯಂ ಪ್ರೇರಿತ ನಿವೃತ್ತಿ ಹೊಂದಿ ಸ್ವಗ್ರಾಮಕ್ಕೆ ಆಗಮಿಸಿದ ಸಂದರ್ಭದಲ್ಲಿ, ಕುದರಿಮೋತಿಯ ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯ ಅಧ್ಯಕ್ಷರು, ಪದಾಧಿಕಾರಿಗಳು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳಿಂದ ಆತ್ಮೀಯ ಸ್ವಾಗತ ಮತ್ತು ಅದ್ದೂರಿ ಸನ್ಮಾನ ಮಾಡಲಾಯಿತು. ಕುದರಿಮೋತಿ ಕ್ರಾಸ್‌ನಿಂದ ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯವರೆಗೆ ಬೈಕ್ ರ್ಯಾಲಿ ಆಯೋಜಿಸಿ, ಜಯಘೋಷಗಳೊಂದಿಗೆ ಈರಪ್ಪ ನೋಟಗಾರ ಅವರನ್ನು ಭವ್ಯವಾಗಿ ಬರಮಾಡಿಕೊಳ್ಳಲಾಯಿತು. ಬಳಿಕ ನಡೆದ ಸನ್ಮಾನ ಸಮಾರಂಭದಲ್ಲಿ ಶಾಲೆಯ ಅಧ್ಯಕ್ಷರಾದ ಅಶೋಕ್ ಗಟ್ಟೆಪ್ಪನವರ ಹಾಗೂ ಗ್ರಾಮಸ್ಥರು ಶಾಲು



ಹೊದಿಸಿ, ಹಾರ ಹಾಕಿ ಗೌರವ ಸಲ್ಲಿಸಿದರು.ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶಾಲೆಯ ಅಧ್ಯಕ್ಷರಾದ ಅಶೋಕ್ ಗಟ್ಟೆಪ್ಪನವರ ಅವರು, "ದೇಶದ ಗಡಿಯಲ್ಲಿ ಹಗಲು–ರಾತ್ರಿ, ಬಿಸಿಲು–ಮಳೆ, ಚಳಿ–ಗಾಳಿ ಎನ್ನದೆ 28 ವರ್ಷಗಳ ಕಾಲ ರಾಷ್ಟದ ಭದ್ರತೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿರುವ ಈರಪ್ಪ ನೋಟಗಾರ ಅವರ ಸೇವೆ ಅತ್ಯಂತ ಶ್ಲಾಘನೀಯ. ನಮ್ಮೆಲ್ಲರ ನೆಮ್ಮದಿಯ ಬದುಕಿನ ಹಿಂದೆ ಸೈನಿಕರ ತ್ಯಾಗ, ಶಿಸ್ತು, ಧೈರ್ಯ ಮತ್ತು ದೇಶಪ್ರೇಮ ಅಡಗಿದೆ. ಇಂತಹ ಮಹಾನ್ ಯೋಧರನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ. ಅವರ ಜೀವನ ಮತ್ತು ಸೇವೆ ಯುವಜನತೆಗೆ ದೇಶಭಕ್ತಿಯ ಪ್ರೇರಣೆಯಾಗಲಿ. ಅವರ ಮುಂದಿನ ಜೀವನ ಸುಖ, ಶಾಂತಿ, ಉತ್ತಮ ಆರೋಗ್ಯ ಹಾಗೂ ಸಮೃದ್ಧಿಯಿಂದ ಕೂಡಿರಲಿ" ಎಂದು ಹಾರೈಸಿದರು.ಈ ಸಂದರ್ಭದಲ್ಲಿ ಗ್ರಾಮದ ಗುರುಹಿರಿಯರಾದ ಅಶೋಕ್ ಸಜ್ಜನ್, ಮಂಜುನಾಥ್ ಗಟ್ಟೆಪ್ಪನವರ, ವಿರುಪಣ್ಣ ಹೊನ್ನುಂಚಿ, ದೇವಪ್ಪ ನೆಲಜೇರಿ, ದೇವಪ್ಪ ಬೊಮ್ಮನಾಳ, ರಾಮಣ್ಣ ಹನಮಟ್ಟಿ, ಮರ್ದಾನ್ ಸಾಬ್ ಕೊಡದಾಳ, ಶಿವಪ್ಪ ಬೇವಿನಗಿಡ, ಶ್ರೀಕಾಂತ್ ಸಜ್ಜನ್, ಬಸಣ್ಣ ಬಡಿಗೇರ್, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮೊಬೈಲ್ ಟಾರ್ಚ್‌ನಲ್ಲಿ ಬಸ್ ಚಾಲನೆ ಪ್ರಕರಣ ಚಾಲಕ ಸೇರಿ ಮೂವರು ಅಮಾನತು

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜು.6–ಕಲಬುರಗಿ–ಚಿಂಚೋಳಿ ಕಾರ್ಯಾಚರಣೆಯಲ್ಲಿದ ಬಸ್ ಸಂಖ್ಯೆ ಕೆಎ.28 ಎಫ್–1985 ರಾತ್ರಿ ಕೊನೆಯ ಸುತ್ತಿನ ಕಾರ್ಯಾಚರಣೆ ಸಂದರ್ಭದಲ್ಲಿ ಹೆಡ್ ಲೈಟ್ ಮಂದಗತಿ ಇರುವ ಕಾರಣ ಮೊಬೈಲ್ ಟಾರ್ಚ್ ಬೆಳಕಲ್ಲಿ ಬಸ್ ಚಾಲನೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಮತೆ ಬಸ್ ಚಾಲಕಸೇರಿ ಮೂವರು ಸಿಬ್ಬಂದಿಯನ್ನು ಅಮಾನತ್ತು ಮಾಡಲಾಗಿದೆ ಎಂದು ಸಂಸ್ಥೆಯ ಕಲಬುರಗಿ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ ತಿಳಿಸಿದ್ದಾರೆ.

# ಪರಿಹಾರ ನೀಡಲು ವಿಳಂಬ

## ನ್ಯಾಯಾಲಯದ ಆದೇಶದಂತೆ ಸಾರಿಗೆ ಬಸ್ ಜಪ್ತಿ




• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜು. 06–ಅಪಘಾತದಲ್ಲಿ ಮೃತಪಟ್ಟ ಬೈಕ್ ಸವಾರನಕುಟುಂಬಕ್ಕೆ ಪರಿಹಾರ ನೀಡುವಂತೆ ನ್ಯಾಯಾಲಯ ಆದೇಶಿಸಿದರೂ ಪರಿಹಾರ ನೀಡದೆ ವಿಳಂಬ ಮಾಡಿದ ಕೆಕೆಆರ್‌ಟಿಸಿ ಬಸ್ಸನ್ನು ಬುಧವಾರ ಪಟ್ಟಣದ ಬಸ್ ನಿಲ್ದಾಣದಲ್ಲಿ ಕೋರ್ಟ್ ಸಿಬ್ಬಂದಿ ಜಪ್ತಿ ಮಾಡಿದರು.

ಮಸ್ಕಿ ತಾಲೂಕಿನ ಪಾಂಡುರಂಗ ಕ್ಯಾಂಪ್ ಬಳಿ 2001ರಲ್ಲಿ ಯಾದಗಿರಿ ಘಟಕಕ್ಕೆ ಸೇರಿದ ಸರ್ಕಾರಿ ಬಸ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಉಮೇಶ ಎನ್ನುವವರು ಸಾವಿಗೀಡಾಗಿದ್ದರು. ಕುಟುಂಬದವರು ಪರಿಹಾರಕ್ಕಾಗಿ ಲಿಂಗಸುಗೂರು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ದಾವೆ ಹೂಡಿದ್ದರು. ಜೆಎಂಎಫ್‌ಸಿ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು 66,99,675 ರೂ. ಪರಿಹಾರ ಮೊತ್ತ, 8,37,450 ರೂ. ಬಡ್ಡಿ 7525 ರೂ. ಇತರೆ ವೆಚ್ಚ ಸೇರಿ ಒಟ್ಟು 75,44,650 ರೂ. ನೀಡಬೇಕೆಂದು ಯಾದಗಿರಿ ಸಾರಿಗೆ ಇಲಾಖೆಗೆ ಸೂಚಿಸಿದ್ದರು. ಆದರೆ, ಕೆಕೆಆರ್‌ಟಿಸಿ ವಿಳಂಬ ಮಾಡಿದ್ದರಿಂದ ನ್ಯಾಯಾಲಯವು ಬಸ್ ಜಪ್ತಿ ವಾರೆಂಟ್ ಹೊರಡಿಸಿತ್ತು.

ಹೀಗಾಗಿ ಕೋರ್ಟ್ ಬೇಲಿಫ್ ಮಾನಪ್ಪ. ಬಿ ಅವರು ಶನಿವಾರ ಲಿಂಗಸುಗೂರು ಬಸ್ ನಿಲ್ದಾಣಕ್ಕೆ ಆಗಮಿಸಿ ಯಾದಗಿರಿ ಘಟಕದ (ಕೆಎ 33 ಎಫ್ 0638) ಬಸ್ ವಶಪಡಿಸಿಕೊಂಡು ಲಿಂಗಸುಗೂರು ನ್ಯಾಯಾಲಯಕ್ಕೆ ಒಪ್ಪಿಸಿದರು.

ಈ ಸಂದರ್ಭದಲ್ಲಿ ವಕೀಲರಾದ ಎಚ್.ವೀರಭದ್ರಪ್ಪ, ಶಿವಕುಮಾರ ಶೀಲವಂತನವರ, ಮಲ್ಲಿಕಾರ್ಜುನ ಗೋನಾಳ, ಶಿವಕುಮಾರ ಆದೇಶ ಜಾರಿಕಾರರು ಇದ್ದರು.

# ನಿಖರ ಅಂಕಿ–ಅಂಶಗಳೊಂದಿಗೆ ಸಮಗ್ರ ವರದಿ ಸಿದ್ಧಪಡಿಸಬೇಕು : ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜುಲೈ,06:ಜಿಲ್ಲೆಯ ಇಂದಿನ ನೈಜ ಸ್ಥಿತಿಗತಿಯನ್ನು ಬಿಂಬಿಸುವ ಜಿಲ್ಲಾ ಮಾನವ ಅಭಿವೃದ್ಧಿ ವರದಿ ಹಾಗೂ ಭವಿಷ್ಯದ ಅಗತ್ಯತೆಗಳನ್ನು ಪೂರೈಸುವ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ–2031 ರೂಪಿಸುವ ಕಾರ್ಯ ಪ್ರಗತಿಯಲ್ಲಿದ್ದು,ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ನಿಖರ ಅಂಕಿ–ಅಂಶಗಳೊಂದಿಗೆ ಸಮಗ್ರ ವರದಿ ಸಿದ್ಧಪಡಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಮೇಲ್ವಿಚಾರಣ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ನೀಡುವ ದತ್ತಾಂಶ ರಸ್ತೆ,ಕಟ್ಟಡಗಳಂತಹ ಭೌತಿಕ ಅಭಿವೃದ್ಧಿಗೆ ಸೀಮಿತವಾಗದೇ ಜಿಲ್ಲೆಯ ಜನರ ನೈಜ ಜೀವನಮಟ್ಟ ಹೇಗಿದೆ ಎಂಬುದನ್ನು ತಿಳಿಸುವ ಉಪಯುಕ್ತ ವರದಿಯಾಗಿದೆ. ಜಿಲ್ಲೆಯ ಜನರ ಸರಾಸರಿ ಜೀವಿತಾವಧಿ,ತಾಯಿ–ಮಗು ಮರಣ ಪ್ರಮಾಣ,ಪೌಷ್ಟಿಕತೆಯ ಮಟ್ಟ ಮತ್ತು ಆರೋಗ್ಯ ಸೌಕರ್ಯಗಳ ಲಭ್ಯತೆ.ಸಾಕ್ಷರತಾ ಪ್ರಮಾಣ, ಶಾಲಾ ದಾಖಲಾತಿ, ಹೆಣ್ಣುಮಕ್ಕಳ ಶಿಕ್ಷಣದ ಸ್ಥಿತಿಗತಿ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ಹೀಗೆ ಎಲ್ಲಾ ಅಂಶಗಳನ್ನು ಒಳಗೊಂಡಿರುತ್ತದೆ.

ಆದ್ದರಿಂದ ಅಧಿಕಾರಿಗಳು ನೀಡುವ ದತ್ತಾಂಶ ನಿಖರ ಮತ್ತು ಸ್ಪಷ್ಟತೆಯಿಂದ ಕೂಡಿರಬೇಕು.ಇದು ಭವಿಷ್ಯದ ಜೀವನ ಮಟ್ಟ ಸುಧಾರಣೆಗೆ ಸಹಕಾರಿಯಾಗಲಿದೆ.ಈ ನಿಟ್ಟಿನಲ್ಲಿ ಶುದ್ಧ ಕುಡಿಯುವ ನೀರು,ಶೌಚಾಲಯ,ಪೌಷ್ಟಿಕ ಆಹಾರ ಮತ್ತು ವಸತಿ ಸೌಕರ್ಯಗಳ ಒದಗಿಸಬೇಕು. ಜಿಲ್ಲೆಯ ಯಾವ ತಾಲೂಕುಗಳು ಅಥವಾ ಗ್ರಾಮ ಪಂಚಾಯತಿಗಳು ಶಿಕ್ಷಣ,ಆರೋಗ್ಯ ಮತ್ತು ಆರ್ಥಿಕವಾಗಿ ಹಿಂದುಳಿದಿವೆ ಎಂಬುದನ್ನು ಗುರುತಿಸಿ ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡಬೇಕು. ಈ ಮೂಲಕ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ಸಿಗುವಂತಾಗಬೇಕು ಈ ನಿಟ್ಟಿನಲ್ಲಿ ಅವರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವ ಮೂಲಕ ಸಮಾಜದ ಮುಖ್ಯ ವಾಹಿನಿಗೆ ತರಬೇಕು ಎಂದರು.

ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆಯು ಮುಂದಿನ 5 ವರ್ಷಗಳ ಅಂದರೆ 2031ರ ಗಮನದಲ್ಲಿಟ್ಟುಕೊಂಡು, ಜಿಲ್ಲೆಯನ್ನು ಎಲ್ಲಾ ಹಂತಗಳಲ್ಲಿಯೂ ಮಾದರಿ ಜಿಲೆಯಾಗಿಸಲು ರೂಪಿಸುವ ದೂರದೃಷ್ಟಿ ಯೋಜನೆಯಾಗಿದೆ. ಈ ನಿಟ್ಟಿನಲ್ಲಿ ಮುಂದಿನ ಪೀಳಿಗೆಗೆ ತೊಂದರೆಯಾಗದಂತೆ ಪರಿಸರವನ್ನು ಉಳಿಸಿ ಬೆಳೆಸುವ ಮೂಲಕ ಹನಿ ನೀರಾವರಿ,ಅಂತರ್ಜಲ ವೃದ್ಧಿ, ಆಧುನಿಕ ಕೃಷಿ ಪದ್ಧತಿ ಮತ್ತು ರೈತರ ಆದಾಯ ದ್ವಿಗುಣಗೊಳಿಸಬೇಕು. ಸ್ಥಳೀಯ ಸಂಪನ್ಮೂಲಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಯುವಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಸ್ಥಳೀಯವಾಗಿ ಉದ್ಯೋಗಾವಕಾಶ ನೀಡಿ ವಲಸೆ ತಡೆಯಬೇಕು.ನಗರ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗಳಿಂದ ಪ್ರತಿನಿತ್ಯ ಉಂಟಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಮೂಲಕ ತ್ಯಾಜ್ಯ ಮುಕ್ತ ಜಿಲ್ಲೆಯಾಗಿಸಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ನೀಡುವ ವರದಿ ಅಥವಾ ಯೋಜನೆ ಕೇವಲ ಕಾಗದದ ಮೇಲೆ ಉಳಿಯಬಾರದು. ಅದಕ್ಕಾಗಿಯೇ ಜಿಲ್ಲಾ ಮಟ್ಟದ ಉನ್ನತ ಅಧಿಕಾರಿಗಳ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಸಿಇಒ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಅನ್ನದಾನಸ್ವಾಮಿ,ಹಂಪಿ ವಿವಿಯ ಅಭಿವೃದ್ಧಿ ಅಧ್ಯಯನ ವಿಭಾಗದ ಮುಖ್ಯಸ್ಥ ಹಾಗೂ ಸಮಾಜ ವಿಜ್ಞಾನ ನಿಕಾಯದ ಡೀನ್ ಹೆಚ್.ಡಿ.ಪ್ರಶಾಂತ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ನಿವೃತ್ತ ಮುಖ್ಯಗುರು ಶಿವಪ್ಪ ಕಲ್ಲೂರಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಅಮದಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಿವೃತ್ತ ಶಿಕ್ಷಕ ಶಿವಪ್ಪ ಕಲ್ಲೂರ ದಂಪತಿಗಳಿಗೆ ಶಾಲಾ ಶಿಕ್ಷಕ ವೃಂದದಿಂದ ಸನ್ಮಾನಿಸಿ ಗೌರವಿಸಲಾಯಿತು.

ಶಿಕ್ಷಕ ವೃತ್ತಿಯಲ್ಲಿ ಸುಮಾರು 27 ವರ್ಷ ಸೇವೆ ಸಲ್ಲಿಸಿ ಗಣನೀಯ ಸಾಧನೆ ಮಾಡಿ, ನಿವೃತ್ತಿ ಸಮಯದಲ್ಲಿ ಬನ್ನಿಗೋಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ, ನಿವೃತ್ತಿ ಕೊನೆ ಗಳಿಗೆಯಲ್ಲಿ ಅಮದಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಡ್ತಿ ಹೊಂದಿ ಹಿರಿಯ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸಿದ ಅಮಿನಗಡ ಶಿವಪ್ಪ ಕಲ್ಲೂರ್ ದಂಪತಿಗಳಿಗೆ ಶಾಲಾ ವಿದ್ಯಾರ್ಥಿಗಳಿಂದ ಪುಷ್ಪಾರ್ಚನೆ ಗೈವ ಮೂಲಕ ಅಭಿನಂದಿಸಿ ಸನ್ಮಾನಿಸಿ ಗೌರವಿಸಲಾಯಿತು.ಅಮದಿಹಾಳ ಶಾಲಾ ಮುಖ್ಯ ಗುರುಗಳು ಮುಖ್ಯಗುರುಗಳು ಗುರುಪಾದಪ್ಪ ಛಲವಾದಿ ಸೇರಿದಂತೆ ಶಾಲಾ ಸಿಬ್ಬಂದಿಗಳು, ಆಡಳಿತ ಮಂಡಳಿ ಉಪಸ್ಥಿತರಿದ್ದರು.

# ಕನ್ನಡ ಶಾಲೆ ಉಳಿಸಿ-ಬೆಳೆಸುವಲ್ಲಿ ನಾವೆಲ್ಲರು ಶ್ರಮಿಸಬೇಕು: ಪಾಟೀಲ್

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಕನ್ನಡ ಶಾಲೆ ಉಳಿಸಿ–ಬೆಳೆಸುವಲ್ಲಿ ನಾವೆಲ್ಲ ಶ್ರಮಿಸಬೇಕು. ಈ ನಿಟ್ಟಿನಲ್ಲಿ ಶಿಕ್ಷಕರ ಹಾಗೂ ಪೋಷಕರ ಸಹಕಾರ ಅಗತ್ಯ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್ ಹೇಳಿದರು. ಪಟ್ಟಣದ ಭವಾನಿ ದೇವಸ್ಥಾನದ ಆವರಣದಲ್ಲಿರುವ ವಿದ್ಯಾ ವಿಜ್ಞಾನ ಪ್ರಾಥಮಿಕ ಹಾಗೂ ಜ್ಞಾನ ದರ್ಶನ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಹಾಗೂ 10ನೇ ತರಗತಿಯಲ್ಲಿ ರಾಜ್ಯಕ್ಕೆ 10ನೇ ರ‍್ಯಾಂಕ್ ಹಾಗೂ ಶಾಲೆಗೆ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಮಾಧ್ಯಮ ಶಾಲೆಗಳ ಉಳಿವಿಗೆ ಸರ್ಕಾರ ಹೊಸ ಯೋಜನೆಗಳನ್ನು ರೂಪಿಸಬೇಕು. ಕನ್ನಡ ಭಾಷೆಯೊಂದಿಗೆ ಕನ್ನಡ ಮಾಧ್ಯಮ ಶಾಲೆಗಳನ್ನು ಉಳಿಸಲು ಎಲ್ಲರೂ ಶ್ರಮಿಸಬೇಕು ಎಂದರು. ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಮಾತನಾಡಿ, ಪ್ರತಿಯೊಬ್ಬರು ಪರಿಸರದ ಬಗ್ಗೆ ಕಾಳಜಿ ವಹಿಸುವುದರ ಜತೆಗೆ ಸುತ್ತಲಿನ ಪರಿಸರವನ್ನು ಹಾಳು ಮಾಡುವುದನ್ನು ನಿಲ್ಲಿಸೋಣ. ಖಾಲಿ ಜಾಗದಲ್ಲಿ ಸಸಿಗಳನ್ನು ನೆಟ್ಟು ಅದು ಮರವಾಗುವವರೆಗೆ ರಕ್ಷ ಣೆ ನೀಡಬೇಕು. ಇದರಿಂದ ಅಮ್ಲಜನಕ ಹೆಚ್ಚಾಗುತ್ತದೆ ಎಂದರು. ಚಾಮನಾಳ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಾನಂದ ಸಿಂಧನಕೇರಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜತೆಗೆ ಉತ್ತಮ ಸಂಸ್ಕಾರ ಮೂಡಿಸಬೇಕು ಅಂದಾಗ ಒಳ್ಳೆಯ ನಾಗರೀಕರಾಗಿ ಜೀವನ ನಡೆಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳಲ್ಲಿ ಕ್ರೀಡಾ ಚಟುವಟಿಕೆಗಳತ್ತ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳತ್ತ ಆಸಕ್ತಿ ಮೂಡಿಸಲು ಶಾಲೆ ಆಡಳಿತ ವರ್ಗ ಗಮನ ಹರಿಸಬೇಕಿದೆ. ಇದರಿಂದಾಗಿ ಸಾಕಷ್ಟು ಅನುಕೂಲವಾಗುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಬ್ಯಾಂಕ್ ಉಪ ವ್ಯವಸ್ಥಾಪಕ ಸುನೀಲಕುಮಾರ ರೆಡ್ಡಿ, ಸಂಸ್ಥೆಯ ಅಧ್ಯಕ್ಷೆ ಶೈಲಜಾ ಜಿ. ಹುಡಿಗೆ, ಕಾರ್ಯದರ್ಶಿ ಕರುಣಾ ಸಿ. ಧಾನಪ್ಪ, ಜ್ಞಾನಮೃತ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಚಂದ್ರಶೇಖರ್ ಧಾನಪ್ಪ, ಗುಂಡಪ್ಪ ಹುಡಗೆ, ಸಂಗಪ್ಪ ಖಿನಶೆಟ್ಟಿ, ಅಶೋಕ ಪುರಿ, ಶಂಕರ ಹೊಸದೊಡ್ಡಿ, ರವೀಂದ್ರ ಐನಮತ, ಅಡೆಪ್ಪ ಮಂಠಾಳ, ರೇವಣಸಿದ್ದಪ್ಪ ಧನಶ್ರೀ, ಶಾಲೆಯ ಮುಖ್ಯ ಶಿಕ್ಷಕ ಮಹಾದೇವ ಗುಜ್ಜರ್ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕಿ ಅನ್ನಪೂರ್ಣ ಸ್ವಾಗತಿಸಿದರು. ಭೀಮಶೆಟ್ಟಿ ವಡ್ಡನಕೇರಾ ನಿರೂಪಿಸಿದರು, ಬನ್ನಮ್ಮ ವಂದಿಸಿದರು. ಪ್ರತಿಜ್ಞಾವಿಧಿ ಚಂದ್ರಿಕಾ ಎಂ. ಗುಜ್ಜರ್ ಬೋಧಿಸಿದರು.



**2025–26ನೇ ಸಾಲಿನ ಎಸ್ ಎಸ್ ಎಲ್ಸಿ ಪರೀಕ್ಷೆಯಲ್ಲಿ ರಾಜ್ಯ–ಕ್ಕೆ 10ನೇ ಸ್ಥಾನ ಪಡೆದ ವಿದ್ಯಾರ್ಥಿನಿ ರಶ್ಮಿ ತಂದೆ ಜಗದೀಶ ಹಾಗೂ ಶಾಲೆಗೆ ದ್ವಿತೀಯ ಸ್ಥಾನ ಪಡೆದ ಸಂಗೀತಾ ತಂದೆ ಓಂನಾಥ ವಿದ್ಯಾರ್ಥಿನಿಯರಿಗೆ ಸನ್ಮಾನಿಸಿ ಶುಭ ಹಾರೈಸಿದರು.**

# ಡಾ.ಬಾಬೂಜೀ ಪುಣ್ಯಸ್ಮರಣೆ



• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ನಾಯಕರ ಗುಣ ಅನುಸರಿಸಿ ನಡೆಯುವುದೇ ವಿನಹ ಆದೇಶ ಮಾಡುವುದಲ್ಲ ಎಂಬುದನ್ನು ಹೇಳಿಕೊಟ್ಟವರು ಬಾಬು ಜಗಜೀವನ್ ರಾಮ್ ಎಂದು ಸರ್ಕಾರಿ ಪದವಿ ಪೂರ್ವ ಕಾಲೇಜು ರಾಜ್ಯಶಾಸ್ತ್ರದ ಉಪನ್ಯಾಸಕರಾದ ನಾಗರಾಜ್ ತಿಳಿಸಿದರು.

ಪಟ್ಟಣದಲ್ಲಿರುವ ತಾಲೂಕು ಆಡಳಿತ ಭವನದಲ್ಲಿ ಸೋಮವಾರ ನಡೆದ ಹಸಿರು ಕ್ರಾಂತಿಯ ಹರಿಕಾರ ಎನಿಸಿಕೊಂಡ ಡಾ. ಬಾಬು ಜಗಜೀವನ್ ರಾಮ್ ರವರ 40ನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು.

ತಮ್ಮ ರಾಜಕಾರಣದ ಉದ್ದಕ್ಕೂ ಹೋರಾಟ ನಡೆಸಿ ಅಧಿಕಾರ ಹಿಡಿದ ಬಾಬುರವರು ಎಂಟು ಬಾರಿ ಜಯಶೀಲರಾಗಿ ಅಧಿಕಾರ ಮುಂದುವರೆದ ಅವರ ಹಲವು ಕಾರಣಗಳಿಂದ ಚಿಂತೆಯಿಂದ ಅನಾರೋಗ್ಯಕ್ಕೆ ಒಳಗಾಗಿ ಸಾವನ್ನಪ್ಪಿದರೂ ಎಂದು ವಿವರಿಸಿದರು.

ತಹಶೀಲ್ದಾರ್ ಜೆ ನಿಸರ್ಗ ಪ್ರಿಯ ಮಾತನಾಡಿ ಸಮಾಜದ ಅನಿಷ್ಠ ಪದ್ಧತಿಗಳ ವಿರುದ್ಧ ಪ್ರಶ್ನೆ ಮಾಡಿ ತನ್ನ ಕಟ್ಟಿತನವನ್ನು ಉಳಿಸಿಕೊಂಡು ತಮ್ಮ ರಾಜಕೀಯದ ವಿವಿಧ ಪದವಿ ಹೊಂದಿ ಅಧಿಕಾರ ಮಾಡಲು ಕಾರಣವಾಯಿತು.

ಇಂತಹ ಮಹಾನುಭಾವರ ಆದರ್ಶ ನಮ್ಮೆಲ್ಲರ ಪ್ರೇರಣೆ ಆಗಬೇಕು ಆಗ ಇಂತಹ ಕಾರ್ಯಕ್ರಮಗಳಿಗೆ ಅರ್ಥ ಬರಲು ಸಾಧ್ಯ ಎಂದು ತಿಳಿಸಿದರು.

ನಿವೃತ್ತ ನೌಕರ ಬೂತಹಳ್ಳಿ ಜಗದೀಶ್ ಮಾತನಾಡಿದರು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣೇಗೌಡ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎನ್‌ಬಿ ಚಂದ್ರಶೇಖರ್ ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಪ್ರಸನ್ನ ಆದಿಜಾಂಬವ ಕ್ಷಮಿಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಸಿಜೆ ರವಿ ಗೌರವಾಧ್ಯಕ್ಷ ಭೂತನಹಳ್ಳಿ ಶಿವಣ್ಣ. ಬೇಗೂರು ಮಾದೇವ್. ಆರ್ ಡಿ ಚಂದ್ರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ಸೇರಿದಂತೆ ಮತ್ತಿತರರು ಹಾಜರಿದ್ದರು.

# ಸಂವಿಧಾನದ ಮೌಲ್ಯಗಳ ಆಧಾರದ ಮೇಲೆ ರಾಜಕೀಯ ಪರ್ಯಾಯ ರೂಪಿಸುವ ಉದ್ದೇಶವಿದೆ : ಚೇತನ್ ಅಹಿಂಸಾ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಸಮಾನತೆಯ ಆಶಯಗಳನ್ನು ಸಾಕಾರಗೊಳಿಸುವ ಉದ್ದೇಶದಿಂದ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಶೋಷಿತ ಸಮುದಾಯಗಳನ್ನು ಒಗ್ಗೂಡಿಸಿ ಹೊಸ ರಾಜಕೀಯ ಪಕ್ಷವನ್ನು ಸ್ಥಾಪಿಸಲಾಗುವುದು ಎಂದು ಚಿತ್ರ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ತಿಳಿಸಿದ್ದಾರೆ.

ಭಾನುವಾರ ಲಿಂಗಸುಗೂರಿನ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿವಿಧ ಸಮಾಜಪರ ಸಂಘಟನೆಗಳು, ದಲಿತ–ಬಹುಜನ ಹೋರಾಟಗಾರರನ್ನು ಒಗ್ಗೂಡಿಸಿ ಹೊಸ ರಾಜಕೀಯ ವೇದಿಕೆ ನಿರ್ಮಿಸಲಾಗುತ್ತಿದೆ. ಪಕ್ಷದ ಹೆಸರಿನಲ್ಲಿ ಸಂವಿಧಾನದ ಆಶಯಗಳನ್ನು ಪ್ರತಿಬಿಂಬಿಸುವ ಪದಗಳು ಇರಲಿವೆ ಎಂದು ಹೇಳಿದರು.

ಪ್ರಸ್ತುತ ಪಕ್ಷದ ನೋಂದಣಿ ಪ್ರಕ್ರಿಯೆ ನಡೆಯುತ್ತಿದ್ದು ರಾಜ್ಯಾದ್ಯಂತ ಪ್ರವಾಸ ಕೈಗೊಂಡಿದ್ದೇವೆ. ಕರ್ನಾಟಕದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಸಂಘಟನೆ ಕಟ್ಟುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.

2027ರ ಜನವರಿಯಲ್ಲಿ ಹುಬ್ಬಳ್ಳಿಯಲ್ಲಿ 25 ಸಾವಿರಕ್ಕೂ ಅಧಿಕ ಜನರನ್ನು ಸೇರಿಸಿ ಬೃಹತ್ ಸಮಾವೇಶ ಆಯೋಜಿಸಲಾಗುವುದು. ಇದೇ ಸಮಾವೇಶದಲ್ಲಿ ಪಕ್ಷದ ಹೆಸರು, ಚಿಹ್ನೆ, ಧ್ವಜ, ಪ್ರಣಾಳಿಕೆ ಹಾಗೂ ರಾಜ್ಯ ಸಮಿತಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಲಾಗುವುದು ಎಂದು ಘೋಷಿಸಿದರು.

ಸಮ ಸಮಾಜ ನಿರ್ಮಾಣವೇ ಪಕ್ಷದ ಮುಖ್ಯ ಧ್ಯೆಯವಾಗಿದ್ದು, ಸಂವಿಧಾನದ ಮೌಲ್ಯಗಳ ಆಧಾರದ ಮೇಲೆ ರಾಜಕೀಯ ಪರ್ಯಾಯ ರೂಪಿಸುವ ಉದ್ದೇಶ ಹೊಂದಿದ್ದೇವೆ ಎಂದು ಚೇತನ್ ಅಹಿಂಸಾ ಹೇಳಿದರು.

ಈ ಸಂದರ್ಭದಲ್ಲಿ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷ ಅಮರೇಶ ವೆಂಕಟಾಪುರು, ದಲಿತ ಮುಖಂಡರಾದ ಲಿಂಗಪ್ಪ ಪರಂಗಿ, ಕುಪ್ಪಣ್ಣ ಕಸಬಾ, ಮೌನೇಶ ಐದನಾಳ, ಚಿದಾನಂದ ಕಸಬಾ, ಮಾದೇಶ ಸರ್ಜಾಪುರು, ಬಸವರಾಜ ಗೋಸ್ಥೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ೨ ರಂದು ಮೂಲ ದಾಖಲಾತಿ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.6.–ಕಲ್ಯಾಣಕರ್ನಾಟಕರಸ್ತೆಸಾರಿಗೆನಿಗಮದನಿರ್ವಾಹಕಉಳಿಕೆ ಮೂಲ ವೃಂದದ (RPC) ಹುದ್ದೆಗಳ ದಾಖಲಾತಿ ಪರಿಶೀಲನೆಗೆ ಕರೆಯಲಾದ ಹೆಚ್ಚುವರಿ ಅಭ್ಯರ್ಥಿಗಳ ಪಟ್ಟಿ–2ನ್ನು ನಿಗಮದ ಜಾಲತಾಣದಲ್ಲಿ ಪ್ರಕಟಿಸಲಾಗಿದ್ದು, ಸದರಿ ಅಭ್ಯರ್ಥಿಗಳು 2026ರ ಜುಲೈ 9 ರಂದು ಕಲಬುರಗಿಯ ಕಲ್ಯಾಣ ಕರ್ನಾಟಕರಸ್ತೆ ಸಾರಿಗೆನಿಗಮದಕೇಂದ್ರ ಕಚೇರಿಯಲ್ಲಿತಮ್ಮಮೂಲದಾಖಲಾತಿಪರಿಶೀಲನೆಗೆಹಾಜರಾಗಬೇಕುಮೇಲ್ಕಂಡದಿನದಂದುಗೈರು ಹಾಜರಾದಅಭ್ಯರ್ಥಿಗಳಿಗೆಮತ್ತೊಂದುಅವಕಾಶನೀಡಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ನಿಗಮದ kkrtc.kanatakagov.in ವೆಬ್‌ಸೈಟ್‌ಗೆಭೇಟಿನೀಡಬೇಕೆಂದು ಕಲ್ಯಾಣ ಕರ್ನಾಟಕರಸ್ತೆ ಸಾರಿಗೆ ನಿಗಮದ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು ತಿಳಿಸಿರುತ್ತಾರೆ.

# ಸಹಕಾರ ಸಪ್ತಾಹ: ಪಠ್ಯಪುಸ್ತಕ ವಿತರಿಸಿ ಉತ್ತೇಜಿಸಿದ ಮಾಜಿ ಸಚಿವ ವೆಂಕಟರಾವ್ ನಾಡಗೌಡ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು 06.ಸಹಕಾರದಿಂದ ಸಮೃದ್ಧಿ – ಶಿಕ್ಷಣದಿಂದ ಉಜ್ವಲ ಭವಿಷ್ಯ" ಎಂಬ ಧ್ಯೇಯದೊಂದಿಗೆ, ಕೇಂದ್ರ ಸಹಕಾರ ಸಚಿವಾಲಯದ ಐದು ವರ್ಷಗಳ ಯಶಸ್ವಿ ಪೂರೈಕೆಯ ಅಂಗವಾಗಿ ಸಿಂಧನೂರಿನ ಪಿ.ಎಂ. ಶ್ರೀ ಆದರ್ಶ ವಿದ್ಯಾಲಯದಲ್ಲಿ 'ಸಹಕಾರ ಸಪ್ತಾಹ' ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣವಾಗಿ ಆಯೋಜಿಸಲಾಯಿತು.


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ (ಬೆಂಗಳೂರು), ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ಸಹಕಾರ ಇಲಾಖೆ, ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ (KOF) ಮತ್ತು ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ, ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳು ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಕೆ ಓ ಎಫ್ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ ಅವರು ಮಾತನಾಡಿ,ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಮತ್ತು ಶೈಕ್ಷಣಿಕ ಪರಿಕರಗಳನ್ನು ವಿತರಿಸಿ ಶುಭ ಹಾರೈಸಿದರು. ಶಿಕ್ಷಣವು ವ್ಯಕ್ತಿಯ ಬದುಕನ್ನು ರೂಪಿಸುವ ಅತಿದೊಡ್ಡ ಶಕ್ತಿಯಾಗಿದೆ. ವಿದ್ಯಾರ್ಥಿಗಳು ಶಿಸ್ತು, ಪರಿಶ್ರಮ ಮತ್ತು ಸ್ಪಷ್ಟ ಗುರಿಯೊಂದಿಗೆ ವಿದ್ಯಾಭ್ಯಾಸ ಮಾಡಬೇಕು. ಉತ್ತಮ ಶಿಕ್ಷಣದ ಮೂಲಕ ಮಾತ್ರ ಸಮಾಜಕ್ಕೆ ಮಾದರಿ ಪ್ರಜೆಗಳಾಗಲು ಸಾಧ್ಯ ಎಂದು ಕರೆ ನೀಡಿದರು.ಈ ಕಾರ್ಯಕ್ರಮದಲ್ಲಿ ಕೆ ಓ ಎಫ್ ರಾಯಚೂರು ಅಧ್ಯಕ್ಷರಾದ ಸುರೇಶ್ ರೆಡ್ಡಿ, ಸಹಕಾರ ಇಲಾಖೆಯ ಅಧಿಕಾರಿಗಳು, ವಿವಿಧ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು, ಸಿಬ್ಬಂದಿಗಳು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ಪೋಷಕರು ಮತ್ತು ಸ್ಥಳೀಯ ಸಾರ್ವಜನಿಕರು ಉಪಸ್ಥಿತರಿದ್ದರು.

# ಹಂಪಿಯಲ್ಲಿ ಜು.07 ರಂದು ರಾಜ್ಯ ಮಟ್ಟದ ಸಮಾಲೋಚನಾ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕವನ್ನು ಜಾಗತಿಕ ಮಟ್ಟದ ಪ್ರವಾಸೋದ್ಯಮ ತಾಣವಾಗಿ ರೂಪಿಸುವ ಮಹತ್ವಾಕಾಂಕ್ಷೆಯ ಯೋಜನೆಯ ಭಾಗವಾಗಿ, 'ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳ ಅಭಿವೃದ್ಧಿ' ಕುರಿತ ರಾಜ್ಯಮಟ್ಟದ ಸಮಾಲೋಚನಾ ಕಾರ್ಯಾಗಾರವನ್ನು ಜುಲೈ 07 ರಂದು ಹಂಪಿಯಲ್ಲಿ ಆಯೋಜಿಸಲಾಗಿದೆ.ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಮಹತ್ವದ ಸಭೆಯಲ್ಲಿ, ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಜಂಟಿ ಕಾರ್ಯದರ್ಶಿಗಳಾದ ಸುವಾಶಿಷ್ ದಾಸ್, ಕರ್ನಾಟಕ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ.ಕೆ.ವಿ ತ್ರಿಲೋಕ್ ಚಂದ್ರ, ಆಯುಕ್ತರಾದ ಡಾ.ರಾಮ್ ಪ್ರಸಾತ್ ಮನೋಹರ್ ಸೇರಿದಂತೆ ಹಿರಿಯ ಅಧಿಕಾರಿಗಳು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಜಂಗಲ್ ಲಾಡ್ಜ್ ಅಂಡ್ ರೆಸಾರ್ಟ್ಸ್, ಪ್ರವಾಸೋದ್ಯಮ ಕ್ಷೇತ್ರದ ಹೂಡಿಕೆದಾರರು, ಆತಿಥ್ಯ ಉದ್ಯಮದ ಪ್ರತಿನಿಧಿಗಳು, ಪ್ರವಾಸೋದ್ಯಮ ತಜ್ಞರು ಹಾಗೂ ವಿವಿಧ ವಲಯಗಳ ಪ್ರಮುಖ ಹಿತಾಸಕ್ತಿದಾರರು ಭಾಗವಹಿಸಲಿದ್ದಾರೆ.ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದ ಭವಿಷ್ಯದ ಬೆಳವಣಿಗೆಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ ಆಯೋಜಿಸಲಾಗಿರುವ ಈ ಕಾರ್ಯಾಗಾರದಲ್ಲಿ, ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಆಯ್ಕೆ ಮಾಡಬೇಕಾದ ಪ್ರಮುಖ ತಾಣಗಳ ಕುರಿತು 360 ಡಿಗ್ರಿ ಸಮಗ್ರ ಚರ್ಚೆ ನಡೆಯಲಿದೆ.ಪ್ರವಾಸಿ ತಾಣಗಳ ಆಯ್ಕೆಗೆ ಅಗತ್ಯ ಮಾನದಂಡಗಳು, ಮೂಲಸೌಕರ್ಯ ಅಭಿವೃದ್ಧಿ, ಪ್ರವಾಸಿಗರ ಅನುಭವ ಸುಧಾರಣೆ, ಖಾಸಗಿ ಹೂಡಿಕೆ ಅವಕಾಶಗಳು, ಪರಿಸರ ಸಂರಕ್ಷಣೆ, ಸ್ಥಳೀಯ ಸಮುದಾಯದ ಭಾಗವಹಿಸುವಿಕೆ, ಸಂಪರ್ಕ ವ್ಯವಸ್ಥೆ, ಬ್ರ್ಯಾಂಡಿಂಗ್, ಅಂತರರಾಷ್ಟ್ರೀಯ ಮಾರುಕಟ್ಟೆ ಹಾಗೂ ಸುಸ್ಥಿರ ಪ್ರವಾಸೋದ್ಯಮ ಮಾದರಿಗಳ ಕುರಿತು ವಿವಿಧ ತಜ್ಞರು ತಮ್ಮ ಅಭಿಪ್ರಾಯಗಳನ್ನು ಮಂಡಿಸಲಿದ್ದಾರೆ.



"ಕರ್ನಾಟಕದಲ್ಲಿ ವಿಶ್ವದರ್ಜೆಯ ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ನಿಟ್ಟಿನಲ್ಲಿ ಇದು ಅತ್ಯಂತ ಮಹತ್ವದ ಸಮಾಲೋಚನಾ ಸಭೆಯಾಗಿದೆ. ಸರ್ಕಾರ, ಉದ್ಯಮ, ಹೂಡಿಕೆದಾರರು ಹಾಗೂ ಪ್ರವಾಸೋದ್ಯಮ ತಜ್ಞರನ್ನು ಒಂದೇ ವೇದಿಕೆಗೆ ತಂದು, ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸ್ಪಷ್ಟ ಕಾರ್ಯತಂತ್ರ ರೂಪಿಸಲಾಗುತ್ತದೆ. ಈ ಸಭೆಯಲ್ಲಿ ಕೈಗೊಳ್ಳುವ ನಿರ್ಧಾರಗಳು ಕರ್ನಾಟಕದ ಪ್ರವಾಸೋದ್ಯಮ ಕ್ಷೇತ್ರದ ಮುಂದಿನ ದಶಕದ ಬೆಳವಣಿಗೆಗೆ ಮಾರ್ಗದರ್ಶಿಯಾಗಲಿವೆ."

**– ಕೆ.ಜೆ. ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವರು, ಕರ್ನಾಟಕ ಸರ್ಕಾರ.**

ಈ ಸಮಾಲೋಚನಾ ಸಭೆಯಲ್ಲಿ ವ್ಯಕ್ತವಾಗುವ ಅಭಿಪ್ರಾಯಗಳು ಹಾಗೂ ಶಿಫಾರಸುಗಳ ಆಧಾರದ ಮೇಲೆ, ರಾಜ್ಯದ ಮೊದಲ ಹಂತದಲ್ಲಿ ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲಾಗುವ ಆದ್ಯತೆಯ ಪ್ರವಾಸಿ ತಾಣಗಳನ್ನು ಅಂತಿಮಗೊಳಿಸುವ ನಿರ್ಧಾರ ಕೈಗೊಳ್ಳಲಾಗುವ ಸಾಧ್ಯತೆ ಇದೆ.

ಈ ಯೋಜನೆಯ ಮೂಲಕ ಆಯ್ಕೆಯಾಗುವ ಪ್ರವಾಸಿ ತಾಣಗಳನ್ನು ವಿಶ್ವದರ್ಜೆಯ ಮೂಲಸೌಕರ್ಯ, ಪ್ರವಾಸಿಗರಿಗೆ ಉತ್ತಮ ಅನುಭವ, ಖಾಸಗಿ ಹೂಡಿಕೆ, ಸುಸ್ಥಿರ ಅಭಿವೃದ್ಧಿ ಹಾಗೂ ಅಂತರರಾಷ್ಟ್ರೀಯ ಮಟ್ಟದ ಬ್ರಾಂಡಿಂಗ್ ಮೂಲಕ ಅಭಿವೃದ್ಧಿಪಡಿಸಿ, ಕರ್ನಾಟಕವನ್ನು ಭಾರತದ ಪ್ರಮುಖ ಜಾಗತಿಕ ಪ್ರವಾಸೋದ್ಯಮ ತಾಣವಾಗಿ ರೂಪಿಸುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ.

## ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ತ್ರಿಲೋಕಚಂದ್ರ ನಿರ್ದೇಶನ

# ಕುಡಿಯುವ ನೀರು, ಮಳೆ ಕೊರತೆ ಎದುರಿಸಲು ಸೂಕ್ತ ಕಾರ್ಯಯೋಜನೆ ರೂಪಿಸಲು ಅಧಿಕಾರಿಗಳೊಂದಿಗೆ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಕುಡಿಯುವ ನೀರು ಮತ್ತು ಮಳೆ ಕೊರತೆಯಿರುವ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಸೂಕ್ತ ಕಾರ್ಯ ಯೋಜನೆ ರೂಪಿಸಬೇಕು ಎಂದು ಪ್ರವಾಸೋದ್ಯಮ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಪಂ ಆಡಳಿತಾಧಿಕಾರಿಯೂ ಆದ ಡಾ.ಕೆ.ವಿ. ತ್ರಿಲೋಕಚಂದ್ರ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಸಾಮಾನ್ಯ ಸಭೆ ಹಾಗೂ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶಗಳು ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕುಗಳಲ್ಲಿ ಕೃಷಿ ನೀರಾವರಿ ಮತ್ತು ಕುಡಿಯುವ ನೀರಿನ ಬೋರ್‌ವೆಲ್‌ಗಳ ಸ್ಥಿತಿಗತಿಯನ್ನು ತಕ್ಷಣವೇ ಪರಿಶೀಲಿಸಬೇಕು. ಕೆಟ್ಟುಹೋಗಿರುವ ಪಂಪ್‌ಗಳನ್ನು ಹಾಗೂ ವಿದ್ಯುತ್ ಸಂಪರ್ಕದ ಸಮಸ್ಯೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ಬೋರ್‌ವೆಲ್‌ಗಳ ದುರಸ್ತಿ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ತಕ್ಷಣವೇ ಸೂಕ್ತ ವರದಿ ನೀಡಿ, ಕೆಲಸ ಆರಂಭಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲೂಕು ಮಟ್ಟದಲ್ಲಿ ತಹಶೀಲ್ದಾರ್, ಇಓ ಮತ್ತು ಕೃಷಿ, ತೋಟಗಾರಿಕೆ ಹಾಗೂ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳು ಒಟ್ಟಿಗೆ ಕುಳಿತು ಆಯಾ ತಾಲೂಕುಗಳಲ್ಲಿ ಎಷ್ಟು ಕೊಳವೆಬಾವಿಗಳಿವೆ? ಅವುಗಳಲ್ಲಿ ಕುಡಿಯುವ ನೀರಿಗೆ ಎಷ್ಟು, ಕೃಷಿ ನೀರಾವರಿಗೆ ಎಷ್ಟು ಮತ್ತು ಎರಡಕ್ಕೂ ಬಳಕೆಯಾಗುತ್ತಿರುವ ಕೊಳವೆಬಾವಿಗಳು ಎಷ್ಟು ಎಂಬ ಸಂಪೂರ್ಣ ಮಾಹಿತಿ ಸಿದ್ಧಪಡಿಸಬೇಕು. ಮುಂಬರುವ ದಿನಗಳಲ್ಲಿ ಮಳೆಯ ಕೊರತೆಯಿಂದಾಗಿ ಇನ್ನು ಎಷ್ಟು ಕೊಳವೆಬಾವಿಗಳು ಬತ್ತಿ ಹೋಗಬಹುದು ಎಂಬುದನ್ನು ಮುಂಚಿತವಾಗಿಯೇ ಊಹಿಸಿ, ಅದಕ್ಕೆ ತಕ್ಕಂತೆ ಸೂಕ್ತ ಯೋಜನೆಗಳನ್ನು ರೂಪಿಸಬೇಕು ಎಂದರು.ಜಿಲ್ಲೆಯ ನೀರಾವರಿ ವ್ಯವಸ್ಥೆಯ ಒಟ್ಟು ವಿಸ್ತೀರ್ಣದಲ್ಲಿ 10,000 ಹೆಕ್ಟೇರ್ ಪ್ರದೇಶವು ಕೊಳವೆಬಾವಿ ನೀರಾವರಿ ಆಧಾರಿತವಾಗಿದೆ. ಉಳಿದ 41,141 ಹೆಕ್ಟೇರ್ ಪ್ರದೇಶವು ಸಂಪೂರ್ಣವಾಗಿ ಕಾಲುವೆ ನೀರಾವರಿ ವ್ಯವಸ್ಥೆಯ ಮೇಲೆ ಅವಲಂಬಿತವಾಗಿದೆ ಎಂದು ನೀರಾವರಿ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಮಾತನಾಡಿ, ಕೆಲವು ಕೊಳವೆಬಾವಿಗಳು ಕೇವಲ ನೀರಿನ ಕೊರತೆಯಿಂದಷ್ಟೇ ಅಲ್ಲದೆ, ವಿದ್ಯುತ್ ಸಂಪರ್ಕದ ದೋಷ ಅಥವಾ ಪಂಪ್ ಸೆಟ್ ಕೆಟ್ಟುಹೋಗಿರುವುದರಿಂದ ಕೆಲಸ ಮಾಡುತ್ತಿರುವುದಿಲ್ಲ. ಇಂತಹ ಸಮಸ್ಯೆಗಳನ್ನು ಟಾಸ್ಕ್ ಫೋರ್ಸ್ ಮೂಲಕ ತಕ್ಷಣವೇ ಬಗೆಹರಿಸಬೇಕು. ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯು ಇದರ ಉಸ್ತುವಾರಿ ನೋಡಿಕೊಳ್ಳುತ್ತಿದ್ದು, ಇಓಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಹಾಗೂ ಅಗತ್ಯವಿದ್ದಲ್ಲಿ ಬದಲಾವಣೆಗಳನ್ನು ಮಾಡಲು ಮುಕ್ತ ಅವಕಾಶವಿದೆ ಎಂದು ತಿಳಿಸಿದರು.

ಮಳೆ ನೀರನ್ನು ಸಮರ್ಥವಾಗಿ ಬಳಸಿಕೊಳ್ಳಲು ಮತ್ತು ಅಂತರ್ಜಲ ವೃದ್ಧಿಸಲು ಇಂಗು ಗುಂಡಿಗಳನ್ನು ನಿರ್ಮಿಸಬೇಕು. ಈ ಕುರಿತು ಕೃಷಿ ವಿಸ್ತರಣಾಧಿಕಾರಿಗಳು ಸ್ಥಳೀಯ ರೈತ ಮುಖಂಡರು ಮತ್ತು ಸಾರ್ವಜನಿಕರೊಂದಿಗೆ ಸಭೆ ನಡೆಸಿ, ಜಾಗೃತಿ ಮೂಡಿಸಬೇಕು. ಅತಿ ಹೆಚ್ಚು ನೀರು ಬೇಡುವ ಬೆಳೆಗಳ ಬಳಕೆಯನ್ನು ಕಡಿಮೆ ಮಾಡಲು ಮತ್ತು ಲಭ್ಯವಿರುವ ನೀರನ್ನು ಮಿತವಾಗಿ ಬಳಸಲು ರೈತರಿಗೆ ಮಾರ್ಗದರ್ಶನ ನೀಡಬೇಕು. ಈ ಎಲ್ಲಾ ಪ್ರಕ್ರಿಯೆಗಳನ್ನು ಕೇವಲ ಕಾಗದದ ಮೇಲಷ್ಟೇ ಮಾಡದೇ, ವಾಸ್ತವಿಕ ಪರಿಸ್ಥಿತಿಗೆ ಅನುಗುಣವಾಗಿ ವರದಿಯನ್ನು ಸಿದ್ಧಪಡಿಸಿ ಸಲ್ಲಿಸಬೇಕು ಕಟ್ಟುನಿಟ್ಟಿನ ಸೂಚನೆ ನೀಡಿದರು.



ಜಿಲ್ಲೆಯಲ್ಲಿ ಒಟ್ಟು 1.5 ಲಕ್ಷ ಜಾನುವಾರುಗಳಿದ್ದು, ಸುಮಾರು 71 ಸಾವಿರ ರೈತರು ಹೈನುಗಾರಿಕೆಯನ್ನೇ ನಂಬಿಕೊಂಡಿದ್ದಾರೆ. ಜಿಲ್ಲೆಯಲ್ಲಿ ಸದ್ಯಕ್ಕೆ ಮುಂದಿನ 34 ವಾರಗಳಿಗೆ ಆಗುವಷ್ಟು ಮೇವಿನ ದಾಸ್ತಾನು ಲಭ್ಯವಿದ್ದು, ಮುಂಬರುವ ದಿನಗಳಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಇಲಾಖೆಯು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲೆಯಲ್ಲಿ ರೈತರಿಂದ ಒಟ್ಟು 9,000 ಮೇವಿನ ಮಿನಿಕಿಟ್‌ಗಳಿಗೆ ಬೇಡಿಕೆ ಬಂದಿದ್ದು, ತ್ವರಿತವಾಗಿ ರೈತರಿಗೆ ಮಿನಿಕಿಟ್‌ಗಳನ್ನು ಪೂರೈಸಲಾಗುವುದು ಎಂದು ಪಶು ಸಂಗೋಪನೆ ಇಲಾಖಾಧಿಕಾರಿಗಳು ತಿಳಿಸಿದರು.ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ನವಜಾತ ಶಿಶುಗಳ ತೀವ್ರ ನಿಗಾ ಘಟಕದಲ್ಲಿ ದಾಖಲಾಗುವ ಮಕ್ಕಳಿಗೆ ವೆಂಟಿಲೇಟರ್ ಸರ್ಕ್ಯೂಟ್ ಹಾಗೂ ಇತರೆ ಸೌಲಭ್ಯಗಳನ್ನು ಸಮರ್ಪಕವಾಗಿ ಇಟ್ಟುಕೊಂಡು ಸೂಕ್ಷ ?? ಪರಿಸ್ಥಿತಿಯಲ್ಲಿ ನಿರ್ವಹಣೆ ಮಾಡಬೇಕು. ಈ ಕುರಿತು ಆಸ್ಪತ್ರೆಗಳು ಮತ್ತು ಆರೋಗ್ಯ ಇಲಾಖೆ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರು, ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಶಾಲೆಗಳಲ್ಲಿ ವಿದ್ಯಾರ್ಥಿಗಳ ಕಲಿಕಾ ಪ್ರಗತಿ ಉತ್ತಮಗೊಳಿಸಲು ಪ್ರತಿ ಪಾಠದ ನಂತರ ವಿದ್ಯಾರ್ಥಿಗಳ ಮೌಲ್ಯಮಾಪನ ನಡೆಸಿ, ಆ ದತ್ತಾಂಶವನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಬೇಕು. ಈ ದತ್ತಾಂಶದ ಸತ್ಯಾಸತ್ಯತೆಯನ್ನು ಖಚಿತಪಡಿಸಲು ಅಧಿಕಾರಿಗಳು ನೂತನವಾದ ತಂತ್ರಾಂಶಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಸ್ವತಃ ಶಾಲೆಗಳಿಗೆ ಭೇಟಿ ನೀಡಿ, ಮಕ್ಕಳೊಂದಿಗೆ ಸಂವಾದ ನಡೆಸಿ ಮಕ್ಕಳ ಕುಂದು–ಕೊರತೆಗಳನ್ನು ಪರಿಶೀಲಿಸಬೇಕು. ದತ್ತಾಂಶದ ವಿಶ್ವಾಸಾರ್ಹತೆಯನ್ನು ತಳಮಟ್ಟದಲ್ಲಿ ಪರೀಕ್ಷಿಸಲು ಬಿಆರ್‌ಪಿ, ಸಿಆರ್‌ಪಿ ಮತ್ತು ವಿಷಯ ಪರಿವೀಕ್ಷಕರನ್ನು ಒಳಗೊಂಡ ವಿಶೇಷ ತಂಡಗಳನ್ನು ರಚಿಸುವಂತೆ ತಿಳಿಸಿದರು.

*ರಕ್ತಹೀನತೆ (ಅನಿಮಿಯಾ) ಮುಕ್ತ ತಾಲೂಕುಗಳಿಗೆ ಆದ್ಯತೆ:*ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಅಂಗನವಾಡಿ ಮತ್ತು ಶಾಲಾ ಮಕ್ಕಳಲ್ಲಿ ಕಂಡುಬರುತ್ತಿರುವ ರಕ್ತಹೀನತೆಯ ಪ್ರಮಾಣವನ್ನು ಆತಂಕ ವ್ಯಕ್ತಪಡಿಸಿದ ಉಸ್ತುವಾರಿ ಕಾರ್ಯದರ್ಶಿಯವರು, ಪ್ರಸ್ತುತ ಶೇ.30 ರಿಂದ 40 ಕ್ಕಿಂತ ಹೆಚ್ಚು ಮಕ್ಕಳಲ್ಲಿ ರಕ್ತಹೀನತೆ ಇರುವುದನ್ನು ಆರೋಗ್ಯ ಇಲಾಖೆಯ ವರದಿಯಲ್ಲಿ ಕಂಡುಬಂದಿರುತ್ತದೆ. ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಮಕ್ಕಳ ಆರೋಗ್ಯ ಸುಧಾರಣೆಯೂ ಅಷ್ಟೇ ಮುಖ್ಯವಾಗಿದ್ದು, ಇದರಲ್ಲಿ ಯಾವುದೇ ರೀತಿಯ ನಿರ್ಲಕ್ಷ ?? ಮಾಡಬಾರದು ಎಂದು ಅಧಿಕಾರಿಗಳಿಗೆ ಮುನ್ನೆಚ್ಚರಿಕೆ ನೀಡಿದರು.

ಶಾಲಾ/ಪದವಿ ಶಿಕ್ಷಣ ಇಲಾಖಾ ವತಿಯಿಂದ ತಿಂಗಳಿಗೆ ಲಕ್ಷಾಂತರ ರೂ. ವರೆಗೆ ಬಾಡಿಗೆ ಪಾವತಿಸುತ್ತಿರುವ ಶಾಲಾ/ಪದವಿ ವಸತಿ ನಿಲಯಗಳನ್ನು ತಕ್ಷಣವೇ ಸ್ವಂತ ಅಥವಾ ಪರ್ಯಾಯ ಕಟ್ಟಡಗಳಿಗೆ ಸ್ಥಳಾಂತರಿಸಗೊಳಿಸಬೇಕು. ಹೊಸ ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿದ್ದರೂ ಸ್ಥಳಾಂತರಗೊಳ್ಳದೆ ವಿಳಂಬ ಮಾಡಬಾರದು ಎಂದು ಸೂಚಿಸಿದರು.ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ಶಾಲಾ/ಪದವಿ ವಸತಿ ನಿಲಯಗಳ ಮೇಲ್ದರ್ಜೀಕರಣಕ್ಕೆ ಸಂಬಂಧಿಸಿದಂತೆ ಯೋಜನಾ ವರದಿಗಳನ್ನು ಶೀಘ್ರವಾಗಿ ಸಲ್ಲಿಸಬೇಕು. ಡಿ.ಪಿ.ಆರ್ ತಯಾರಿಸುವಾಗ ಕೇವಲ ಕನ್ಸಲ್ಟೆಂಟ್‌ಗಳ ಮೇಲೆ ಅವಲಂಬಿತರಾಗದೆ, ಎಂಜಿನಿಯರ್‌ಗಳು ಸ್ಥಳ ಪರಿಶೀಲನೆ ನಡೆಸಿ ನೈಜ ಅಗತ್ಯತೆಗಳಿಗೆ ತಕ್ಕಂತೆ ವರದಿ ಸಿದ್ಧಪಡಿಸಬೇಕು. ಈ ಪ್ರಕ್ರಿಯೆಯಲ್ಲಿ ವಸತಿ ನಿಲಯದ ವಾರ್ಡನ್‌ಗಳು ಮತ್ತು ವಿದ್ಯಾರ್ಥಿಗಳ ಸಲಹೆಗಳನ್ನು ಪರಿಗಣಿಸುವುದು ಕಡ್ಡಾಯವಾಗಿದೆ. ಸ್ಮಾರ್ಟ್ ಕಿಚನ್ ಅಥವಾ ಇತರ ಸೌಲಭ್ಯಗಳ ಜೊತೆಗೆ ವಿದ್ಯಾರ್ಥಿಗಳಿಗೆ ಉಳಿದುಕೊಳ್ಳಲು ಅಗತ್ಯವಿರುವ ಕೊಠಡಿಗಳು ಮತ್ತು ಶೌಚಾಲಯಗಳ ನಿರ್ಮಾಣಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಶಾಲಾ/ಪದವಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದ್ದು, ಸಾಮರ್ಥ್ಯಕ್ಕಿಂತ ಹೆಚ್ಚಿನ ದಾಖಲಾತಿ ಕಂಡುಬಂದಿದೆ. ಇದನ್ನು ಸರಿದೂಗಿಸಲು 'ಡಯಟ್' ಕಾಲೇಜುಗಳಲ್ಲಿ ಖಾಲಿ ಇರುವ ಕೊಠಡಿಗಳನ್ನು ಕನಿಷ್ಠ ವೆಚ್ಚದಲ್ಲಿ ದುರಸ್ತಿಗೊಳಿಸಿ, ಹೆಚ್ಚುವರಿ ವಸತಿ ವ್ಯವಸ್ಥೆಗೆ ಬಳಸಿಕೊಳ್ಳುವ ಸಾಧ್ಯತೆಗಳನ್ನು ಪರಿಶೀಲಿಸಬೇಕು. ವಸತಿ ನಿಲಯಗಳ ಅಭಿವೃದ್ಧಿ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳ ಮೂಲಭೂತ ಸೌಕರ್ಯಗಳಿಗೆ ಮೊದಲ ಆದ್ಯತೆ ಇರಬೇಕು. ಸಾರ್ವಜನಿಕ ಹಣ ದುರ್ಬಳಕೆಯಾಗದಂತೆ ಮತ್ತು ಬಾಡಿಗೆ ಕಟ್ಟಡಗಳ ಮೇಲಿನ ಅನಗತ್ಯ ವೆಚ್ಚವನ್ನು ತಕ್ಷಣವೇ ತಡೆಗಟ್ಟಬೇಕು ಎಂಬುದು ಅವರ ಮನದಾಳದ ಇಚ್ಛೆಯಾಗಿರುತ್ತದೆ.ಸಭೆಯಲ್ಲಿ ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈತರ ಸುಭಿಕ್ಷಕ್ಕಾಗಿ ವಿಶೇಷ ಪೂಜೆ, ವರುಣ ಯಾಗ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಿಂದ ರೈತ ಸಮುದಾಯ ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಮಾಜಿ ಸಚಿವರು ಹಾಗೂ ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಿ. ನಾಗೇಂದ್ರ ಅವರ ನೇತೃತ್ವದಲ್ಲಿ ಬಳ್ಳಾರಿ ನಗರದ ಅಧಿದೇವತೆ ಶ್ರೀ ದುರ್ಗಮ್ಮ ದೇವಸ್ಥಾನದಲ್ಲಿ ಭಾನುವಾರ ವಿಶೇಷ ಪೂಜೆ ಹಾಗೂ ವರುಣ ಯಾಗವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು. ರಾಜ್ಯದಾದ್ಯಂತ, ವಿಶೇಷವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಲಿ, ರೈತರಿಗೆ ಸಮೃದ್ಧ ಬೆಳೆ ದೊ–ರೆಯಲಿ ಹಾಗೂ ಅವರ ಜೀವನ ಸುಭಿಕ್ಷವಾಗಲಿ ಎಂಬ ಮಹತ್ವದ ಸಂಕಲ್ಪದೊಂದಿಗೆ ಈ ಧಾರ್ಮಿಕ ಕಾರ್ಯಕ್ರಮ ಆಯೋಜಿಸಲಾಯಿತು. ವರುಣ ದೇವರ ಕೃಪೆಯಿಂದ ರಾಜ್ಯದ ಎಲ್ಲ ಜಲಾಶಯಗಳು ತುಂಬಿ, ಕೃಷಿಗೆ ಅಗತ್ಯವಾದ ನೀರಿನ ಲಭ್ಯತೆ ಹೆಚ್ಚಾಗಿ ರೈತರ ಬದುಕಿನಲ್ಲಿ ಹೊಸ ಭರವಸೆ ಮೂಡಲಿ ಎಂದು ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಇದೇ ಸಂದರ್ಭದಲ್ಲಿ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರ ಯಾವುದೇ ಅಡ್ಡಿ–ಆತಂಕಗಳಿಲ್ಲದೆ ಜನಪರ ಆಡಳಿತವನ್ನು ಯಶಸ್ವಿಯಾಗಿ ಮುಂದುವರಿಸಿ, ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕಾರಣವಾಗಲಿ ಎಂಬ ಉದ್ದೇಶದಿಂದ ವಿಶೇಷ ಪೂಜೆ ಹಾಗೂ ಸಂಕಲ್ಪ ಸೇವೆ ನಡೆಸಲಾಯಿತು. ರಾಜ್ಯದಲ್ಲಿ ಶಾಂತಿ, ಸೌಹಾರ್ದತೆ, ಅಭಿವೃದ್ಧಿ ಹಾಗೂ ಜನಕಲ್ಯಾಣದ ಕಾರ್ಯಗಳು ಮತ್ತಷ್ಟು ವಿಸ್ತಾರವಾಗಲಿ ಎಂದು ದೇವಿಯಲ್ಲಿ ಪ್ರಾರ್ಥಿಸಲಾಯಿತು.ಈ ಸಂದರ್ಭದಲ್ಲಿ ಡಾ. ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ದೇವಿಯ ದರ್ಶನ ಪಡೆದು ರಾಜ್ಯದ ರೈತರ ಒಳಿತಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮುಂಡರಗಿ ನಾಗರಾಜು ಅವರು, ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮುಂಗಾರು ಮಳೆಯಾಗದಿರುವುದು ರೈತರಲ್ಲಿ ತೀವ್ರ ಆತಂಕಕ್ಕೆ ಕಾರಣವಾಗಿದೆ ಎಂದು ಹೇಳಿದರು."ಕೃಷಿಯೇ ರಾಜ್ಯದ ಆರ್ಥಿಕತೆಯ ಜೀವನಾಡಿ. ರೈತರು ದೇಶದ ಬೆನ್ನೆಲುಬು. ರೈತರ ಬದುಕು ಸುಭಿಕ್ಷವಾಗಿದ್ದರೆ ಮಾತ್ರ ಗ್ರಾಮೀಣ ಆರ್ಥಿಕತೆ ಸದೃಢವಾಗುತ್ತದೆ. ಉತ್ತಮ ಮಳೆಯಾದರೆ ಮಾತ್ರ ಬಿತ್ತನೆ ಕಾರ್ಯಗಳು ವೇಗ ಪಡೆದು ಕೃಷಿ ಉತ್ಪಾದನೆ ಹೆಚ್ಚಾಗುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಸಮೃದ್ಧ ಮಳೆಯಾಗಲಿ, ರೈತರ ಎಲ್ಲಾ ಸಂಕಷ್ಟಗಳು ದೂರವಾಗಲಿ ಹಾಗೂ ಅವರ ಜೀವನದಲ್ಲಿ ನೆಮ್ಮದಿ ನೆಲೆಸಲಿ ಎಂಬ ಸಂಕಲ್ಪದೊಂದಿಗೆ ವರುಣ ಯಾಗ ಹಾಗೂ ವಿಶೇಷ ಪೂಜೆಯನ್ನು ಆಯೋಜಿಸಲಾಗಿದೆ," ಎಂದು ಹೇಳಿದರು.ಅವರು ಮುಂದುವರಿದು, "ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರ ಜನಪರ ಯೋಜನೆಗಳ ಮೂಲಕ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಅವರ ಆಡಳಿತ ಯಾವುದೇ ಅಡೆತಡೆಗಳಿಲ್ಲದೆ ಯಶಸ್ವಿಯಾಗಿ ಮುಂದುವರಿಯಲಿ. ರಾಜ್ಯದಲ್ಲಿ ಶಾಂತಿ, ಸಮೃದ್ಧಿ, ಸಾಮಾಜಿಕ ಸೌಹಾರ್ದತೆ ಹಾಗೂ ಅಭಿವೃದ್ಧಿಯ ವಾತಾವರಣ ನಿರ್ಮಾಣವಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇವೆ. ಜನರ ಕಲ್ಯಾಣವೇ ನಮ್ಮೆಲ್ಲರ ಪ್ರಮುಖ ಆಶಯವಾಗಿದೆ," ಎಂದು ತಿಳಿಸಿದರು.ಪೂಜಾ ವಿಧಿವಿಧಾನಗಳನ್ನು ದೇವಸ್ಥಾನದ ಅರ್ಚಕರು ವೇದಮಂತ್ರಗಳ ಘೋಷದೊಂದಿಗೆ ನೆರವೇರಿಸಿದರು. ವರುಣ ದೇವರನ್ನು ಪ್ರಸನ್ನಗೊಳಿಸುವ ಉದ್ದೇಶದಿಂದ ವಿಶೇಷ ಹೋಮ–ಹವನಗಳು ನಡೆದವು. ಪೂಜೆಯ ಬಳಿಕ ರಾಜ್ಯದಲ್ಲಿ ಉತ್ತಮ ಮಳೆಯಾಗಿ ರೈತರ ಬದುಕು ಸಮೃದ್ಧಿಯಾಗಲಿ ಎಂದು ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಶಾಸಕ ಬಿ ನಾಗೇಂದ್ರ ರವರ ಸಹೋದರ ಬಿ ವೆಂಕಟೇಶ್ ಪ್ರಸಾದ್, ಡಿಸಿಸಿ ಅಧ್ಯಕ್ಷ ಅಲ್ಲಂಪ್ರಸಾದ್, ಮಹಾಪೌರರಾದ ಪಿ. ಗಾದೆಪ್ಪ ,ಜನಪ್ರತಿನಿಧಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು, ವಿವಿಧ ಸ್ಥಳೀಯ ಸಂಸ್ಥೆಗಳ ಸದಸ್ಯರು, ಕಾರ್ಯಕರ್ತರು, ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪೂಜೆಯಲ್ಲಿ ಪಾಲ್ಗೊಂಡರು. ರಾಜ್ಯದಲ್ಲಿ ಉತ್ತಮ ಮಳೆಯಾಗಿ ರೈತರ ಜೀವನದಲ್ಲಿ ಹೊಸ ಆಶಾಕಿರಣ ಮೂಡಲಿ ಹಾಗೂ ಸಮೃದ್ಧ ಕರ್ನಾಟಕ ನಿರ್ಮಾಣವಾಗಲಿ ಎಂದು ಎಲ್ಲರೂ ದೇವರಲ್ಲಿ ಪ್ರಾರ್ಥಿಸಿದರು.



" ರಾಜ್ಯಕ್ಕೆ ಉತ್ತಮ ಮಳೆ, ರೈತರಿಗೆ ಸಮೃದ್ಧ ಬೆಳೆಗಾಗಿ ಪ್ರಾರ್ಥನೆ – ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಡಳಿತ ಯಶಸ್ಸಿಗೂ ವಿಶೇಷ ಸಂಕಲ್ಪ...

**ಮುಂಡರಗಿ ನಾಗರಾಜು**

**ಅಧ್ಯಕ್ಷರು, ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಮಂಡಳಿ, ಕರ್ನಾಟಕ ಸರ್ಕಾರ**

# ಮಹಾ ವರುಣ ಯಾಗ ಯಶಸ್ವಿ; ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂದು ವಿಶೇಷ ಪ್ರಾರ್ಥನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯದಲ್ಲಿ ಹಾಗೂ ವಿಶೇಷವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಮಳೆಯ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಲಿ ಹಾಗೂ ರೈತರ ಬದುಕು ಸುಭಿಕ್ಷವಾಗಲಿ ಎಂಬ ಆಶಯದಿಂದ ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ. ನಾಗೇಂದ್ರ ಅವರ ನೇತೃತ್ವದಲ್ಲಿ ಸೋಮವಾರ ನಗರದ ಗ್ರಾಮದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಮಹಾ ವರುಣ ಯಾಗ, ಹೋಮ–ಹವನ ಹಾಗೂ ವಿಶೇಷ ಪೂಜಾ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.ಬೆಳಿಗ್ಗೆ ಶುಭ ಮುಹೂರ್ತದಲ್ಲಿ ವೇದಪಂಡಿತರ ಸಾನ್ನಿಧ್ಯದಲ್ಲಿ ಆರಂಭವಾದ ಪೂಜಾ ಕಾರ್ಯಕ್ರಮದಲ್ಲಿ ವೇದಘೋಷ, ಮಂತ್ರೋಚ್ಚಾರಣೆ ಹಾಗೂ ಧಾರ್ಮಿಕ ವಿಧಿವಿಧಾನಗಳ ನಡುವೆ ಮಹಾ ವರುಣ ಯಾಗ ನಡೆಯಿತು. ಮಳೆ ದೇವರಾದ ವರುಣನಿಗೆ ವಿಶೇಷ ಪೂಜೆ ಸಲ್ಲಿಸಿ, ರಾಜ್ಯಾದ್ಯಂತ ಸಮರ್ಪಕ ಮಳೆಯಾಗಿ ಜಲಾಶಯಗಳು ತುಂಬಲಿ, ಬೋರ್‌ವೆಲ್‌ಗಳು ಮತ್ತು ಕೆರೆ–ಕಟ್ಟೆಗಳು ನೀರಿನಿಂದ ಸಮೃದ್ಧವಾಗಲಿ, ಕೃಷಿ ಚಟುವಟಿಕೆಗಳು ಚೇತರಿಸಿಕೊಳ್ಳಲಿ ಹಾಗೂ ರೈತರ ಜೀವನದಲ್ಲಿ ಹೊಸ ಆಶಾಕಿರಣ ಮೂಡಲಿ ಎಂದು ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.



ಇದೇ ಸಂದರ್ಭದಲ್ಲಿ ರಾಜ್ಯದಲ್ಲಿ ಶಾಂತಿ, ನೆಮ್ಮದಿ ಮತ್ತು ಅಭಿವೃದ್ಧಿಯ ವಾತಾವರಣ ನೆಲೆಸಲಿ, ಜನಪರ ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಲಿ ಹಾಗೂ ರಾಜ್ಯದ ಆಡಳಿತ ಯಾವುದೇ ಅಡ್ಡಿ–ಆತಂಕಗಳಿಲ್ಲದೆ ಸುಗಮವಾಗಿ ಸಾಗಲಿ ಎಂಬ ಆಶಯದೊಂದಿಗೆ ವಿಶೇಷ ಹೋಮ–ಹವನ ಹಾಗೂ ಪೂಜೆಗಳನ್ನು ನೆರವೇರಿಸಲಾಯಿತು.ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮುಖಂಡರು, ಕಾರ್ಯಕರ್ತರು ಮತ್ತು ಭಕ್ತರು ರಾಜ್ಯದ ಸಮಗ್ರ ಅಭಿವೃದ್ಧಿ, ರೈತರ ಕಲ್ಯಾಣ ಹಾಗೂ ಜನಸಾಮಾನ್ಯರ ಸುಖ–ಶಾಂತಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಪೂಜೆಯ ಬಳಿಕ ದೇವರಿಗೆ ವಿಶೇಷ ನೈವೇದ್ಯ ಸಮರ್ಪಿಸಿ ಭಕ್ತರಿಗೆ ತೀರ್ಥ–ಪ್ರಸಾದ ವಿತರಣೆ ಮಾಡಲಾಯಿತು.ಈ ಸಂದರ್ಭದಲ್ಲಿ ವೆಂಕಟೇಶ್ ಪ್ರಸಾದ್, ಬಳ್ಳಾರಿ ಬುಡ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಅಲ್ಲಂ ಪ್ರಶಾಂತ್, ವೆಂಕಟೇಶ್ ಹೆಗಡೆ, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಅನುಷ್ಠಾನದ ಅಧ್ಯಕ್ಷ ಚಿದಾನಂದಪ್ಪ, ಮಾಜಿ ಮಹಾಪೌರರಾದ ಮುಳ್ಳಂಗಿ ನಂದೀಶ್, ಬೊಯಪಾಟಿ ವಿಷ್ಣುವರ್ಧನ್, ನಾಗಳಕೆರೆಗೋವಿಂದ್, ಮುಧಿ ಮಲ್ಲಯ್ಯ, ಎಲ್. ಮಾರಣ್ಣ, ರೇಡಿಯೋ ಪಾರ್ಕ್ ನಾಗು, ಅಲ್ಲಾ ಬಕಾಶ್, ಹರ್ಷದ್, ಆಯಾಜ್‌ಅಹ್ಮದ್, ಸೋಮು ಸೇರಿದಂತೆ ನೂರಾರು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು,ಸಾರ್ವಜನಿಕರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪೂಜೆಯಲ್ಲಿ ಪಾಲ್ಗೊಂಡರು.

## ಬಳ್ಳಾರಿಯಲ್ಲಿ ಎಸ್‌ಐಆರ್ ದುರ್ಬಳಕೆ ಆರೋಪ: ಪ್ರಕ್ರಿಯೆ ರದ್ದುಪಡಿಸಿ ಮರುಪರಿಶೀಲನೆ ನಡೆಸಿ ಇಲ್ಲದಿದ್ದರೆ ಚುನಾವಣಾ ಆಯೋಗಕ್ಕೆ ದೂರು: ಮಾಜಿ ಸಚಿವ ಶ್ರೀರಾಮುಲು ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿಶೇಷ ತೀವ್ರ ಪರಿಶೀಲನೆ (ಎಸ್‌ಐಆರ್) ಪ್ರಕ್ರಿಯೆಯನ್ನು ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ದುರ್ಬಳಕೆ ಮಾಡುತ್ತಿದೆ ಎಂದು ಆರೋಪಿಸಿರುವ ಮಾಜಿ ಸಚಿವ ಹಾಗೂ ಬಿಜೆಪಿ ಮುಖಂಡ ಬಿ. ಶ್ರೀರಾಮುಲು, ಈವರೆಗೆ ನಡೆದಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣವೇ ರದ್ದುಪಡಿಸಿ, ನಿಯಮಾನುಸಾರ ಮತ್ತು ಪಾರದರ್ಶಕವಾಗಿ ಮರುಪ್ರಾರಂಭಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಇಲ್ಲದಿದ್ದರೆ ದಾಖಲೆ ಸಮೇತ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಸೋಮವಾರ ಬೆಳಗ್ಗೆ ಬಳ್ಳಾರಿ ನಗರದ ಸಿರುಗುಪ್ಪ ರಸ್ತೆಯಲ್ಲಿರುವ ತಮ್ಮ ನಿವಾಸ–ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯ ಉದ್ದೇಶ ಉತ್ತಮವಾಗಿದ್ದರೂ, ರಾಜ್ಯದಲ್ಲಿ ಅದರ ಅನುಷ್ಠಾನದಲ್ಲಿ ಗಂಭೀರ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿದರು.

ನಿಯಮಾನುಸಾರ ಅಧಿಕಾರಿಗಳು ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸಬೇಕಾದರೆ, ಕಾಂಗ್ರೆಸ್ ಮುಖಂಡರು ಹಾಗೂ ಕೆಲ ಅಧಿಕಾರಿಗಳ ಕುಮ್ಮಕ್ಕಿನಿಂದ ಮಸೀದಿಗಳು, ದೇವಸ್ಥಾನಗಳು, ಕಲ್ಯಾಣ ಮಂಟಪಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಜನರನ್ನು ಗುಂಪು ಗುಂಪಾಗಿ ಸೇರಿಸಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ದೂರಿದರು. ಇದು ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆಗೆ ಧಕ್ಕೆ ತರುವ ಬೆಳವಣಿಗೆಯಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದರು.ಬಳ್ಳಾರಿಯ ಕೌಲ್ ಬಜಾರ್ ಪ್ರದೇಶದಲ್ಲಿ ಸುಮಾರು 10 ಸಾವಿರ ಬಾಂಗ್ಲಾದೇಶ ಮೂಲದ ವಲಸೆ ಮತದಾರರಿದ್ದಾರೆ ಎಂದು ಆರೋಪಿಸಿದ ಶ್ರೀರಾಮುಲು, ಇಂತಹ ಮತದಾರರಿಗೆ ಕಾಂಗ್ರೆಸ್ ಪಕ್ಷ ಬೆಂಬಲ ನೀಡುತ್ತಿದೆ ಎಂದು ಟೀಕಿಸಿದರು. ಈ ಗಂಭೀರ ಆರೋಪದ ಕುರಿತು ರಾಜ್ಯ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸಮಗ್ರ ತನಿಖೆ ನಡೆಸಿ ಸತ್ಯಾಸತ್ಯತೆ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.ಈವರೆಗೆ ನಡೆದಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಿ, ಚುನಾವಣಾ ಆಯೋಗದ ಮಾರ್ಗಸೂಚಿಗಳ ಪ್ರಕಾರ ಹೊಸದಾಗಿ ಮತ್ತು ಪಾರದರ್ಶಕವಾಗಿ ಪ್ರಕ್ರಿಯೆ ನಡೆಸಬೇಕು ಎಂದು ಅವರು ಆಗ್ರಹಿಸಿದರು. ಇದೇ ರೀತಿಯ ಅಕ್ರಮಗಳು ಮುಂದುವರಿದರೆ ಎಲ್ಲಾ ದಾಖಲೆಗಳನ್ನು ಸಂಗ್ರಹಿಸಿ ಶೀಘ್ರದಲ್ಲೇ ಚುನಾವಣಾ ಆಯೋಗಕ್ಕೆ ಅಧಿಕೃತ ದೂರು ಸಲ್ಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಮಾಧ್ಯಮಗಳ ಕುರಿತು ಮಾತನಾಡಿದ ಅವರು, ಮಾಧ್ಯಮಗಳ ಮೇಲೆ ದಬ್ಬಾಳಿಕೆ ನಡೆಸುವ ರಾಜಕಾರಣಿಗಳು ಎಂದಿಗೂ ಯಶಸ್ವಿಯಾಗಿಲ್ಲ ಎಂದು ಹೇಳಿ, ಪ್ರಜಾಪ್ರಭುತ್ವದಲ್ಲಿ ಮಾಧ್ಯಮ ಸ್ವಾತಂತ್ರ್ಯವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಅಭಿಪ್ರಾಯಪಟ್ಟರು.ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಮಾಜಿ ಬುಡ ಅಧ್ಯಕ್ಷ ಪಿ. ಪಾಲಣ್ಣ, ಮಹಾನಗರ ಪಾಲಿಕೆ ಸದಸ್ಯರಾದ ಹನುಮಂತು, ಕೆ.ಎಸ್. ಅಶೋಕ್, ಶ್ರೀನಿವಾಸ್ ಮೋತ್ಕರ್, ತಿಮ್ಮಪ್ಪ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.



# ರೈತರಿಗೆ ಬೀಜ, ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಮುಂಗಾರು ಮಳೆ ವಿಳಂಬವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಬೀಜ ಮತ್ತು ರಸಗೊಬ್ಬರದ ಕೊರತೆ-ಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಹಂಪನಗೌಡ ಬಾದರ್ಲಿ ಅಧಿಕಾರಿಗಳು ಹಾಗೂ ರಸಗೊಬ್ಬರ ಮಾರಾಟಗಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ನಗರದ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ನಡೆದ ರಸಗೊಬ್ಬರ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. "ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿಂದಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಮುಂದೆ ಉತ್ತಮ ಮಳೆಯಾದಲ್ಲಿ ರೈತರು ಬಿತ್ತನೆ ಕಾರ್ಯಕ್ಕೆ ಮುಂದಾಗುತ್ತಾರೆ. ಆ ಸಮಯದಲ್ಲಿ ಯಾವುದೇ ಕಾರಣಕ್ಕೂ ಬೀಜ ಮತ್ತು ರಸಗೊಬ್ಬರದ ಕೊರತೆ ಉಂಟಾಗದಂತೆ ಮಾರಾಟಗಾರರು ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು ಎಂದು ತಾಕೀತು ಮಾಡಿದರು.

**ಬರಗಾಲ ಘೋಷಣೆಗೆ ಸಿದ್ಧತೆ**

ತಾಲೂಕಿನಲ್ಲಿ ಈ ಬಾರಿ ಶೇ. 40ರಷ್ಟು ಮಳೆ ಕೊರತೆಯಾಗಿದೆ. ಪರಿಸ್ಥಿತಿ ಹೀಗೆಯೇ ಮುಂದುವರಿದರೆ ಬರಗಾಲ ಘೋಷಣೆಯಾಗುವ ಸಾಧ್ಯತೆಯಿದೆ. ಅಂತಹ ಸಂದರ್ಭದಲ್ಲಿ ಕೈಗೊಳ್ಳಬೇಕಾದ ತುರ್ತು ಕ್ರಮಗಳ ಬಗ್ಗೆ ಈಗಲೇ ಸಿದ್ಧತೆ ಮಾಡಿಕೊಂಡು, ಜಿಲ್ಲಾಧಿಕಾರಿಗಳಿಗೆ ಸೂಕ್ತ ವರದಿ ಸಲ್ಲಿಸುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಕೃಷಿ ಅಧಿಕಾರಿ ರುದ್ರಗೌಡ ಮಾತನಾಡಿ, "ತಾಲೂಕಿನಲ್ಲಿ ಸದ್ಯ ಯೂ-ರಿಯಾ ಗೊಬ್ಬರದ ಕೊರತೆ ಇಲ್ಲ, ಆದರೆ ಡಿಎಪಿ (DAP) ಗೊಬ್ಬರದ ಕೊರತೆ ಇದೆ. ಮಳೆಯಿಲ್ಲದೆ ಈಗಾಗಲೇ ಶೇ. 50ರಷ್ಟು ಬೆಳೆಗಳು ಒಣಗಿವೆ. ಮುಂದೆ ಮಳೆಯಾದರೆ ಮಾತ್ರ ಉಳಿದ ಬೆಳೆ ಕೈಗೆ ಬರಬಹುದು, ಇಲ್ಲದಿದ್ದರೆ ಸಂಪೂರ್ಣ ನಷ್ಟವಾಗಲಿದೆ ಎಂದು ಸಭೆಗೆ ಮಾಹಿತಿ ನೀಡಿದರು.

**ಬೆಳೆ ವಿಮೆ ಬಗ್ಗೆ ಅರಿವು ಮೂಡಿಸಿ**

ಬೆಳೆ ವಿಮೆ ಕುರಿತಂತೆ ರೈತರಲ್ಲಿ ಸರಿಯಾದ ಮಾಹಿತಿ ಇಲ್ಲದಿರುವುದನ್ನು ಗಮನಿಸಿದ ಶಾಸಕರು, ಕೃಷಿ ಅಧಿಕಾರಿಗಳು ಮತ್ತು ವಿಮಾ ಕಂಪನಿಯ ಪ್ರತಿನಿಧಿಗಳು ಜಂಟಿಯಾಗಿ ಗ್ರಾಮಗಳಿಗೆ ತೆರಳಿ, ರೈತರ ಮನೆಮನೆಗೆ ಭೇಟಿ ನೀಡಿ ಕರಪತ್ರಗಳ ಮೂಲಕ ಮಾಹಿತಿ ನೀಡಬೇಕು. ಅಧಿಕಾರಿಗಳು ಕೇವಲ ಕಚೇರಿಗಳಿಗೆ ಸೀಮಿತವಾಗದೆ ಕ್ಷೇತ್ರ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು. ಕಲಬುರಗಿಯಲ್ಲಿ ನಡೆಯಲಿರುವ ವಿಭಾಗೀಯ ಮಟ್ಟದ ಸಭೆಯಲ್ಲಿ ತಾಲೂಕಿನ ಮಳೆ ಪರಿಸ್ಥಿತಿ ಮತ್ತು ರೈತರ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಶಾಸಕರು ತಿಳಿಸಿದರು.

**ಕುಡಿಯುವ ನೀರಿಗೆ ಆದ್ಯತೆ**

ಮಳೆ ಇಲ್ಲದ ಕಾರಣ ಕಾಲುವೆಗಳಿಗೆ ನೀರು ಹರಿಸದಿರಲು ಸರ್ಕಾರ ನಿರ್ಧರಿಸಿದೆ. ಆದಾಗ್ಯೂ, ಜುಲೈ 15ರಿಂದ ಕುಡಿಯುವ ನೀರಿನ ಉದ್ದೇಶಕ್ಕಾಗಿ ಕಾಲುವೆಗಳಿಗೆ ನೀರು ಬಿಡಲಾಗುವುದು. ಈ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಪಿಡಿಒಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಕೆರೆ, ಕಾಲುವೆ ಮತ್ತು ಹಳ್ಳ-ಕೊಳ್ಳಗಳಲ್ಲಿ ಬೆಳೆದಿರುವ ಗಿಡಗಂಟಿಗಳನ್ನು ತೆರವುಗೊಳಿಸಿ, ಸ್ವಚ್ಛಗೊಳಿಸಿ ನೀರನ್ನು ಸಂಗ್ರಹಿಸಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಬೇಕು ಎಂದು ಸೂಚಿಸಿದರು.

ಈ ಸಭೆಯಲ್ಲಿ ತಹಸೀಲ್ದಾರ್ ಅರುಣ ದೇಸಾಯಿ, ತಾಲೂಕು ಪಂಚಾಯಿತಿ ಇಒ ಚಂದ್ರಶೇಖರ, ಡಿವೈಎಸ್ಪಿ ಚಂದ್ರಶೇಖರ ಜಿ. ನಾಯಕ ಸೇರಿದಂತೆ ಅಧಿಕಾರಿಗಳು ಮತ್ತು ರಸಗೊಬ್ಬರ ಮಾರಾಟಗಾರರು ಉಪಸ್ಥಿತರಿದ್ದರು.

# ಶಾಲೆಯ ಗೇಟ್ ಮುರಿದು ವಿದ್ಯಾರ್ಥಿಗಳಿಗೆ ಗಾಯ



**ಬಾಗಲಕೋಟೆ:** ಜಿಲ್ಲೆಯ ಇಳಕಲ್ ತಾಲ್ಲೂಕಿನ ಬಲಕುಂದಿ ಸರ್ಕಾರಿ ಶಾಲೆಯ ಮುಖ್ಯದ್ವಾರದ ಗೇಟ್ ಬಿದ್ದು ನಾಲ್ವರು ಮಕ್ಕಳು ಸೇರಿ ಐವರು ಗಾಯಗೊಂಡಿರುವ ಘಟನೆ ನಡೆದಿದೆ.

ಘಟನೆಯಲ್ಲಿ ರಾಜಸ್ಥಾನ ಮೂಲದ ವಿದ್ಯಾರ್ಥಿನಿ ಸುನೆಮಾ ಎಂಬಾಕೆಗೆ ತೀವ್ರ ಗಾಯವಾಗಿದ್ದು ಚಿಕಿತ್ಸೆಗೆ ಬಾಗಲಕೋಟೆ ಆಸ್ಪತ್ರೆಗೆ ದಾಖಲಿಸಲಾಗಿದೆ. ಮುಖ ಮತ್ತು ಕಿವಿಗೆ ಗಾಯವಾಗಿದೆ ಎನ್ನಲಾಗಿದೆ.

ಇನ್ನು ಮೂವರು ವಿದ್ಯಾರ್ಥಿಗಳು ಹಾಗೂ ಓರ್ವ ಆಯಾ ಸಹ ಗಾಯಗೊಂಡಿದ್ದಾರೆ. ಈಗಾಗಲೇ ಮೂರು ಬಾರಿ ಶಾಲೆಯ ಮುಖ್ಯದ್ವಾರದ ಗೇಟ್ ಮುರಿದು ಬಿದ್ದಿದ್ದು ಯಾವುದೇ ಅಪಾಯ ಆಗಿರಲಿಲ್ಲ. ಇದಕ್ಕೆ ಕಳಪೆ ಕಾಮಗಾರಿಯೇ ಕಾರಣ ಎಂದು ಗ್ರಾಮಸ್ಥರು ದೂರಿದ್ದಾರೆ.

# ಡಾ.ಶ್ಯಾಮಪ್ರಸಾದ್ ಮುಖರ್ಜಿ ಜಯಂತಿ ಆಚರಣೆ



**ಬಾಗಲಕೋಟೆ:** ಡಾ.ಶ್ಯಾಮಪ್ರಸಾದ್ ಮುಖರ್ಜಿ ದೇಶದ ಅಖಂಡತೆ ಮತ್ತು ಏಕತೆಗಾಗಿ ತಮ್ಮ ಜೀವನವನ್ನೇ ಸಮರ್ಪಣೆ ಮಾಡಿದರು ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ ಹೇಳಿದರು.

ನಗರದ ಶಿವಾನಂದ ಜೀನದಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಸೋಮವಾರ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ವತಿಯಿಂದ ಹಮ್ಮಿಕೊಂಡಿದ್ದ ಡಾ. ಶ್ಯಾಮಪ್ರಸಾದ್ ಮುಖರ್ಜಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪಶ್ಚಿಮ ಬಂಗಾಳ ಭಾರತದ ಅವಿಭಾಜ್ಯ ಅಂಗವಾಗಿ ಉಳಿಯುವಂತೆ ಮಾಡುವಲ್ಲಿ ಡಾ.ಮುಖರ್ಜಿ ಮಹತ್ವದ ಪಾತ್ರ ವಹಿಸಿದ್ದರು. ನಂತರ ಜಮ್ಮು-ಕಾಶ್ಮೀರ ಭಾರತದ ಅವಿಭಾಜ್ಯ ಭಾಗವಾಗಿರಬೇಕು ಎಂಬ ದೃಢ ನಿಲುವಿನೊಂದಿಗೆ ಹೋರಾಟ ನಡೆಸಿದರು. ಸೆರೆವಾಸ ಮತ್ತು ಏಕಾಂತ ಜೀವನವೂ ಅವರ ಸಂಕಲ್ಪವನ್ನು ಕುಗ್ಗಿಸಲಿಲ್ಲ. ದೇಶದ ಏಕತೆಗಾಗಿ ಹೋರಾಡಿದ ಅವರ ತ್ಯಾಗ ಇತಿಹಾಸದಲ್ಲಿ ರಾಷ್ಟ್ರೀಯ ಸ್ಮರಣೆಯ ಭಾಗವಾಗಿ ಉಳಿದಿದೆ ಎಂದು ಭಾಂಡಗೆ ಹೇಳಿದರು.

ಕಾರ್ಯಕ್ರಮದಲ್ಲಿ ಡಾ. ಎಂ.ಎಸ್.ದಡ್ಡೆನ್ನವರ, ಬಸವರಾಜ ಯಂಕಂಚಿ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಸತ್ಯನಾರಾಯಣ ಹೇಮಾದ್ರಿ, ಶಶಿಕಲಾ ಮಜ್ಜಗಿ, ಸರಸ್ವತಿ ಕುರಬರ, ಶಿವಲೀಲಾ ಸಂಬಣ್ಣವರ, ವಿಜಯಲಕ್ಷ್ಮಿ ಆಚಾರ್, ಶಿವಾನಂದ ಟವಳಿ, ರಾಜು ರೇವಣಕರ, ಅಂಬಾಜಿ ಜೋಷಿ, ರವಿ ಧಾಮಜಿ, ರಾಜು ಮುದೇನೂರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಾರ್ಥಕ ಬದುಕಾದರೆ ಮಾತ್ರ ಜನ್ಮದಿನಕ್ಕೆ ಅರ್ಥ



**ಹೂವಿನಹಡಗಲಿ:** ಪ್ರತಿಯೊಬ್ಬರು ತಮ್ಮ ಹುಟ್ಟನ್ನ ಸಾರ್ಥಕಪಡಿಸಿಕೊಳ್ಳಲು ಸಮಾಜಕ್ಕೆ ನಿಸ್ವಾರ್ಥವಾದ ಸೇವೆ ಸಲ್ಲಿಸಬೇಕು ಎಂದು ಚೌಕಿಮಠ ಶ್ರೀ ಸದ್ಗುರು ಗಾಡಿ ತಾತನವರು ಹೇಳಿದರು.

ಇಂದು ಮಠದ ಆವರಣದಲ್ಲಿ ಭಕ್ತಾದಿಗಳು ಹಮ್ಮಿಕೊಂಡಿದ್ದ ಜನ್ಮದಿನ ಆಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಹುಟ್ಟು ಆಕಸ್ಮಿಕವಾದರೂ ಜೀವನದಲ್ಲಿ ಪ್ರತಿಯೊಬ್ಬರು ಸಮಾಜಕ್ಕೆ ಏನಾದರೂ ಕೊಡಗೆ ಕೊಟ್ಟು ಹೋಗಬೇಕು.

ಆಗ ಮಾತ್ರ ಬದುಕಿಗೆ ಅರ್ಥ ಬರುತ್ತದೆ ಎಂದು ಹೇಳಿದರು. ಜನ್ಮದಿನದ ಅಂಗವಾಗಿ ಭಕ್ತಾದಿಗಳು ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮತ್ತು ಸಸಿ ವಿತರಣೆ ಅರ್ಥಪೂರ್ಣ ಕಾರ್ಯಕ್ರಮಗಳನ್ನ ಹಮ್ಮಿಕೊಂಡಿರುವುದು ನಮಗೆ ಖುಷಿ ತಂದಿದೆ ಎಂದು ಹೇಳಿದರು. ಭಕ್ತಾದಿಗಳು ಇಂದು ಪಡೆದಿರುವ ಸಸಿಗಳನ್ನು ಅಜ್ಜನವರ ಹೆಸರಿನಲ್ಲಿ ಬೆಳೆಸಿ ಪರಿಸರಕ್ಕೆ ಕೊಡುಗೆಯನ್ನು ನೀಡಬೇಕು ಎಂದು ಹೇಳಿದರು.

ಜನ್ಮದಿನದ ಅಂಗವಾಗಿ ಪಟ್ಟಣದ ನೂರು ಹಾಸಿಗೆ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಯಿತು.

ಜನ್ಮದಿನಕ್ಕೆ ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲ ಭಕ್ತಾದಿಗಳಿಗೂ ಸಸಿ ವಿತರಣೆ ಮಾಡಲಾಯಿತು. ಈ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಹೂವಿನಹಡಗಲಿ,ಹಗರಿಬೊಮ್ಮನಹಳ್ಳಿ,ಕೊಂಬಳಿ,.ಶೀರನಹಳ್ಳಿ,ತಿಪ್ಪಾಪುರ, ಹೊನ್ನಾಯಕನಹಳ್ಳಿ, ಪುರ.ಅರಳಿಹಳ್ಳಿ.ಸೇರಿದಂತೆ ತಾಲೂಕಿನ ವಿವಿಧ ಹಳ್ಳಿಗಳಿಂದ ಅನೇಕ ಭಕ್ತಾದಿಗಳು ಪಾಲ್ಗೊಂಡಿದ್ದರು.

# 40 ಕಿ.ಮೀ. ಉಪಕಾಲುವೆ ಹೂಳೆತ್ತುವ ಕಾರ್ಯಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ ಈ ಭಾಗದ ರೈತರ ಸರ್ವಾಂಗೀಣ ಅಭಿವೃದ್ಧಿಗೆ ಕಂಕಣಬದ್ಧವಾಗಿದೆ. ನವಲಿ ಸಮನಾಂತರ ಜಲಾಶಯ ನಿರ್ಮಾಣಕ್ಕೆ ನಮ್ಮ ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸಲಿದೆ" ಎಂದು ವಿಧಾನಪರಿಷತ್ ಶಾಸಕ ಬಸನಗೌಡ ಬಾದರ್ಲಿ ಭರವಸೆ ನೀಡಿದರು.



ತಾಲ್ಲೂಕಿನ ವೆಂಕಟೇಶ್ವರ ಕ್ಯಾಂಪ್ ಬಳಿ ಬಸನಗೌಡ ಫೌಂಡೇಷನ್ ವತಿಯಿಂದ ಹಮ್ಮಿಕೊಂಡಿದ್ದ 40 ಕಿ.ಮೀ. ವ್ಯಾಪ್ತಿಯ 36ನೇ ಉಪಕಾಲುವೆ ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಸಚಿವರು ಹಾಗೂ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಸುದೀರ್ಘ ಚರ್ಚೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಈ ಭಾಗದ ರೈತರ ಪರವಾಗಿ ಗಟ್ಟಿ ಧ್ವನಿ ಎತ್ತುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ನವಲಿ ಜಲಾಶಯ ನಿರ್ಮಾಣ ಸೇರಿದಂತೆ ಈ ಭಾಗದ ನೀರಾವರಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸರ್ಕಾರ ಬದ್ಧವಾಗಿದೆ ಎಂದು ಶಾಸಕರು ತಿಳಿಸಿದರು.

"ಒಬ್ಬ ರೈತನ ಮಗನಾಗಿ, ಶಾಸಕನಾಗಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇನೆ. ಕಳೆದ ಎರಡು ವರ್ಷಗಳಲ್ಲಿ ಎಲ್ಲ ವರ್ಗದ ಜನರಿಗೆ ನ್ಯಾಯ ಒದಗಿಸುವ ಕೆಲಸ ಮಾಡಿದ್ದೇನೆ. ತುಂಗಭದ್ರಾ ಎಡದಂಡೆ ರೈತರ ಬಹುದಿನಗಳ ಬೇಡಿಕೆಯಾದ ಉಪಕಾಲುವೆ ಸ್ವಚ್ಛತೆಗೆ ಫೌಂಡೇಷನ್ ಮೂಲಕ ಚಾಲನೆ ನೀಡಲಾಗಿದ್ದು, ಮುಂದೆಯೂ ಜನರ ಧ್ವನಿಯಾಗಿ ಕೆಲಸ ಮಾಡುತ್ತೇನೆ ಎಂದು ಬಸನಗೌಡ ಬಾದರ್ಲಿ ಹೇಳಿದರು. ಕೆಪಿಸಿಸಿ ಎಸ್ಟಿ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ವೆಂಕಟೇಶ ನಾಯಕ ಮಾತನಾಡಿ, "ಬಸನಗೌಡ ಬಾದರ್ಲಿ ಅವರು ಕೇವಲ ಶಾಸಕರಾಗಿ ಅಷ್ಟೇ ಅಲ್ಲದೆ, ರೈತರಿಗಾಗಿ 200ಕ್ಕೂ ಹೆಚ್ಚು ಬೋರ್‌ವೆಲ್ ವಿತರಣೆ ಮತ್ತು ಜೋಳ ಖರೀದಿ ಸಮಸ್ಯೆ ಬಗೆಹರಿಸುವ ಮೂಲಕ ಮಾದರಿ ನಾಯಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಬಸನಗೌಡ ಫೌಂಡೇಷನ್ ನೇತೃತ್ವದಲ್ಲಿ 36ನೇ ಉಪಕಾಲುವೆಯ ಹೂಳೆತ್ತುವ ಕಾರ್ಯ ಭರದಿಂದ ಸಾಗಿದೆ. 10ಕ್ಕೂ ಹೆಚ್ಚು ಜೆಸಿಬಿ ಮತ್ತು ಟ್ರಾಕ್ಟರ್‌ಗಳನ್ನು ಬಳಸಿಕೊಂಡು ವೆಂಕಟೇಶ್ವರ ಕ್ಯಾಂಪಿನಿಂದ ಬೂದಿವಾಳದವರೆಗೆ ಸುಮಾರು 40 ಕಿ.ಮೀ. ಉದ್ದದ ಕಾಲುವೆಯನ್ನು ಸ್ವಚ್ಛಗೊಳಿಸಲಾಗುತ್ತಿದೆ. ಈ ಕಾರ್ಯಕ್ಕೆ ನೀರಾವರಿ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ರೈತರು ಸ್ವಯಂಪ್ರೇರಿತರಾಗಿ ಕೈಜೋಡಿಸಿದ ಘಟನೆ ಜರಗಿತು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಹೊನ್ನನಗೌಡ ಬೆಳಗುರ್ಕಿ , ಖಾಜಾಹುಸೇನ್ ರೌಡಕುಂದಾ,ರಾಮನಗೌಡ ಬಸ್ಸಾಪುರ,ಅಮರೇಶಗೌಡ ಗೋರೇಬಾಳ ಸೇರಿದಂತೆ ಇತರು ಉಪಸ್ಥಿತರಿದ್ದರು.

# 14ರ ನಂತರ ಹಿಂಗಾರು ಮೀರುವುದಿಲ್ಲ: ತೇರಿನ ಹನುಮಪ್ಪ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪ್ರಸಕ್ತ ಶ್ರೀಪರಾಭವನಾಮ ಸಂವತ್ಸರದ ಮುಂಗಾರು ಈ ಬಾರಿ ಕೈಕೊಡುತ್ತದೆ. ಇದರಿಂದ ರೈತರಿಗೆ ಮತ್ತು ಜಾನುವಾರುಗಳಿಗೆ ಸುಖವಿಲ್ಲವೆಂದು ಐತಿಹಾಸಿಕ ಕೆರೆಹಳ್ಳಿ ಗ್ರಾಮದ ತಿರುಗಲ್ ತಿಮ್ಮಪ್ಪ ಬೆಟ್ಟದ ತೇರಿನ ಹನುಮಪ್ಪ ಭವಿಷ್ಯ ನುಡಿದಿದ್ದು, ಜುಲೈ 14ರ ನಂತರ ಹಿಂಗಾರು ಬುವಿಗೆ ಕಾಲಿಡಲಿದೆ ಎಂದು ಮಳೆಯ ಕುರಿತಾದ ಭವಿಷ್ಯ ನುಡಿದಿದ್ದಾನೆ.



ಶಹಪುರ ಗ್ರಾಮದ ಪೂಜಾರ ಪರಿವಾರದ ಸಣ್ಣ ಕರಿಯಪ್ಪ ನೇತೃತ್ವದಲ್ಲಿ ರೈತರು, ದನಗಾಹಿಗಳು ಮತ್ತು ಕುರಿಗಾಹಿಗಳು ಗ್ರೀಷ್ಮ ಋತುವಿನ ನಿಜ ಜ್ಯೇಷ್ಠ ಮಾಸ ಕೃಷ್ಣ ಪಕ್ಷದ ಶನಿವಾರ ಚತುರ್ಥಿಯಂದು ಪ್ರಾತಃಕಾಲ 'ತೇರಿನ ಹನುಮಪ್ಪನ ಪತ್ರಿ ಕೇಳುವ' ಕಾರಣಿಕದ ವೇಳೆ ಈ ಭವಿಷ್ಯ ನುಡಿದಿದ್ದಾನೆ. ಅಮಾವಾಸ್ಯೆ ಕೃಷ್ಣ ಪಕ್ಷದ ಮಿಥುನ-ಪುನರ್ವಸು ಸಮಯದಲ್ಲಿ ಮಳೆ ಕೂಟ ನಿಧಾನಗತಿಯಲ್ಲಿ ಘನೀಕರಿಸಿ ಹಂತ ಹಂತವಾಗಿ ಮಳೆ ಸುರಿಯಲಿದೆ ಎಂದು ತೇರಿನ ಹನುಮಪ್ಪ ನುಡಿದಿದ್ದಾನೆ.

**ಹಿನ್ನೆಲೆ:** ಶಹಪುರ ಗ್ರಾಮದ ಪೂಜಾರ ಪರಿವಾರದವರು ಶತಮಾನಗಳಿಂದಲೂ ಪ್ರತಿ ಮಳೆಗಾಲದ ಅವಧಿಯಲ್ಲಿ 'ತೇರಿನ ಹನುಮಪ್ಪನ ಪತ್ರಿ ಕೇಳುವ' ಸಂಪ್ರದಾಯವಿರಿಸಿಕೊಂಡಿದ್ದಾರೆ. ಗ್ರಾಮದ ಶ್ರೀ ಆಂಜನೇಯ ಗರ್ಭಗುಡಿಯಿಂದ ತುಂಬಿದ ಕೊಡ, ಗಂಟೆ, ಜಾಗಟೆಯೊಂದಿಗೆ ರೈತರೊಂದಿಗೆ ಮುನ್ನಾದಿನ ಗುಡ್ಡಕ್ಕೆ ತೆರಳುತ್ತಾರೆ. ರಾತ್ರಿಯೆಲ್ಲ ಹನುಮಂತನ ಸ್ಮರಣೆ, ಭಜನೆ ಮಾಡುತ್ತ ಆರಾಧಿಸುತ್ತಾರೆ. ಬೆಳಗಿನ ಪ್ರಾತಃಕಾಲದ ಸಮಯದಲ್ಲಿ ಮಜ್ಜನ ಬಾವಿಯಿಂದ ಶ್ರೀ ತಿರುಗಲ್ ತಿಮ್ಮಪ್ಪ ಮತ್ತು ಲಕ್ಷ್ಮೀದೇವಿಗೆ ಅಭಿಷೇಕ, ಪೂಜೆ ನೆರವೇರಿಸುತ್ತಾರೆ. ಬಳಿಕ ತೇರಿನ ಹನುಮಪ್ಪನಿಗೆ ಅಭಿಷೇಕ, ಹೂವಿನ ಅಲಂಕಾರ ಮಾಡುತ್ತಾರೆ. ಹೂವಿನ ಅಲಂಕಾರದ ಬಳಿಕ 'ಪತ್ರಿ ಕೇಳುವ ಸಂಪ್ರದಾಯ' ಇರುತ್ತದೆ. ತೇರಿನ ಹನುಮಪ್ಪ ತನ್ನ ದೇಹದ ಯಾವ ಭಾಗದಿಂದ ಹೂವು ಉದುರಿಸುತ್ತಾನೋ ಅದರ ಹಿನ್ನೆಲೆಯಲ್ಲಿ ಮಳೆಯ ವರ್ತಮಾನ ಅರಿಯಲಾಗುತ್ತದೆ.

ಇದು ಕೇವಲ ಕೊಪ್ಪಳ ಭಾಗಕ್ಕೆ ಮಾತ್ರ ಸೀಮಿತವಲ್ಲ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಸಂಭವಿಸಬಹುದಾದ ವರ್ತಮಾನ ಎನ್ನುವುದು ಇದರ ತಾತ್ಪರ್ಯವಾಗಿದೆ. ಪೂಜಾರ ಪರಿವಾರದ ಐದಾರು ತಲೆಮಾರಿನಿಂದ ಈ ಧಾರ್ಮಿಕ ಪ್ರಕ್ರಿಯೆ ಮುನ್ನಡೆಸಿಕೊಂಡು ಬರಲಾಗುತ್ತಿದೆ. ರಂಗಪ್ಪ ಪೂಜಾರ ಮತ್ತು ನಿಂಗಪ್ಪ ಪೂಜಾರ ಇವರ ಅವಧಿಯಿಂದಲೂ ಈ ಆಚರಣೆ ಮುಂದುವರಿದಿದೆ. ತೇರಿನ ಹನುಮಪ್ಪನ ಮಳೆ ಕುರಿತ ಭವಿಷ್ಯವಾಣಿ ನಿಜವಾಗಲಿದೆ ಎಂದು ಭಕ್ತರು ತಿಳಿಸಿದ್ದಾರೆ.

ಈ ಬಾರಿಯ 'ತೇರಿನ ಹನುಮಪ್ಪನ ಪತ್ರಿ ಕೇಳುವ' ಕಾರಣಿಕದ ಆಚರಣೆಯಲ್ಲಿ ಪೂಜಾರ ಮನೆತನದ ಸಣ್ಣ ಕರಿಯಪ್ಪ ಪೂಜಾರ, ಗ್ರಾಮದ ಹಿರಿಯರಾದ ಭರಮಪ್ಪ ಕುರಿ, ಸಮಾಜ ಸೇವಕರಾದ ನಿಂಗಪ್ಪ ನಾಗಲಾಪುರ, ವಸಂತ್ ಕೆರೆಹಳ್ಳಿ ಮತ್ತು ವೀರಣ್ಣ ಕೋಮಲಾಪುರ ಇನ್ನಿತರರು ಇದ್ದರು. ಇದೇವೇಳೆ ಅಡುಗೆ ತಯಾರಿಸಿ, ದೇವರಿಗೆ ನೈವೇದ್ಯ ಅರ್ಪಿಸಿ, ಸಾಮೂಹಿಕ ಬಂಡೆಯೂಟ ಸವಿಯಲಾಯಿತು.

# ಅಭಿ ಪಿಚ್ಚರ್ ಬಾಕಿ ಹೈ: ಗೃಹ ಸಚಿವ ಪ್ರಿಯಾಂಕ್ ಖರ್ಗೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಆರ್ ಎಸ್ ಎಸ್ ಗೆ ಬರೆದ ಪತ್ರಕ್ಕೆ ಇನ್ನೂ ಉತ್ತರ ಬಂದಿಲ್ಲ. ಬರಲಿ ಬಿಡಿ ಅವಸರ ಯಾಕೆ? "ಅಭಿ ಪಿಚ್ಚರ್ ಬಾಕಿ ಹೈ' ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ಕಲಬುರಗಿಯ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ತಮ್ಮನ್ನು ಭೇಟಿಯಾದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದ ಅವರು, ಹಲವಾರು ಪ್ರಶ್ನೆಗಳನ್ನು ಹಾಕಿ ಆರ್ ಎಸ್ ಎಸ್ ಗೆ ಪತ್ರ ಬರೆದಿದ್ದೇನೆ. ಇನ್ನೂ ಉತ್ತರ ನೀಡಿಲ್ಲ. ನೀಡಲಿ ಬಿಡಿ ಯಾಕೆ ಅವಸರ 'ಅಭೀ ಪಿಚ್ಚರ್ ಬಾಕಿ ಹೈ'. ಅವರೂ ಕೂಡಾ ನನ್ನ ಹಾಗೂ ಕುಟುಂಬದ ವೈಯಕ್ತಿಕ ಮಾಹಿತಿ ಕಲೆ ಹಾಕುತ್ತಿದ್ದಾರೆ, ಹಾಕಲಿ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಮುಂದಿನ ದಿನಗಳಲ್ಲಿ ಆರ್ ಎಸ್ ಎಸ್ ಪಥ ಸಂಚಲನ ನಡೆಸಬೇಕಿದ್ದರೆ ಕಡ್ಡಾಯಾಗಿ ಅನುಮತಿ ಪಡೆದುಕೊಳ್ಳಲೇಬೇಕೇ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ನಾನು ಗೃಹ ಸಚಿವನಾಗಿರುವವರಗೆ ಕಡ್ಡಾಯ. ಆರ್ ಎಸ್ ಎಸ್ ನವರು ಇದೂವರೆಗೆ ಮಾಹಿತಿ ಮಾತ್ರ ನೀಡುತ್ತಿದ್ದರು. ಚಿತ್ತಾಪುರ ದಲ್ಲಿಯೂ ಹಾಗೆಯೇ ಮಾಡಿದರು. ಅನುಮತಿ ಕೊಡಲಿಲ್ಲ ಎಂದು ಕೋರ್ಟ್ ಗೆ ಹೋಗಿದ್ದರು. ಕೋರ್ಟ್ ನಿರ್ದೇಶನದಂತೆ ಅರ್ಜಿ ಸಲ್ಲಿಸಿದರು. ಇನ್ನು ಮುಂದೆಯೂ ಕೂಡಾ ಅವರು ಅರ್ಜಿ ಸಲ್ಲಿಸಿದರೆ, ಕೋರ್ಟ್ ನಿರ್ದೇಶನ ಹಾಗೂ ಸರ್ಕಾರದ ಮಾನದಂಡ, ಸ್ಥಳ, ಸಮಯ ಹಾಗೂ ಸಂದರ್ಭಕ್ಕನುಗುಣವಾಗಿ ಮುಂದಿನ ಕ್ರಮವಹಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಆರ್ ಎಸ್ ಎಸ್ ಗುರುದಕ್ಷಿಣೆ ತೆಗೆದುಕೊಳ್ಳುತ್ತಾರಂತೆ. ಗುರು ಎಂದರೆ ಯಾರು? ಧ್ವಜ ತಾನೆ? ಧ್ವಜದ ಮೇಲೆ ಗುರುದಕ್ಷಿಣೆ ತೆಗೆದುಕೊಂಡರೆ, ಅದಕ್ಕೆ ಲೆಕ್ಕ ತೋರಿಸಲಿ ಎಂದು ಸವಾಲಾಕಿದರು.

ಶ್ರೀರಾಮನ ಹುಂಡಿ ಕಳ್ಳತನ ವಿಚಾರ ಪ್ರಸ್ತಾಪಿಸಿದ ಗೃಹ ಸಚಿವರು, ಬೆಳ್ಳಿ, ಚಿನ್ನ, ಆಭರಣ, ಹಣ ಸೇರಿದಂತೆ ಇಟ್ಟಿಗೆಗಳನ್ನು ಕೂಡಾ ಕಳವು ಮಾಡಿದ್ದಾರೆ. ಕರ್ನಾಟಕದ ಗಣೇಶ್ ಎನ್ನುವವರು ಕಟ್ಟಡ ನಿರ್ಮಾಣ ಗುತ್ತಿಗೆ ಪಡೆದುಕೊಂಡಿ-ದ್ದಾರಂತೆ, ಇಲ್ಲಿಂದ ಹೋಗಿ ಅಲ್ಲಿ ಕಮಿಷನ್ ಹೊಡೆದಿದ್ದಾರಂತೆ. ಶ್ರೀರಾಮ ವಿಗ್ರಹದ ಪ್ರಾಣ ಪ್ರತಿಷ್ಠಾನದ ವಿಚಾರದಲ್ಲಿ ಕೆಲವರು ವಿರೋಧ ಮಾಡಿದ್ದರು. ಆದರೂ ಮೋದಿ ತರಾತುರಿಯಲ್ಲಿ ಮಾಡಿದ್ದರು. ಚೆಂದಾ ಚೋರಿಯಲ್ಲಿ ಆರ್ ಎಸ್ ಎಸ್ ಗೂ ಪಾಲು ಹೋಗಿದ್ದರೆ ನನಗೆ ಅನುಮಾನವಿಲ್ಲ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ವಿಫಲವಾಗಿದೆ ಎಂದು ಟೀಕಿಸಿದ ಸಚಿವರು ಮೋದಿ ವಿದೇಶಾಂಗ ನೀತಿ ಇನಸ್ಟಾದಲ್ಲಿ ರೀಲ್ ಮಾಡಲು ಹಾಗೂ ಚಾಕೋಲೇಟ್ ವಿತರಣೆ ಮಾಡಲು ಮಾತ್ರ ಸೀಮಿತವಾಗಿದೆ. ಕಚ್ಚಾ ತೈಲ ಬೆಲೆ ಕಡಿಮೆಯಾಗಿದೆಯಲ್ಲ ಈಗೇಕೆ ಪೆಟ್ರೋಲಿಯಂ ಬೆಲೆ ಯಾಕೆ ಕಡಿಮೆ ಮಾಡುತ್ತಿಲ್ಲ ? ಎಂದು ಪ್ರಶ್ನಿಸಿದರು.

ರಾಜ್ಯ ಮಂತ್ರಿಮಂಡಲದಲ್ಲಿ ನಮ್ಮ ಕಲ್ಯಾಣ ಕರ್ನಾಟಕಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಹೈಕಮಾಂಡ್ ಮುಂದೆ ಬೇಡಿಕೆ ಇದ್ದೇ ಇರುತ್ತದೆ. ನಮ್ಮ ಭಾಗದಿಂದ ಯಾರೇ ಸಚಿವರಾದರೂ ಕೂಡಾ ಹೆಚ್ಚಿನ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಆರ್ಟಿಕಲ್ 371 ಜೆ ಅಡಿಯಲ್ಲಿ ಗ್ರೇಡ್ 2 ತಹಸೀಲ್ದಾರಗಳ ಪದೋನ್ನತಿ ವಿಚಾರ, ಸಚಿವ ಸಂಪುಟದಲ್ಲಿ ಚರ್ಚೆ ನಡೆಸಲಾಗುವುದು. ಕಲಬುರಗಿ ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ವಾಟರ್ ಮೆನ್, ಬಿಲ್ ಕಲೆಕ್ಟರ್ ಗಳ ಖಾಯಮಾತಿ ವಿಚಾರದಲ್ಲಿಯೂ ಕೂಡಾ ಆರ್ಥಿಕ ಇಲಾಖೆಯೊಂದಿಗೆ ಚರ್ಚೆ ನಡೆಸಿ ಅಗತ್ಯ ಕ್ರಮವಹಿಸಲಾಗುವುದು ಎಂದರು.

ಡಬರಾಬಾದ್ ಬಳಿಯ ರೇಷ್ಮೆ ಇಲಾಖೆಯ ಕಟ್ಟಡದ ಕಳಪೆ ಕಾಮಗಾರಿ ವಿಚಾರ ಪ್ರಸ್ತಾಪಿಸದ್ದಕ್ಕೆ ಉತ್ತರಿಸಿದ ಸಚಿವರು ಮುಂದಿನ ವಾರ ಭೇಟಿ ನೀಡುತ್ತೇನೆ, ಕಳಪೆ ಆಗಿದ್ದರೆ ಕ್ರಮವಹಿಸಲಾಗುವುದು ಎಂದರು.

ದೀರ್ಘಾವಧಿ ಕಾಲ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಂಧಿಖಾನೆ ಇಲಾಖೆ ಹಾಗೂ ಗೃಹ ಇಲಾಖೆಯ ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ತರ್ಕಬದ್ಧ ನಿಯಮಾವಳಿ ಮೂಲಕ ಕ್ರಮವಹಿಸಲಾಗುವುದು. ಒಂದು ವೇಳೆ, ವರ್ಗಾವಣೆ ಮಾಡಿದರೆ, ಸಿಬ್ಬಂದಿಗಳು ಕೋರ್ಟ್ ಗೆ ಹೋಗುವ ಸಾಧ್ಯತೆ ಇರುವುದರಿಂದ ಕಾನೂನಿನ ಪ್ರಕಾರವೇ ವರ್ಗಾವಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಲೋಕಾಯುಕ್ತ ಸಂಸ್ಥೆ ಸೇರಿದಂತೆ ಯಾವುದೇ ಸಂಸ್ಥೆಗಳು ಒಳ್ಳೆಯ ಸಲಹೆ ನೀಡಿದರೆ ಸ್ವೀಕರಿಸಲಾಗುವುದು ಎಂದ ಸಚಿವರು ನೂತನ ಪೊಲೀಸ್ ಠಾಣೆಗಳ ಸ್ಥಾಪನೆಗೆ ಕೇಂದ್ರದ ನಿಮಯಮಾವಳಿ ಪಾಲನೆ ಮಾಡಬೇಕಿರುತ್ತದೆ. ಯಾವುದೇ ಹೊಸ ಠಾಣೆ ಸ್ಥಾಪನೆಗೆ ಆಯಾ ಪ್ರದೇಶದ ಕ್ರೈಮ್ ಪರಿಗಣನೆಗೆ ಬರುತ್ತದೆ ಹೊರತು ವ್ಯಾಪ್ತಿ ಪ್ರದೇಶವಲ್ಲ. ಇದೇ ನಿಯಮಾವಳಿ ಪ್ರಕಾರ ಕಲಬುರಗಿ ಕಮಿಷನರೇಟ್ ಅಡಿಯಲ್ಲಿಯೂ ಕೂಡಾ ನೂತನ ಠಾಣೆಗಳ ಸ್ಥಾಪನೆಗೆ ಕ್ರಮವಹಿಸಲಾಗುವುದು ಎಂದರು.

ಬೆಂಗಳೂರಿನ ಕಲ್ಲುಕ್ವಾರಿಯಂತೆ ಮಿರಿಯಾಣದಲ್ಲಿಯೂ ಕೂಡಾ ನಡೆಯುತ್ತಿದೆ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಲ್ಲು ಕ್ವಾರಿಗಳ ನಿರ್ವಹಣೆ, ಕ್ರಮಬದ್ಧತೆ ಹಾಗೂ ಅಕ್ರಮ ತಡೆ ವಿಚಾರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ವ್ಯಾಪ್ತಿಗೆ ಬರುತ್ತದೆ. ಆದರೂ ನಮ್ಮ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಎಂದು ಗೃಹ ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಗದೇವ ಗುತ್ತೇದಾರ, ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ, ತಿಪ್ಪಣ್ಣಪ್ಪ ಕಮಕನೂರು, ಪ್ರವೀಣ್ ಹರವಾಳ, ಸುಭಾಷ್ ರಾಠೋಡ, ರಾಜಗೋಪಾಲ ಮುದಿರೆಡ್ಡಿ ಸೇರಿದಂತೆ ಹಲವರಿದ್ದರು.

# ಮಳೆಗಾಗಿ ಪ್ರಾರ್ಥಿಸಿ ಬೆಟ್ಟದ ರಾಮಲಿಂಗೇಶ್ವರನಿಗೆ ವಿಶೇಷ ಜಲಾಭಿಷೇಕ



**ಕೆಂಭಾವಿ:** ಕಾಲಕಾಲಕ್ಕೆ ಮಳೆಯಾಗಿ ನಾಡು ಸುಭಿಕ್ಷವಾಗಲಿ ಹಾಗೂ ರೈತರ ಬದುಕು ಹಸನಾಗಲಿ ಎಂದು ಪ್ರಾರ್ಥಿಸಿ ಕೆಂಭಾವಿ ಪಟ್ಟಣದ ನಾಗರಿಕರು ಹಾಗೂ ರೈತಾಪಿ ವರ್ಗದವರು ಕೆಂಭಾವಿ ಸೀಮಾಂತರದ ಇತಿಹಾಸ ಪ್ರಸಿದ್ಧ ಬೆಟ್ಟದ ರಾಮಲಿಂಗೇಶ್ವರನಿಗೆ ಸೋಮವಾರ ವಿಶೇಷ ಜಲಾಭಿಷೇಕ ಹಾಗೂ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

ಪ್ರತಿ ವರ್ಷದಂತೆ ಈ ವರ್ಷವೂ ಮಳೆಗಾಗಿ ಪ್ರಾರ್ಥಿಸುವ ಈ ಧಾರ್ಮಿಕ ಪರಂಪರೆಯನ್ನು ಅತ್ಯಂತ ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು. ಮಳೆರಾಯನ ಕೃಪೆಗಾಗಿ ಪ್ರಾರ್ಥಿಸುತ್ತಾ ಸುಮಾರು 7 ಕಿಲೋಮೀಟರ್ ದೂರದಲ್ಲಿರುವ ರಾಮಲಿಂಗೇಶ್ವರನ ಬೆಟ್ಟಕ್ಕೆ ಅಲಂಕೃತಗೊಂಡಿದ್ದ ರಾಮಲಿಂಗೇಶ್ವರನ ಪಲ್ಲಕ್ಕಿ ಮತ್ತು ನಂದಿಕೋಲು ಸಮೇತ ಡೊಳ್ಳು ವಾದ್ಯ ಮೇಳದೊಂದಿಗೆ ಪಾದಯಾತ್ರೆ ಮೂಲಕ ಶಿವನಾಮ ಸ್ಮರಣೆ ಹಾಗೂ ಜಯಘೋಷಗಳನ್ನು ಕೂಗುತ್ತಾ ಸಾಗಿದ ದೃಶ್ಯ ವೈಭವಯುತವಾಗಿತ್ತು. ಬೆಟ್ಟಕ್ಕೆ ತಲುಪಿ ರಾಮಲಿಂಗೇಶ್ವರನಿಗೆ ವಿಶೇಷ ಪೂಜಾ ವಿಧಿವಿಧಾನಗಳನ್ನು ಆರಂಭಿಸಿದರು. ಮಳೆರಾಯ ಶೀಘ್ರವೇ ಧರೆಗಿಳಿಯಲಿ ಎಂಬ ಸಂಕಲ್ಪದೊಂದಿಗೆ ಪವಿತ್ರ ಜಲದಿಂದ ಅಭಿಷೇಕ ಮಾಡಲಾಯಿತು. ನೂರಾರು ಭಕ್ತರು ಶಿವನಿಗೆ ಪ್ರಿಯವಾದ ಬಿಲ್ವಪತ್ರೆಗಳನ್ನು ಸಮರ್ಪಿಸಿ ಬಿಲ್ವಾರ್ಚನೆ ಮಾಡಿ ಶಾಂತಿ ಮತ್ತು ಸುಭಿಕ್ಷೆ ಕರುಣಿಸುವಂತೆ ಬೇಡಿಕೊಳ್ಳಲಾಯಿತು.

ಈ ಮಹಾ ಪೂಜಾ ಕೈಂಕರ್ಯದಲ್ಲಿ ಕೆಂಭಾವಿ ಪಟ್ಟಣದವರಷ್ಟೇ ಅಲ್ಲದೆ, ಸುತ್ತಮುತ್ತಲಿನ ಹಳ್ಳಿಗಳಾದ ಕಿರದಳ್ಳಿ, ಪರಸನಳ್ಳಿ ಹಾಗೂ ನಗನೂರು ಗ್ರಾಮಗಳೂ ಸೇರಿದಂತೆ ಸಾವಿರಾರು ಭಕ್ತರು ಉತ್ಸಾಹದಿಂದ ಭಾಗವಹಿಸಿದ್ದರು. ರೈತರು ತಮ್ಮ ಜಮೀನುಗಳಲ್ಲಿ ಉತ್ತಮ ಇಳುವರಿಯಾಗಲಿ ಮತ್ತು ಬಿತ್ತನೆ ಕಾರ್ಯಕ್ಕೆ ಸಕಾಲದಲ್ಲಿ ಮಳೆಯಾಗಲಿ ಎಂದು ಶ್ರದ್ಧೆಯಿಂದ ಪ್ರಾರ್ಥಿಸಿದರು. ಪೂಜಾ ಕಾರ್ಯಕ್ರಮಗಳ ನಂತರ ಬೆಟ್ಟದ ಆವರಣದಲ್ಲಿ ಭಕ್ತರಿಗಾಗಿ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿ ಧನ್ಯತೆ ಅನುಭವಿಸಿದರು. ಸಂಜೆಯ ವೇಳೆಗೆ ರಾಮಲಿಂಗೇಶ್ವರನಿಗೆ ಮಹಾ ಮಂಗಳೋತ್ಸವದೊಂದಿಗೆ ಕಾರ್ಯಕ್ರಮಗಳು ಸಂಪನ್ನಗೊಂಡಿತು.

# ಡಾ. ಬಾಬು ಜಗಜೀವನರಾಂ ಅವರ ಪ್ರತಿಮೆಗೆ ಮಾಲಾರ್ಪಣೆ



**ಕಲಬುರಗಿ:** ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಗರದ ಮಹಾತ್ಮ ಗಾಂಧಿ ಟೌನ್‌ಹಾಲ್‌ನಲ್ಲಿ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ ಹಾಗೂ ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನರಾಂ ರವರ 40ನೇ ಪುಣ್ಯಸ್ಮರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯದ ಗೃಹ, ಐಟಿ-ಬಿಟಿ, ಇ-ಆಡಳಿತ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಡಾ. ಬಾಬು ಜಗಜೀವನರಾಂ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ಜಿಲ್ಲಾಧಿಕಾರಿ ಅಕ್ರಮ್ ಶರೀಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ್, ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಎಫ್‌ಒ) ಅಶೀಶ್ ರೆಡ್ಡಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ್, ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ಹೊಳಕರ್, ತಹಶೀಲ್ದಾರ್/ತಾಲೂಕು ಪಂಚಾಯಿತಿ ಅಧಿಕಾರಿ ಮಾನಪ್ಪ ಕಟ್ಟಿಮನಿ, ಮಹಾನಗರ ಪಾಲಿಕೆ ಸದಸ್ಯೆ ಲಿಂಗಮ್ಮ ಕಟ್ಟಿಮನಿ, ಜಿಲ್ಲಾ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ದೊಡ್ಡಮನಿ, ಸಮಾಜ ಮುಖಂಡರಾದ ರಾಜು ವಾಡೇಕರ್, ಶ್ಯಾಮ್ ನಾಟೇಕರ್, ಭೀಮಣ್ಣ ಬಿಲ್ವರ್, ದತ್ತು ಬಾಸಗಿ ಕುಂದಕರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕಾಲೇಜು ವಿದ್ಯಾರ್ಥಿಗಳಿಂದ ಎಸ್‌ಐಆರ್ ಜಾಗೃತಿ ಜಾಥಾ



**ಚಿಟಗುಪ್ಪ:** ಭಾರತದ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್ 2026) ಕುರಿತು ತಾಲೂಕಿನ ನಿರ್ಣಾ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಶನಿವಾರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ನಡೆಸಿ ಮತದಾರರಲ್ಲಿ ಅರಿವು ಮೂಡಿಸಿದರು. ಕಾಲೇಜಿನ ಪ್ರಾಂಶುಪಾಲ ಶಿವರಾಜ ಬಿರಾದಾರ್ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾ ಪ್ರಭುತ್ವದ ಯಶಸ್ಸಿಗೆ ಪ್ರತಿಯೊಬ್ಬ ಅರ್ಹ ಮತದಾರನು ಪಟ್ಟಿಯಲ್ಲಿ ತನ್ನ ಹೆಸರನ್ನು ನೋಂದಾಯಿಸಿಕೊಳ್ಳುವುದು ಹಾಗೂ ವಿವರಗಳನ್ನು ಪರಿಶೀಲಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು. ಜಾಥಾದ ವೇಳೆ ವಿದ್ಯಾರ್ಥಿಗಳು "ಮತದಾನ ನಮ್ಮ ಹಕ್ಕು ನಮ್ಮ ಕರ್ತವ್ಯ" ಅರ್ಹ ಮತದಾರರು ಮತದಾರರ ಪಟ್ಟಿಗೆ ಹೆಸರು ಸೇರಿಸಿಕೊಳ್ಳಿ ಎಂಬ ಘೋಷಣೆಗಳು ಕೂಗುತ್ತಾ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಎನ್‌ಎಸ್‌ಎಸ್ ಅಧಿಕಾರಿ ಸಂತೋಷ, ಉಪನ್ಯಾಸಕರಾದ ಶ್ರೀನಿವಾಸ ಕಾಂಬಳೆ, ಸರಿತಾ, ಅತಿಥಿ ಉಪನ್ಯಾಸಕರಾದ ಸಂಗೀತಾ, ರವಿ ಸೇರಿದಂತೆ ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಕ.ಕರ್ನಾಟಕದ ಅಭಿವೃದ್ಧಿಗೆ ಹೊಸ ವೇಗ; ಪ್ರಗತಿ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡ ಬಳಿಕ ಮೊದಲ ಬಾರಿಗೆ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಾದಿ ಶರಣರ ಸಮಾನತೆಯ ನೆಲೆ ಬಸವಕಲ್ಯಾಣದಿಂದಲೇ ಆರಂಭಿಸಿದ್ದಾರೆ.

ಸೂಫಿ-ಸಂತರ ಸಾಮರಸ್ಯದ ಪರಂಪರೆಗೂ ಹೆಸರಾದ ಬೀದರ್ ಮತ್ತು ಕಲ್ಬುರ್ಗಿ ಜಿಲ್ಲೆಗಳಿಂದಲೇ ಈ ಪ್ರವಾಸವನ್ನು ಆರಂಭಿಸುತ್ತಿರುವುದು ರಾಜಕೀಯ, ಆಡಳಿತಾತ್ಮಕ ಹಾಗೂ ಸಾಂಸ್ಕೃತಿಕವಾಗಿ ವಿಶೇಷ ಮಹತ್ವ ಪಡೆದಿದೆ.

ಸರ್ಕಾರದ ಸಮಗ್ರ, ಸಮಾನ ಮತ್ತು ಜನಕೇಂದ್ರಿತ ಆಡಳಿತದ ಸಂಕಲ್ಪಕ್ಕೆ ಈ ಪ್ರವಾಸ ಮತ್ತೊಂದು ನಿದರ್ಶನವಾಗಿದೆ. ಸಿಎಂ ಅವರು ತಿಂಗಳಿಂದ ವಿಧಾನಸೌಧದಲ್ಲಿ ನಿರಂತರವಾಗಿ ನಾನಾ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆ, ಅಧಿಕಾರಿಗಳ ಸಭೆ ನಡೆಸುವ ಮೂಲಕ ಆಡಳಿತ ವ್ಯವಸ್ಥೆಗೆ ಚುರುಕು ಮುಟ್ಟಿಸುವ ಕೆಲಸ ಮಾಡಿದ್ದರು. ಅಗತ್ಯ ಮಾಹಿತಿ ಪಡೆದು, ಅನೇಕ ಸಲಹೆ ಸೂಚನೆಗಳನ್ನು ನೀಡಿದ್ದರು. ಈಗ ಜಿಲ್ಲೆಗಳಿಗೆ ಖುದ್ದು ಭೇಟಿ ನೀಡಿ, ಆಡಳಿತ ವ್ಯವಸ್ಥೆ ಸುಗಮ ಚಾಲನೆಗೆ ಪ್ರೇರಣೆ ನೀಡಲಿದ್ದಾರೆ.

ಇಡೀ ದೇಶದಲ್ಲಿ ಬರದ ಛಾಯೆ ಆವರಿಸಿಕೊಂಡಿರುವ ಸಂದರ್ಭದಲ್ಲಿ ಸಿಎಂ ಅವರು ಕೈಗೊಂಡಿರುವ ಎರಡು ದಿನಗಳ ಪ್ರವಾಸ ಮಹತ್ವ ಪಡೆದಿದೆ. ಬೀದರ್ ಹಾಗೂ ಕಲ್ಬುರ್ಗಿ ಜಿಲ್ಲೆಗಳಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡುವುದರ ಜೊತೆಗೆ, ಕಲ್ಯಾಣ ಕರ್ನಾಟಕ ವಿಭಾಗದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಉನ್ನತ ಮಟ್ಟದ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಲಿದ್ದಾರೆ.

ವಿವಿಧ ಇಲಾಖೆಗಳ ಯೋಜನೆಗಳ ಅನುಷ್ಠಾನ, ಶಿಕ್ಷಣ, ಆರೋಗ್ಯ, ನೀರಾವರಿ, ಮೂಲಸೌಕರ್ಯ, ಕೈಗಾರಿಕೆ, ಕುಡಿಯುವ ನೀರು, ಉದ್ಯೋಗ ಸೃಷ್ಟಿ ಹಾಗೂ ಜನಕಲ್ಯಾಣ ಕಾರ್ಯಕ್ರಮಗಳ ಪ್ರಗತಿಯನ್ನು ಇಲಾಖೆವಾರು ಪರಿಶೀಲಿಸಿ, ಬಾಕಿ ಉಳಿದಿರುವ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಿದ್ದಾರೆ.

ಸಂವಿಧಾನದ ಪರಿಚ್ಛೇದ 371(ಎ) ಅಡಿಯಲ್ಲಿ ವಿಶೇಷ ಸ್ಥಾನಮಾನ ಹೊಂದಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಯನ್ನು ಸರ್ಕಾರ ತನ್ನ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿ ಪರಿಗಣಿಸಿದೆ. ಶಿಕ್ಷಣ, ಕೃಷಿ, ಕೈಗಾರಿಕೆ, ಉದ್ಯೋಗ, ನೀರಾವರಿ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ವೇಗವಾಗಿ ಅಭಿವೃದ್ಧಿ ಸಾಧಿಸಲು ಹಾಗೂ ಇಲಾಖೆಗಳ ನಡುವೆ ಸಮನ್ವಯ ಹೆಚ್ಚಿಸಿ ಫಲಿತಾಂಶ ಆಧಾರಿತ ಆಡಳಿತಕ್ಕೆ ಚುರುಕು ನೀಡಲು ಈ ಪ್ರವಾಸ ಮಹತ್ವದ ವೇದಿಕೆಯಾಗಲಿದೆ.

ಜಿಲ್ಲಾ ಮಟ್ಟದಲ್ಲಿಯೇ ಆಡಳಿತವನ್ನು ಜನರ ಬಳಿಗೆ ಕೊಂಡೊಯ್ಯುವುದು, ಸ್ಥಳೀಯ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ತ್ವರಿತ ಪರಿಹಾರಕ್ಕೆ ಕ್ರಮ ಕೈಗೊಳ್ಳುವುದು ಹಾಗೂ ಅಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಚುರುಕು ನೀಡುವುದು ಈ ಪ್ರವಾಸದ ಪ್ರಮುಖ ಉದ್ದೇಶವಾಗಿದೆ.

ರಾಜ್ಯದ ಯಾವುದೇ ಭಾಗ ಅಭಿವೃದ್ಧಿಯಿಂದ ವಂಚಿತವಾಗಬಾರದು ಎಂಬ ಸರ್ಕಾರದ ದೃಢ ಬದ್ಧತೆಯ ಭಾಗವಾಗಿಯೇ ಮುಖ್ಯಮಂತ್ರಿ ತಮ್ಮ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಕಲ್ಯಾಣ ಕರ್ನಾಟಕದಿಂದ ಆರಂಭಿಸಿದ್ದಾರೆ. ಇದು ಕೇವಲ ಆಡಳಿತಾತ್ಮಕ ಪ್ರವಾಸವಲ್ಲ; ಪ್ರಾದೇಶಿಕ ಸಮತೋಲನ, ಸಮಗ್ರ ಅಭಿವೃದ್ಧಿ ಮತ್ತು ಜನಕೇಂದ್ರಿತ ಆಡಳಿತಕ್ಕೆ ಸರ್ಕಾರ ನೀಡುತ್ತಿರುವ ಆದ್ಯತೆಯ ಸ್ಪಷ್ಟ ಸಂದೇಶವಾಗಿದೆ.

ಈ ಪ್ರವಾಸ ಸಂದರ್ಭದಲ್ಲಿ ಸಿಎಂ ಅವರು ಪಕ್ಷದ ಕಚೇರಿಗೂ ಭೇಟಿ ನೀಡುತ್ತಿರುವುದು ಕಾರ್ಯಕರ್ತರಲ್ಲಿ ಹುಮ್ಮಸ್ಸು ತಂದಿದೆ.

ಈ ಮಾದರಿಯನ್ನು ಇತರೆ ಎಲ್ಲ ಸಚಿವರು ಮುಂದುವರೆಸಿದರೆ ಕಾರ್ಯಕರ್ತರ ಆತ್ಮವಿಶ್ವಾಸ ಹೆಚ್ಚಲಿದೆ ಎನ್ನುವ ಮಾತುಗಳು ಕಾರ್ಯಕರ್ತರ ಸಮೂಹದಲ್ಲಿ ವ್ಯಕ್ತ ಆಗುತ್ತಿದೆ.

# ಬಿಜೆಪಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ನಗರದಲ್ಲಿ ಎಸ್.ಐ.ಆರ್ ಕಾರ್ಯದಲ್ಲಿನ ಲೋಪಗಳನ್ನು ಸರಿಪಡಿಸಿ, ನಗರದ ಪ್ರಮುಖ ಸ್ಥಳಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಭಾರತೀಯ ಜನತಾ ಪಕ್ಷದ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಧರಣಿ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಎಸ್.ಐ.ಆರ್. ಒಂದು ಮಹತ್ವದ ಸಾಂವಿಧಾನಿಕ ಪ್ರಕ್ರಿಯೆಯಾಗಿದೆ, ಆದರೆ ಕೆಲವರು ಈ ಆಶಯ ಬುಡಮೇಲು ಮಾಡುವ ಷಡ್ಯಂತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ವಿಜಯಪುರ ನಗರದಲ್ಲಿ ನಡೆಯುತ್ತಿರುವ ಎಸ್.ಐ.ಆರ್. ಕಾರ್ಯವು ಅತ್ಯಂತ ಅವ್ಯವಸ್ಥೆಯಿಂದ ಕೂಡಿದ್ದು, ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ದೂರಿದರು.

ಚುನಾವಣಾ ಆಯೋಗದ ನಿಯಮಗಳ ಪ್ರಕಾರ, ಸರ್ಕಾರದಿಂದ ನೇಮಕವಾಗಿರುವ ಬಿ.ಎಲ್.ಓಗಳು ಕಡ್ಡಾಯವಾಗಿ ಮನೆ-ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು, ಆದರೆ, ನಮ್ಮ ನಗರದಲ್ಲಿ ಬಹಳಷ್ಟು ಬಿ.ಎಲ್.ಓಗಳು ಮನೆಮನೆಗೆ ಭೇಟಿ ನೀಡುತ್ತಿಲ್ಲ, ಬದಲಾಗಿ, ಒಂದೇ ಕಡೆ ದೇವಸ್ಥಾನ, ಮಸೀದಿಗಳಲ್ಲಿ ಹಾಗೂ ಶಾಲೆಗಳಲ್ಲಿ ಕುಳಿತುಕೊಂಡು ತಮ್ಮಿಷ್ಟದಂತೆ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ ಎಂದು ಗಂಭೀರವಾಗಿ ಆರೋಪಿಸಿದರು.

ಮಹಾನಗರ ಪಾಲಿಕೆ ಮೇಯರ್ ಎಂ.ಎಸ್. ಕರಡಿ ಮಾತನಾಡಿ, ಈ ಪ್ರಕ್ರಿಯೆ ಸರ್ಮಪಕವಾಗಿ ನಡೆಯದೇ ಹೋದರೆ ಅನೇಕ ತೊಂದರೆ ಉಂಟಾಗುವುದು ಸಹಜ, ಇದರಿಂದಾಗಿ ನೈಜ ಹಾಗೂ ಅರ್ಹ ಮತದಾರರಿಗೆ ತೊಂದರೆಯಾಗುತ್ತಿದೆ.

ಇದರ ಜೊತೆಗೆ, ಮತದಾರರ ಮ್ಯಾಪಿಂಗ್ ಕಾರ್ಯವು ಕೂಡ ಸಂಪೂರ್ಣ ಅವೈಜ್ಞಾನಿಕವಾಗಿ ಹಾಗೂ ತಪ್ಪಾಗಿ ನಡೆದಿದೆ ಎಂದು ಆರೋಪಿಸಿದರು.

ಉಪಮೇಯರ್ ಸುಮಿತ್ರಾ ಜಾಧವ, ಡಾ. ಸುರೇಶ ಬಿರಾದಾರ, ಗೋಪಾಲ ಘಟಕಾಂಬಳೆ, ಉಮೇಶ್ ಕಾರಜೋಳ, ಭೀಮಾಶಂಕರ ಹದನೂರ, ಸಂಜಯ ಪಾಟೀಲ ಕನಮಡಿ, ಮಳುಗೌಡ ಪಾಟೀಲ್, ಶಿವರುದ್ರ ಬಾಗಲಕೋಟ, ರಾಹುಲ ಜಾಧವ, ರಾಜಶೇಖರ ಮಗಿಮಠ, ಸುನೀತಾ ಒಡೆಯರ, ಬಸವರಾಜ ಬೈಚಬಾಳ, ಹರ್ಷಗೌಡ ವಿಜಯ್ ಜೋಶಿ ಪಾಟೀಲ, ಕೃಷ್ಣ ಗುನ್ನಾಳಕರ, ಶ್ರೀಕಾಂತ ಶಿಂಧೆ, ರಾಜೇಶ ತಾವಸೆ, ವಿನಾಯಕ ದಹಿಂಡಿ, ರವೀಂದ್ರ ಲೋಣಿ, ಮಹೇಶ ಒಡೆಯರ, ಪಾಪುಸಿಂಗ್ ರಜಪೂತ, ಚಿನ್ನು ಚಿನಗುಂಡಿ, ವಿವೇಕ ತಾವರಗೇರಿ, ಸದಾಶಿವ ಭೂಟಾಳೆ, ಸಂಗಮೇಶ ಉಕ್ಕಲಿ, ವಿಜಯ ಹಿರೇಮಠ, ಆನಂದ ಮುಚ್ಚಂಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ಸಾಮಾಜಿಕ ನ್ಯಾಯದ ಮಹಾನ್ ಶಿಲ್ಪಿ, ರಾಷ್ಟ್ರನಾಯಕ ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆಯನ್ನು ಹಗರಿಬೊಮ್ಮನಹಳ್ಳಿಯಲ್ಲಿ ಭಾವಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಅವರ ಪವಿತ್ರ ಸ್ಮೃತಿಗೆ ಪುಷ್ಪಾರ್ಚನೆ ಸಲ್ಲಿಸಿ, ಅವರ ಆದರ್ಶಗಳನ್ನು ಸ್ಮರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಗರಿಬೊಮ್ಮನಹಳ್ಳಿ ಕ್ಷೇತ್ರದ ಜನಪ್ರಿಯ ಶಾಸಕರಾದ ನೇಮಿರಾಜ್ ನಾಯ್ಕ ಅವರು ಡಾ. ಬಾಬು ಜಗಜೀವನ್ ರಾಮ್ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ, "ಡಾ. ಬಾಬು ಜಗಜೀವನ್ ರಾಮ್ ಸರ್ಕಲ್" ಎಂಬ ನಾಮಫಲಕವನ್ನು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, "2012ರ ಅವಧಿಯಲ್ಲಿ ಇದೇ ಸ್ಥಳವನ್ನು ಡಾ. ಬಿ.ಆರ್. ಅಂಬೇಡ್ಕರ್ ಸರ್ಕಲ್ ಎಂದು ನಾಮಕರಣ ಮಾಡಿ ಸುಮಾರು ಮೂರು ವರ್ಷಗಳ ಕಾಲ ಅಲ್ಲಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುತ್ತಿತ್ತು. ನಂತರ ಕಾರಣಾಂತರಗಳಿಂದ ಅಂಬೇಡ್ಕರ್ ಸರ್ಕಲ್ ಅನ್ನು ಪಕ್ಕದ ಸ್ಥಳಕ್ಕೆ ಸ್ಥಳಾಂತರಿಸಲಾಯಿತು. ಈಗ ಎಲ್ಲಾ ಮಾದಿಗ ಸಂಘಟನೆಗಳು ಹಾಗೂ ದಲಿತಪರ ಸಂಘಟನೆಗಳ ಮನವಿಯ ಮೇರೆಗೆ ಈ ಸ್ಥಳಕ್ಕೆ ಡಾ. ಬಾಬು ಜಗಜೀವನ್ ರಾಮ್ ಸರ್ಕಲ್ ಎಂದು ನಾಮಕರಣ ಮಾಡಲಾಗಿದೆ. ಅವರ ಸ್ಮರಣಾರ್ಥ ಈ ನಾಮಫಲಕವನ್ನು ಉದ್ಘಾಟಿಸಿರುವುದು ನನಗೆ ಸಂತಸದ ಸಂಗತಿ" ಎಂದು ಹೇಳಿದರು.

ಇದೇ ವೇಳೆ ಈ ಸರ್ಕಲ್‌ಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಾಗಿ ಅವರು ಭರವಸೆ ನೀಡಿದರು. ಅಲ್ಲದೆ, ಈ ಜಾಗವು ಮೂಲತಃ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಸೇರಿದ್ದು, ಕೆಲವರು ಅತಿಕ್ರಮಣ ಮಾಡಿಕೊಂಡಿರುವುದು ಗಮನಕ್ಕೆ ಬಂದಿದೆ. ಅಕ್ರಮವಾಗಿ ನಿರ್ಮಿಸಿರುವ ಕಟ್ಟಡವನ್ನು ತೆರವುಗೊಳಿಸಿ, ಅದನ್ನು ಎಲ್ಲಾ ದಲಿತಪರ ಸಂಘಟನೆಗಳು ಸಭೆ, ಚರ್ಚೆ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಬಳಸಿಕೊಳ್ಳುವ ಮೀಟಿಂಗ್ ಹಾಲ್ ಆಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು, ಡಾ. ಬಾಬು ಜಗಜೀವನ್ ರಾಮ್ ಅವರು ದೇಶದ ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಶೋಷಿತ ಸಮುದಾಯಗಳ ಹಕ್ಕುಗಳಿಗಾಗಿ ಸಲ್ಲಿಸಿದ ಅಪಾರ ಸೇವೆಯನ್ನು ಸ್ಮರಿಸಿದರು. ಅವರ ಆದರ್ಶಗಳು ಇಂದಿನ ಪೀಳಿಗೆಗೆ ಮಾರ್ಗದರ್ಶಕವಾಗಿದ್ದು, ಅವರ ಚಿಂತನೆಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಈ ಕಾರ್ಯಕ್ರಮವು ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಂಘಟಿತ ಸಮಾಜ ನಿರ್ಮಾಣದ ಸಂಕಲ್ಪವನ್ನು ಮತ್ತೊಮ್ಮೆ ಬಲಪಡಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು.

# ಬಲಿಯಾದ ಬಳ್ಳಿ: ಮೌಢ್ಯದ ಸುಳಿಗೆ ಸಿಕ್ಕ ಮುಗ್ಧತೆ



ಕಥಾ ಹಂದರ

• ವೀರಣ್ಣ ಕಲಕೇರಿ
ಕೆಂಭಾವಿ

ಅದೊಂದು ಪುಟ್ಟ ಗ್ರಾಮ. ಹಸಿರು ಹಸಿರಾದ ಹೊಲಗದ್ದೆಗಳ ನಡುವೆ ಹಂಚಿಹೋದ ಹತ್ತಾರು ಮನೆಗಳು. ಆದರೆ ಆ ದಿನ ಆ ಹಳ್ಳಿಯ ಒಂದು ಮನೆಯಲ್ಲಿ ಮಾತ್ರ ನೀರವ ಮೌನ ಆವರಿಸಿತ್ತು. ಮನೆಯ ನಡುವಣ ಅಂಗಳದಲ್ಲಿ ಒಂದು ಮಣೆಯ ಮೇಲೆ ಯುವಕನ ಫೋಟೋ ಇಡಲಾಗಿತ್ತು. ಆ ಫೋಟೋಗೆ ಬಾಡಿದ ಹೂವಿನ ಹಾರ ಹಾಕಿ, ಅದರ ಮುಂದೆ ಹರಳೆಣ್ಣೆಯ ದೀಪವೊಂದು ಮಂದವಾಗಿ ಉರಿಯುತ್ತಿತ್ತು. ಆ ಫೋಟೋದಲ್ಲಿದ್ದವನು ಜಗಪ್ಪ.

ಸುತ್ತಲೂ ಹಳ್ಳಿಯ ನಾಲ್ಕಾರು ಜನ ಗಂಭೀರವಾಗಿ ಕುಳಿತಿದ್ದರು. ಅವರ ಮುಖದಲ್ಲಿ ಅಯ್ಯೋ ಎನ್ನುವ ಮರುಕವಿತ್ತು, ಆ ಮರುಕ ಹೋದ ಜೀವದ ಕುರಿತಲ್ಲ, ಸತ್ತ ಜಗಪ್ಪನ ತಂದೆ ತಾಯಿ ಕುರಿತೂ ಅಲ್ಲ. ಆದರೆ ಮನೆಯ ಒಂದು ಮೂಲೆಯಲ್ಲಿ ಗೋಡೆಗೆ ಒರಗಿ ಕುಳಿತಿದ್ದ ಆ ಜೀವ ಮಾತ್ರ ಎಲ್ಲರ ಕಣ್ಣು ಸೆಳೆಯುತ್ತಿತ್ತು. ಅದು ಮತ್ತಾರೂ ಅಲ್ಲ, ಜಗಪ್ಪನ ಹೆಂಡತಿ ಬಿಳಿ ಸೀರೆಯುಟ್ಟ ಬಾಲೆ ಲಕ್ಷ್ಮಿ. ಎಲ್ಲರ ಕಣ್ಣಿಗೆ ಅದು ಒಂದು ಜೀವಂತ ಗೊಂಬೆಯಂತೆ ಕಾಣುತ್ತಿದ್ದಳು. ಹದಿನೈದು ಹದಿನಾರು ವರ್ಷದ ಅವಳ ಮುಖದಲ್ಲಿ ದುಃಖವಿರಲಿಲ್ಲ, ಆಕ್ರೋಶವಿರಲಿಲ್ಲ, ಕೇವಲ ಶೂನ್ಯವಿತ್ತು. ಏಕೆ-ಂದರೆ ಭಾವನೆಗಳು ಅರಳುವ ಮುನ್ನವೇ ಅವಳು ಮೌಢ್ಯದ ಬಲಿಪಶುವಾಗಿದ್ದಳು.

ಇದು ಮನೆಯ ವಾತಾವರಣವಾದರೆ! ಆ ಕಡೆ ಊರ ಮುಂದಿನ ಅಗಸಿಯ ಬಸರಿ ಕಟ್ಟೆಯ ಮೇಲೆ ಕುಳಿತಿದ್ದ ಜನರ ಬಾಯಲ್ಲಿ ಜಗಪ್ಪನ ಪುರಾಣ ಹರಿಯುತ್ತಿತ್ತು. "ಜಗಪ್ಪ ಲಗ್ನ ಮಾಡಿಕೊಂಡು ಮೂರು ತಿಂಗಳಾಗಿಲ್ಲ, ಅಷ್ಟರಲ್ಲೇ ಜಗಕ್ಕೆ ವಿದಾಯ ಹೇಳಿಬಿಟ್ಟ ನೋಡು..." ಎಂದ ಕೆಂಚಪ್ಪ ಚಾ ಕುಡಿಯುತ್ತಾ.

ಪಕ್ಕದಲ್ಲಿದ್ದ ವಯಸ್ಸಾದ ಸಾಬಣ್ಣಜ್ಜ ನಿಟ್ಟುಸಿರು ಬಿಟ್ಟು, "ಜಗಪ್ಪಗ ಲಗ್ನ ಮಾಡುವುದು ಬಿಟ್ಟರೆ, ಪಾಪ ಆ ಹುಡುಗಿಗೆ ಯಾವುದಾದರೂ ಒಳ್ಳೆ ಹುಡ್ಗ ಸಿಗುತ್ತಿದ್ದ. ಈಗ ನೋಡು ಏನಗತಿ ಆಯ್ತು? ಹುಡುಗಿ ಜೀವನವನ್ನೇ ಹಾಳು ಮಾಡಿದರು. ಮೊದಲೇ ಗೊತ್ತಿತ್ತು ಜಗ್ಯಾಗ ಮೈತುಂಬ ಚಟಗಳಿದ್ದವು ಅಂತ. ಕೆಟ್ಟ ಸಂಘಕ್ಕೆ ಬಿದ್ದು ಊರ ಹೆಂಡಿ ತಿಂದು, ಕುಡಿಯುವುದು ಕಲಿತು, ಕೊನೆಗೆ ಕರುಳು ಸುಟ್ಟು ಸತ್ತು ಹೋದ. ತಾನು ಸಾಯುವುದೇನೋ ಸತ್ತ, ಹೋಗುವಾಗ ಮತ್ತೊಂದು ಜೀವಕ್ಕೆ ಉರುಲು ಇಟ್ಟು ಹೋದ ನೋಡು" ಎಂದ.

ನಿಜ; ಅವರ ಮಾತುಗಳಲ್ಲಿ ಸತ್ಯವಿತ್ತು. ಆದರೆ ಆ ಸತ್ಯ ಈಗ ಲಕ್ಷ್ಮೀಯ ಪಾಲಿಗೆ ನಿರುಪಯುಕ್ತವಾಗಿತ್ತು.

ಜಗಪ್ಪನಿಗೆ ಇನ್ನೂ ಹದಿನೆಂಟು ತುಂಬಿರಲಿಲ್ಲ. ಮೀಸೆ ಚಿಗುರಿದ್ದವನಿಗೆ, ಮೈತುಂಬಾ ದುಶ್ಚಟಗಳು ತುಂಬಿಕೊಂಡಿದ್ದವು. ತಂದೆ ಪರುತಪ್ಪ ಮತ್ತು ತಾಯಿ ಪಾರವ್ವ ಮಗನನ್ನು ತಿದ್ದುವ ಬದಲು 'ಲಗ್ನ ಮಾಡಿದರೆ ಸುಧಾರಿಸುತ್ತಾನೆ' ಎಂಬ ಹುಚ್ಚು ನಂಬಿಕೆಗೆ ಬಿದ್ದಿದ್ದರು. ಜೊತೆಗೆ ವಂಶದ ಕುಡಿಯ ಆಸೆ ಬೇರೆ. ಮಗನಿಗೆ ಹೆಣ್ಣು ಕೇಳಲು ಸುತ್ತ ಹತ್ತು ಹಳ್ಳಿ ತಿರುಗಿದರೂ ಜಗಪ್ಪನ ಉಡಾಳತನ ಗೊತ್ತಿದ್ದವರು ಯಾರೂ ಹೆಣ್ಣು ಕೊಡಲು ಒಪ್ಪಿರಲಿಲ್ಲ. ಆದರೆ ಪಕ್ಕದ ಹಳ್ಳಿಯ ಲಕ್ಷ್ಮೀಯ ತಂದೆ-ತಾಯಿಯ ಬಡತನ ಮತ್ತು ಮುಗ್ಧತೆ ಪರುತಪ್ಪನಿಗೆ ವರದಾನವಾಯಿತು. ಲಕ್ಷ್ಮೀಯ ಪೋಷಕರಿಗೆ ಇಲ್ಲ ಸಲ್ಲದ ನೂರು ಸುಳ್ಳು ಬಿತ್ತಿದರು. "ಜೋಡಿ ಚೆನ್ನಾಗಿದೆ, ನಮ್ಮ ಹುಡುಗನಿಗೂ ಹೊಲಮನೆ ಅದ" ಹ್ಯಾಂಗಾರ ಜೋಡಾಗಿ ಮಾಡ್ಕೊಂಡು ತಿಂತಾವ್ ಅಂತ" ಲಕ್ಷ್ಮಿ ತಂದೆ ತಾಯಿ ಮಗಳ ವಯಸ್ಸನ್ನೂ ಲೆಕ್ಕಿಸದೆ ತಾಳಿ ಕಟ್ಟಿಸಿದ್ದರು. ಲಕ್ಷ್ಮೀಗೆ ಮದುವೆ ಎಂದರೆ ಏನು ಎಂದೇ ತಿಳಿದಿರಲಿಲ್ಲ. ಓರಗೆಯ ಗೆಳತಿಯರ ಜೊತೆ ಕುಂಟಬಿಲ್ಲೆ ಆಡುತ್ತಿದ್ದ ಹಸುಳೆಯನ್ನು ಬಲವಂತವಾಗಿ ಗಂಡನ ಮನೆಗೆ ಅಟ್ಟಿದ್ದರು.

ಸ್ವಾರ್ಥದ ಮದುವೆಗೆ ಮರೆಮಾಚಿದ ಸತ್ಯದಿಂದ ಆ ಸಂದರ್ಭದಲ್ಲಿ ದಾಹದ ಹಸು ನೀರಿಗೆ ಹೋಗಿ ಮೊಸಳೆ ಬಾಯಿಗೆ ಬಿದ್ದಂಗ ಆಗಿತ್ತು ಲಕ್ಷ್ಮೀ ಬದುಕು.

ಗಂಡನ ಮನೆಗೆ ಬಂದ ಮೂರು ತಿಂಗಳಲ್ಲೇ ಜಗಪ್ಪನಿಗೆ ಕರುಳಿನ ಬೇನೆ ಶುರುವಾಯಿತು. ಅತಿಯಾದ ಕುಡಿತದಿಂದ ಅವನ ಕರುಳುಗಳು ಬೆಂದು ಹೋಗಿದ್ದವು. ನಾಲ್ಕು ದಿನ ನರಳಿ ನರಳಿ ಅವನು ಪ್ರಾಣ ಬಿಟ್ಟಾಗ, ಲಕ್ಷ್ಮೀ ಮಾತ್ರ ಏನೂ ಅರಿಯದೆ ದಿಕ್ಕಾಪಾಲಾಗಿ ನಿಂತಿದ್ದಳು.

ಆದರೆ ಕಥೆ ಇಲ್ಲಿಗೆ ಮುಗಿಯುವುದಿಲ್ಲ. ಜಗಪ್ಪನ ಸಾವಿನ ಹನ್ನೆರಡನೇ ದಿನ, ಪರುತಪ್ಪ ಒಂದು ರಹಸ್ಯವನ್ನು ಪಾರವ್ವನ ಮುಂದೆ ಬಿಚ್ಚಿಟ್ಟ. "ನೋಡು ಪಾರವ್ವ, ಮಗನ ಚಟದಿಂದ ಅವನು ಹೋದ. ಆದರೆ ಈ ಸೊಸೆಯನ್ನು ನಾವು ಬಿಡಬಾರದು. ಇವಳ ಅಪ್ಪ-ಅಮ್ಮ ಕೊಟ್ಟ ವರದಕ್ಷಿಣೆ ಮತ್ತು ಜಗಪ್ಪನ ಹೆಸರಲ್ಲಿರುವ ಹೊಲ ಇವಳ ಹತ್ತಿರ ಇರುತ್ತದೆ. ಇವಳನ್ನು ಈಗಲೇ ನಮ್ಮ ಮನೆಯ ಎರಡನೇ ಮಗ, 12 ವರ್ಷದ ರವಿಗೆ ಕಟ್ಟಿಹಾಕಬೇಕು. ಇಲ್ಲದಿದ್ದರೆ ಆಸ್ತಿ ಕೈತಪ್ಪುತ್ತದೆ." ಎನ್ನುತ್ತಿದ್ದ.

ಈ ಮಾತು ಬಾಗಿಲ ಹಿಂದೆ ನಿಂತಿದ್ದ ಲಕ್ಷ್ಮೀಯ ತಾಯಿಯ ಕಿವಿಗೆ ಬಿತ್ತು. ತನ್ನ ಮಗಳನ್ನು ಸಾಕು ಮಗಳಂತೆ ನೋಡಿಕೊಳ್ಳುತ್ತಾರೆ ಅಂದುಕೊಂಡಿದ್ದ ಅವಳಿಗೆ, ಇವರು ಮಗಳನ್ನು ಕೇವಲ ಆಸ್ತಿಯ ವಾರಸುದಾರಳನ್ನಾಗಿ ಅಥವಾ ಮನೆಗೆಲಸದವಳನ್ನಾಗಿ ನೋಡುತ್ತಿದ್ದಾರೆ ಎಂದು ತಿಳಿದಾಗ ಎದೆ ನಡುಗಿತು.

**ಹೊಸ ಉದಯ:** ಅಂದು ರಾತ್ರಿ, ಯಾರೂ ಇಲ್ಲದ ವೇಳೆ ಲಕ್ಷ್ಮೀಯ ತಾಯಿ ಅವಳ ಬಳಿ ಬಂದಳು. "ನಡಿ ಮಗಳೇ, ಇಲ್ಲಿ ಮುಗ್ಧತೆಗೆ ಬೆಲೆಯಿಲ್ಲ, ಬದುಕಿಗೆ ಬೆಲೆಯಿಲ್ಲ. ನಿನ್ನನ್ನು ಈ ಮನೆಯ ಕತ್ತಲೆಯಲ್ಲಿ ಹೂತುಹಾಕಲು ನಾನೊಪ್ಪುವುದಿಲ್ಲ," ಎಂದು ಮಗಳ ಕೈಹಿಡಿದು ಹೊರಟಳು.

ಮರುದಿನ ಬೆಳಿಗ್ಗೆ ಪರುತಪ್ಪ ಮತ್ತು ಪಾರವ್ವ ಎದ್ದಾಗ ಲಕ್ಷ್ಮೀ ಅಲ್ಲಿರಲಿಲ್ಲ. ಅವಳು ತನ್ನ ಆಟಿಕೆ ಗೊಂಬೆಯನ್ನು ಜಗಪ್ಪನ ಫೋಟೋದ ಮುಂದೆಯೇ ಬಿಟ್ಟು ಹೋಗಿದ್ದಳು. ಆ ಗೊಂಬೆ ಈಗ ಅವರ ಸ್ವಾರ್ಥಕ್ಕೆ ಸಾಕ್ಷಿಯಾಗಿತ್ತು. ಲಕ್ಷ್ಮೀ ಈಗ ಪಕ್ಕದ ಪಟ್ಟಣದ ಸರ್ಕಾರಿ ವಸತಿ ಶಾಲೆಯಲ್ಲಿ ಓದುತ್ತಿದ್ದಾಳೆ, ಹಿರಿಯರು ಸೇರಿ ಅವಳಿಗೆ ಕಟ್ಟಿದ್ದ 'ವಿಧವೆ' ಎಂಬ ಪಟ್ಟವನ್ನು ಅವಳು ಕಿತ್ತೆಸೆದಿದ್ದಾಳೆ.

ಗ್ರಾಮದ ಜನರು ಎಂದಿನಂತೆ ಕಟ್ಟೆಯ ಮೇಲೆ ಕುಳಿತು ಮಾತನಾಡುತ್ತಿದ್ದರು, ಆದರೆ ಈ ಬಾರಿ ಮಾತು ಬದಲಾಗಿತ್ತು: "ಪಾಪದ ಹುಡುಗಿ, ಒಳ್ಳೆ ಕೆಲಸ ಮಾಡಿದಳು. ಇಲ್ಲದಿದ್ದರೆ ಆ ಪಾಪಿಗಳ ಮನೆಯಲ್ಲಿ ಮೂಕ ಹಸುವಿನಂತೆ ಜೀವನ ಕಳೆಯಬೇಕಿತ್ತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)